ಸಂಪುಟ : 14 Volume | ಸಂಚಿಕೆ : 57 Issue | ಪುಟಗಳು : 08 Pages | ಗುರುವಾರ 04 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ । ಕಲ್ಬುರ್ಗಿ । ಯಾದರ್ಗಿ । ರಾಯಚೂರು । ಕೊಪ್ಪಳ । ಬಳ್ಳಾರಿ । ಬಾಗಲಕೋಟೆ । ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಗುಣಾತ್ಮಕವಾಗಿ ಯೋಚಿಸುವುದಿಲ್ಲ ಎಂದಾದಲ್ಲಿ ನೀವು ಕನಿಷ್ಠ ಪಕ್ಷ ಸುಮ್ಮನಾದರೂ ಇರಿ.

-- ಜೋಯೆಲ್ ಆಸ್ಟಿನ್ .

## ಕನ್ನಡಿಗರ ಕನಸು ನನಸು ಮಾಡುವ ಕರ್ತವ್ಯ ನನ್ನದು:ಡಿಕೆಶಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನನ್ನ ಹೆಗಲ ಮೇಲಿರುವುದು ಕೇವಲ ಮುಖ್ಯಮಂತ್ರಿಯ ಜವಾಬ್ದಾರಿಯಲ್ಲ, ಬದಲಿಗೆ ಕೋಟ್ಯಂತರ ಕನ್ನಡಿಗರ ಕನಸುಗಳನ್ನು ನನಸು ಮಾಡುವ ಪವಿತ್ರ ಕರ್ತವ್ಯ ಎಂದು ನೂತನ ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಬಳಿಕರಾಜ್ಯದ ಜನತೆಯನ್ನು ಉದ್ದೇಶಿಸಿ ಮೊದಲ ಎಕ್ಸ್ ಪೋಸ್ಟ್ ಹಂಚಿಕೊಂಡಿರುವ ಡಿಕೆಶಿ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದ್ದಾರೆ.ನನ್ನ ಬದುಕಿನ ಪ್ರತಿಯೊಂದು ಏಳುಬೀಳುಗಳಲ್ಲೂ ಧೈರ್ಯ ತುಂಬಿ, ನನ್ನನ್ನು ಹೆಗಲ ಮೇಲೆ ಹೊತ್ತು ಮುನ್ನಡೆಸಿದ ನನ್ನ ಪ್ರೀತಿಯ ಕರ್ನಾಟಕದ ಕೋಟ್ಯಂತರ ಜನತೆ ಹಾಗೂ ಕಾರ್ಯಕರ್ತ ಬಂಧುಗಳ ಆಶೀರ್ವಾದದಿಂದ ಲೋಕಭವನದಲ್ಲಿ ಇಂದು ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದೆ. ಈ ಕ್ಷಣದಲ್ಲಿ ನಾನು ನಿಮ್ಮೆಲ್ಲರ ಪ್ರೀತಿ ಹಾಗೂ ವಿಶ್ವಾಸಕ್ಕೆ ತಲೆಬಾಗುತ್ತೇನೆ.ಇಂದು ನನ್ನ ಹೆಗಲ ಮೇಲಿರುವುದು ಕೇವಲ ಮುಖ್ಯಮಂತ್ರಿಯ ಜವಾಬ್ದಾರಿಯಲ್ಲ, ಬದಲಿಗೆ ಕೋಟ್ಯಂತರ ಕನ್ನಡಿಗರ ಕನಸುಗಳನ್ನು ನನಸು ಮಾಡುವ ಪವಿತ್ರ ಕರ್ತವ್ಯ. ಈ ಅವಕಾಶವನ್ನು ನನಗೆ ಕರುಣಿಸಿದ ಹಿರಿಯರಿಗೆ, ಮಾರ್ಗದರ್ಶಕರಿಗೆ ಹಾಗೂ ನನ್ನ ಶಕ್ತಿಯಾಗಿ ನಿಂತ ಪ್ರತಿಯೊಬ್ಬರಿಗೂ ನನ್ನ ಹೃದಯಪೂರ್ವಕ ಕೃತಜ್ಞತೆಗಳು.ವೇಗವಾಗಿ ಬದಲಾಗುತ್ತಿರುವ ಇಂದಿನ ತಂತ್ರಜ್ಞಾನದ ಯುಗದಲ್ಲಿ, ಹೊಸ ಆಲೋಚನೆಗಳೊಂದಿಗೆ ನಮ್ಮ ಹೆಮ್ಮೆಯ ಕರ್ನಾಟಕವನ್ನು ಅಭಿವೃದ್ಧಿಯ ಅತ್ಯುನ್ನತ ಶಿಖರಕ್ಕೆ ಕೊಂಡೊಯ್ಯಬೇಕಿದೆ. ಈ ಸರ್ವತೋಮುಖ ಪ್ರಗತಿಯ ದಾರಿಯಲ್ಲಿ ರೈತರು, ಶ್ರಮಿಕರು, ಮಹಿಳೆಯರು, ವಿದ್ಯಾರ್ಥಿಗಳು, ಯುವಜನರು ಹಾಗೂ ಪ್ರತಿಯೊಬ್ಬ ನಾಗರಿಕರ ಸಹಭಾಗಿತ್ವ ನಮಗೆ ಮುಖ್ಯ.ಯಾವುದೇ ಒಬ್ಬ ವ್ಯಕ್ತಿಯಿಂದ ಬದಲಾವಣೆ ಸಾಧ್ಯವಿಲ್ಲ. ಆದರೆ, ನಾವೆಲ್ಲರೂ ಕೈಜೋಡಿಸಿದರೆ ಅಸಾಧ್ಯವಾದುದು ಯಾವುದೂ ಇಲ್ಲ. ಬನ್ನಿ, ನಮ್ಮ ಭವಿಷ್ಯದ ಪೀಳಿಗೆ ಹೆಮ್ಮೆ ಪಡುವಂತಹ ಸುಂದರ, ಸಮೃದ್ಧ ಮತ್ತು ಪ್ರಗತಿಪರ ಕರ್ನಾಟಕವನ್ನು ಕಟ್ಟೋಣ ಎಂದು ಸಿಎಂ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ.

## ಸಚಿವ ರಾಮಲಿಂಗಾ ರೆಡ್ಡಿ ಅವರಿಗೆ ಸಚಿವ ಸ್ಥಾನ ಕರ್ನಾಟಕ ರೆಡ್ಡಿ ಸಮುದಾಯದಲ್ಲಿ ಹರ್ಷ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಕರ್ನಾಟಕ ಸರ್ಕಾರದಲ್ಲಿ ಹಿರಿಯ ನಾಯಕ ಹಾಗೂ ಬಿಟಿಎಂ ಲೇಔಟ್ ಕ್ಷೇತ್ರದ ಶಾಸಕರಾದ ರಾಮಲಿಂಗಾ ರೆಡ್ಡಿ ಅವರಿಗೆ ಸಚಿವ ಸ್ಥಾನ ದೊರೆತಿರುವುದು ರಾಜ್ಯದ ರೆಡ್ಡಿ ಸಮುದಾಯದಲ್ಲಿ ಸಂತಸ ಮೂಡಿಸಿದೆ. ಅವರು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆ ಹಾಗೂ ರಾಜ್ಯ ರಾಜಕಾರಣದಲ್ಲಿ ಮಹತ್ವದ ಪಾತ್ರವಹಿಸಿಕೊಂಡು ಬಂದಿದ್ದಾರೆ. ಪ್ರಸ್ತುತ ಸಾರಿಗೆ ಸಚಿವರಾಗಿ ಜನಪರ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಗಮನ ಸೆಳೆದಿದ್ದಾರೆ.

ರೆಡ್ಡಿ ಸಮುದಾಯದ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ರಾಮಲಿಂಗಾ ರೆಡ್ಡಿಯವರ ಆಡಳಿತ ಅನುಭವ, ಸರಳ ವ್ಯಕ್ತಿತ್ವ ಮತ್ತು ಜನಸೇವೆಯನ್ನು ಪರಿಗಣಿಸಿ ಅವರಿಗೆ ಇನ್ನಷ್ಟು ಮಹತ್ವದ ಜವಾಬ್ದಾರಿಗಳನ್ನು ನೀಡಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ. ಅವರ ಸಚಿವ ಸ್ಥಾನದಿಂದ ಸಮುದಾಯಕ್ಕೆ ಮತ್ತಷ್ಟು ರಾಜಕೀಯ ಪ್ರಾತಿನಿಧ್ಯ ಸಿಕ್ಕಂತಾಗಿದೆ ಎಂಬ ಸಂತೋಷ ವ್ಯಕ್ತವಾಗುತ್ತಿದೆ.ರಾಜ್ಯದ ಅಭಿವೃದ್ಧಿ, ಸಾರಿಗೆ ವ್ಯವಸ್ಥೆಯ ಸುಧಾರಣೆ ಹಾಗೂ ಜನಪರ ಆಡಳಿತದಲ್ಲಿ ರಾಮಲಿಂಗಾ ರೆಡ್ಡಿಯವರ ಕೊಡುಗೆ ಗಮನಾರ್ಹವಾಗಿದೆ. ಸಮಾಜದ ಎಲ್ಲ ವರ್ಗಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವ ಅವರು ಮುಂದಿನ ದಿನಗಳಲ್ಲಿಯೂ ಜನಸೇವೆಯಲ್ಲಿ ಇನ್ನಷ್ಟು ಸಾಧನೆ ಮಾಡಲಿ ಎಂಬ ಆಶಯವನ್ನು ರೆಡ್ಡಿ ಸಮುದಾಯ ವ್ಯಕ್ತಪಡಿಸಿದೆ. ,ಅನುಭವ, ಸರಳತೆ ಮತ್ತು ಜನಪರ ಆಡಳಿತದ ಮೂಲಕ ರಾಮಲಿಂಗಾ ರೆಡ್ಡಿಯವರು ರಾಜ್ಯ ರಾಜಕಾರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಅವರ ಸಾಧನೆಗಳು ಮುಂದಿನ ಪೀಳಿಗೆಗೆ ಮಾದರಿಯಾಗಲಿ

## ವಿಧಾನಸೌಧದ ಮೆಟ್ಟಿಲುಗಳಿಗೆ ಅಡ್ಡಬಿದ್ದು ಪ್ರಜಾ ದೇಗುಲ ಪ್ರವೇಶಿಸಿದ ಸಿಎಂ ಡಿಕೆಶಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು




ಕರ್ನಾಟಕದ 34ನೇ ಅವಧಿಯ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ ಶಿವಕುಮಾರ್ ಪ್ರಮಾಣ ಸ್ವೀಕರಿಸಿದ್ದಾರೆ. ಪ್ರಮಾಣವಚನ ಸ್ವೀಕರಿಸಿದ ಬಳಿಕ ವಿಧಾನಸೌಧಕ್ಕೆ ಆಗಮಿಸಿದ ಡಿಕೆಶಿ, ಅಂಬೇಡ್ಕರ್, ಬಸವಣ್ಣ, ಗಾಂಧಿ ಸೇರಿದಂತೆ ಎಲ್ಲಾ ಮಹನೀಯರ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿದರು.

ನಂತರ ವಿಧಾನಸೌಧ ಆವರಣದಲ್ಲಿರುವ ಮುನೇಶ್ವರ ದೇಗುಲದಲ್ಲಿ ಪೂಜೆ ಸಲ್ಲಿಸಿದರು. ಬಳಿಕ ವಿಧಾನಸೌಧದ ಮೆಟ್ಟಿಲುಗಳಿಗೆ ನಮಸ್ಕರಿಸಿದರು. ವಿಧಾನಸೌಧದ ಮೆಟ್ಟಿಲುಗಳ ಮೇಲೆ ದೀರ್ಘದಂಡ ನಮಸ್ಕಾರ ಹಾಕಿದ ಡಿಕೆಶಿ ಉತ್ತರದ ನಂದಿ ದ್ವಾರದ ಮೂಲಕ ಪ್ರಜಾ ದೇಗುಲ ಪ್ರವೇಶಿಸಿದರು. ಬಳಿಕ ನೂತನ ಸಂಪುಟ ಸಚಿವರ ಜೊತೆ ಮುಖ್ಯಮಂತ್ರಿಯಾಗಿ ಮೊದಲ ಕ್ಯಾಬಿನೆಟ್ ಸಭೆ ನಡೆಸಿದರು.

# ಸಿಎಂ ಡಿಕೆಶಿ ಪ್ರಮಾಣವಚನ





• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ದೊಡ್ಡಲಹಳ್ಳಿ ಕೆಂಪೇಗೌಡ ಶಿವಕುಮಾರ್ (ಡಿಕೆ ಶಿವಕುಮಾರ್) ಬುಧವಾರ ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಎಂಟು ಬಾರಿ ಶಾಸಕರಾಗಿರುವ ಅವರು, ಇತರ 13 ಹಿರಿಯ ಶಾಸಕರೊಂದಿಗೆ, ಕರ್ನಾಟಕದ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಹಿರಿಯ ಕಾಂಗ್ರೆಸ್ ನಾಯಕ ಜಿ ಪರಮೇಶ್ವರ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ನೂರಾರು ಜನರ ಸಮ್ಮುಖದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.

ಶಿವಕುಮಾರ್ ವೀರ ಗಂಗಾಧರ ಅಜ್ಜಯ್ಯ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು, ಅವರು ನೆರದಿದ್ದವರಿಗೆ ನಮಸ್ಕರಿಸಿ ಅಜ್ಜಯ್ಯ ಅವರಿಗೆ ಪುಷ್ಪ ನಮನ ಸಲ್ಲಿಸಿದರು. ಭಾರತೀಯ ಸಂವಿಧಾನದ ಪ್ರತಿಯನ್ನು ಹಿಡಿದುಕೊಂಡು, ಶಿವಕುಮಾರ್ ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಹಿರಿಯ ಶಾಸಕರಾದ ಕೆ.ಎಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಎಂ.ಬಿ. ಪಾಟೀಲ್, ರಾಮಲಿಂಗ ರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ. ಖಾದರ್, ಈಶ್ವರ್ ಖಂಡ್ರೆ, ಡಾ. ಯತೀಂದ್ರ ಸಿದ್ದರಾಮಯ್ಯ, ಬೈರತಿ ಸುರೇಶ್ ಮತ್ತು ಶರಣ್ ಪ್ರಕಾಶ್ ಪಾಟೀಲ್ ಕೂಡ ಪ್ರಮಾಣ ವಚನ ಸ್ವೀಕರಿಸಿದರು.

ಯು.ಟಿ. ಖಾದರ್ ಮತ್ತು ಡಾ. ಯತೀಂದ್ರ ಹೊಸದಾಗಿ ಸೇರ್ಪಡೆಗೊಂಡಿದ್ದರೂ, ಉಳಿದವರು ಈ ಹಿಂದೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅವರಲ್ಲಿ ನಾಲ್ವರು ಶಾಸಕರು ಬೆಂಗಳೂರಿನವರು.

ಗ್ಲಾಸ್ ಹೌಸ್‌ಅನ್ನು ಕೆಂಪು ಮತ್ತು ಹಳದಿ ಬಣ್ಣಗಳಲ್ಲಿ ಅಲಂಕರಿಸಲಾಗಿತ್ತು, ಇದು ಕರ್ನಾಟಕದ ಧ್ವಜದ ಬಣ್ಣಗಳನ್ನು ಪ್ರತಿಬಿಂಬಿಸುತ್ತದೆ. ಜ್ಯೋತಿಷಿಯ ಸಲಹೆಯಂತೆ ವೇದಿಕೆಯನ್ನು ಪೂರ್ವಕ್ಕೆ ಮುಖ ಮಾಡಿ ಇರಿಸಲಾಗಿತ್ತು, ಇದನ್ನು ಶುಭವೆಂದು ಪರಿಗಣಿಸಲಾಗಿದೆ.

ವೇದಿಕೆಗೆ ಹೋಗುವ ಮೊದಲು, ಶಿವಕುಮಾರ್ ಪ್ರಮಾಣವಚನ ಸಮಾರಂಭಕ್ಕಾಗಿ ನೆರೆದಿದ್ದ ವಿವಿಧ ಧಾರ್ಮಿಕ ನಾಯಕರ ಆಶೀರ್ವಾದ ಪಡೆದರು. ಅವರಲ್ಲಿ ಕೆಲವರು ಅವರ ಮೇಲೆ ಹೂದಳಗಳನ್ನು ಸುರಿಸಿದರೆ, ಇತರರು ಆಶೀರ್ವಾದ ಮತ್ತು ಸದ್ಭಾವನೆಯ ಸಂಕೇತವಾಗಿ 'ರುದ್ರಾಕ್ಷ ಮಾಲೆ' ನೀಡಿದರು.

ಶಿವಕುಮಾರ್ ಅವರು ಕಂದು ಬಣ್ಣದ ರೇಷ್ಮೆ ಜುಬ್ಬಾ ಮತ್ತು ಕಾಂಗ್ರೆಸ್ ಪಕ್ಷದ ತ್ರಿವರ್ಣ ಧ್ವಜವನ್ನು ಹೊಂದಿರುವ ಶಾಲು ಧರಿಸಿದ್ದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು ಶಿವಕುಮಾರ್ ಗಣ್ಯರನ್ನು ಸ್ವಾಗತಿಸಿದರು. ಶಿವಕುಮಾರ್ ಅವರ ಪತ್ನಿ ಉಷಾ, ಮಗಳು ಐಶ್ವರ್ಯ ಡಿಕೆಎಸ್ ಹೆಗ್ಡೆ ಮತ್ತು ಇತರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಿರ್ಗಮಿತ ಸಿಎಂ ಸಿದ್ದರಾಮಯ್ಯ, ಮಾಜಿ ಸಿಎಂ ವೀರಪ್ಪ ಮೊಯ್ಲಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಕರ್ನಾಟಕ ಉಸ್ತುವಾರಿ) ರಣದೀಪ್ ಸಿಂಗ್ ಸುರ್ಜೇವಾಲಾ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಮತ್ತು ರಾಜ್ಯಸಭಾ ಸದಸ್ಯ ಕೆ.ಸಿ. ವೇಣುಗೋಪಾಲ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳ ಸಿಎಂ ವಿ.ಡಿ. ಸತೀಶನ್, ಹಿಮಾಚಲ ಪ್ರದೇಶ ಸಿಎಂ ಸುಖವಿಂದರ್ ಸಿಂಗ್ ಸುಖು ಮತ್ತು ಇತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಪ್ರಮಾಣವಚನ ಸಮಾರಂಭದಲ್ಲಿ ಭಾಗವಹಿಸಿದ್ದ ಗಣ್ಯರಲ್ಲಿ ಕರ್ನಾಟಕದ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಇನ್ಫೋಸಿಸ್ ಸಹ-ಸಂಸ್ಥಾಪಕ ನಾರಾಯಣ ಮೂರ್ತಿ ಮತ್ತು ಅವರ ಪತ್ನಿ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ; ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮಿ, ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ಅಧ್ಯಕ್ಷ ವೆಂಕಟೇಶ್ ಪ್ರಸಾದ್, ಮಾಜಿ ಭಾರತೀಯ ಕ್ರಿಕೆಟಿಗರಾದ ಮೊಹಮ್ಮದ್ ಅಜರುದ್ದೀನ್, ಅನಿಲ್ ಕುಂಬ್ಳೆ, ಖ್ಯಾತ ನಟ ಧನಂಜಯ, ಸಂಗೀತ ನಿರ್ದೇಶಕರಾದ ಅರ್ಜುನ್ ಜನ್ಯ ಮತ್ತು ಗುರುಕಿರಣ್ ಮತ್ತು ನಟಿ-ರಾಜಕಾರಣಿ ರಮ್ಯಾ ಹಾಗೂ ಇತರರಿದ್ದರು.


### ಪ್ರಮಾಣ ವಚನ ಸ್ವೀಕರಿಸಿದ ನೂತನ ಸಚಿವರು

- ಪರಮೇಶ್ವರ್ (ಡಿಸಿಎಂ)
- ಕೆ.ಹೆಚ್ ಮುನಿಯಪ್ಪ
- ಕೆ.ಜೆ ಜಾರ್ಜ್
- ಎಂ.ಬಿ ಪಾಟೀಲ್
- ರಾಮಲಿಂಗಾ ರೆಡ್ಡಿ
- ಸತೀಶ್ ಜಾರಕಿಹೊಳಿ
- ಕೃಷ್ಣಭೈರೇಗೌಡ
- ಪ್ರಿಯಾಂಕ್ ಖರ್ಗೆ
- ಯು.ಟಿ ಖಾದರ್
- ಈಶ್ವರ್ ಖಂಡ್ರೆ
- ಯತೀಂದ್ರ ಸಿದ್ದರಾಮಯ್ಯ
- ಬೈರತಿ ಸುರೇಶ್
- ಶರಣ ಪ್ರಕಾಶ್ ಪಾಟೀಲ್



## ಆರ್ಥಿಕ ಸಲಹೆಗಾರರಾಗಿ ಎಲ್.ಕೆ ಅತೀಕ್ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಆರ್ಥಿಕ ಸಲಹೆಗಾರರನ್ನಾಗಿ ನಿವೃತ್ತ ಐಎಎಸ್ ಅಧಿಕಾರಿ, ಪ್ರಸ್ತುತ 'ಬೆಂಗಳೂರು ಬಿಸಿನೆಸ್ ಕಾರಿಡಾರ್' ಅಧ್ಯಕ್ಷರಾಗಿರುವ ಎಲ್.ಕೆ ಅತೀಕ್ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಅಧಿಕೃತ ಅಧಿಸೂಚನೆ ಪ್ರಕಟಿಸಿದೆ. ಮುಖ್ಯ ಕಾರ್ಯದರ್ಶಿ ಹುದ್ದೆಗೆ ಸಮನಾದ ವೇತನ ಹಾಗು ಇತರ ಭತ್ತೆಗಳು ಈ ಹುದ್ದೆಗೆ ಸಿಗಲಿವೆ ಎಂದು ಆದೇಶದಲ್ಲಿ ಹೇಳಲಾಗಿದೆ.

## ರಾಜ್ಯದ ಎಲ್ಲಾ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಫ್ರೀ ಬಸ್ ಪಾಸ್



• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದ ಎಲ್ಲಾ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ನೂತನ ಸಿಎಂ ಡಿಕೆ ಶಿವಕುಮಾರ್ ಸಿಹಿ ಸುದ್ದಿ ಕೊಟ್ಟಿದ್ದಾರೆ.

ಅಧಿಕಾರ ಸ್ವೀಕರಿಸಿದ ಬಳಿಕ ವಿಧಾನಸೌಧದಲ್ಲಿಂದು ಮೊದಲ ಸುದ್ದಿಗೋಷ್ಠಿ ನಡೆಸಿದ ಅವರು, ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ಘೋಷಣೆ ಮಾಡಿದ್ದಾರೆ.

ಇಷ್ಟು ದಿನ ವಿದ್ಯಾರ್ಥಿನಿಯರಿಗೆ ಮಾತ್ರ ನೀಡುತ್ತಿದ್ದ ಬಸ್ ಪಾಸ್‌ಗಳನ್ನ ಶಾಲಾ ಬಾಲಕರು, ಕಾಲೇಜು ಯುವಕರಿಗೂ ವಿಸ್ತರಣೆ ಮಾಡಲು ನಿರ್ಧರಿಸಿದ್ದೇವೆ. ಆದ್ರೆ ಅವರು ವಿದ್ಯಾರ್ಥಿಗಳು ಅಂತ ತಿಳಿಯೋಕೆ ಅರ್ಜಿ ಸಲ್ಲಿಕೆ ಮಾಡಬೇಕಾಗುತ್ತದೆ ಎಂದು ಹೇಳಿದ್ದಾರೆ.

ಎಷ್ಟು ಸಾವಿರ ಕೋಟಿ ಕೋಟಿಯಾದ್ರೂ ನಾವು ಇದನ್ನೂ ಮಾಡುತ್ತೇವೆ. ವಿದ್ಯಾರ್ಥಿಗಳಿಗೂ ಯಾರೇ ಇರಲಿ ಅವರಿಗೆ ಉಚಿತ ಬಸ್ ಪಾಸ್ ಕೊಡಬೇಕು ಅಂತ ತೀರ್ಮಾನಿಸಿರುವುದಾಗಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.ರಾಜ್ಯಾದ್ಯಂತ 10,000 ಯುವ ಸಂಘಗಳನ್ನು ಆರಂಭಿಸಲಾಗುವುದು. ಪ್ರತಿ ಸಂಘಕ್ಕೂ ಸರ್ಕಾರದಿಂದ 10 ಲಕ್ಷ ರೂ. ಹಣ ನೀಡಲಾಗುವುದು ಎಂದು ನೂತನ ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ನನ್ನ ಕನಸಿನ ಚಿಂತನೆ. 10 ಸಾವಿರ ಭಾರತ್ ಜೋಡೊ ಯುವಕರ ಸಂಘ ರಚನೆಗೆ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಹೇಳಿದರು.ಪ್ರತಿ ಪಂಚಾಯತಿಗೆ ಒಂದು ಸಂಘ ಇರಲಿದೆ. ಸ್ಪೋರ್ಟ್ಸ್, ನಾಟಕ, ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ನಾಯಕತ್ವ ಬೆಳೆಸಲು ಇದನ್ನ ಸ್ಥಾಪನೆ ಮಾಡಲಾಗುವುದು. ಆ ಸಂಘಕ್ಕೆ 10 ಲಕ್ಷ ಹಣವನ್ನು ಸರ್ಕಾರ ಕೊಡಲಿದೆ ಎಂದು ತಿಳಿಸಿದರು.

ಸಂಘ ಹೇಗೆ ನಡೆಯುತ್ತದೆ? ಜಾಗ ಎಲ್ಲಿ ಅಂತ ನಿರ್ಧಾರ ಮಾಡಿದ್ದೇವೆ. ಇದಕ್ಕೆ ಸರ್ಕಾರವೇ ಹಣ ಕೊಡಲಿದೆ. ಯುವಕರು ಬೇರೆ ಕೆಲಸಕ್ಕೆ ಹೋಗದೆ ನಾಯಕತ್ವ ಬೆಳೆಸಲು, ಸಾಂಸ್ಕೃತಿಕತೆ ಬೆಳೆಯಲು, ಪ್ರತಿಭೆ ಗುರುತಿಸಲು ಸಂಘ ರಚನೆ ಮಾಡಲಾಗುವುದು. ಒಂದು ಪಂಚಾಯತಿಗೆ 10 ಲಕ್ಷ ಹಣವನ್ನು ಸರ್ಕಾರವೇ ಕೊಡಲಿದೆ ಎಂದರು.

## ಪರಿಷತ್‌ಗೆ ಹರಿಪ್ರಸಾದ, ಕಮಕನೂರ ಸೇರಿ ನಾಲ್ವರಿಗೆ ಟಿಕೇಟ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ವಿಧಾನಸಭೆಯಿಂದ ವಿಧಾನ ಪರಿಷತ್ ದ್ವೈವಾರ್ಷಿಕ ಚುನಾವಣೆಗೆ ಆಡಳಿತರೂಢ ಕಾಂಗ್ರೆಸ್ ತನ್ನ ಅಭ್ಯರ್ಥಿಗಳ ಪಟ್ಟಿಯನ್ನು ಬುಧವಾರ ಪ್ರಕಟಿಸಿದೆ.

ವಿಧಾನ ಪರಿಷತ್ ನ ಏಳು ಸ್ಥಾನಗಳಿಗೆ ಜೂನ್ 18 ರಂದು ನಡೆಯುವ ಚುನಾವಣೆಗೆ ಕಾಂಗ್ರೆಸ್ ಇಂದು ತನ್ನ ಪಾಲಿನ ನಾಲ್ಕು ಸ್ಥಾನಗಳಿಗೆ ಅಭ್ಯರ್ಥಿಗಳ ಹೆಸರನ್ನು ಘೋಷಣೆ ಮಾಡಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಅಭ್ಯರ್ಥಿಗಳನ್ನು ಅಂತಿಮಗೊಳಿಸಿದ್ದು, ಪಟ್ಟಿಯಲ್ಲಿ ಬಿಕೆ ಹರಿಪ್ರಸಾದ್, ತಿಪ್ಪಣ್ಣಪ್ಪ ಕಮಕನೂರು, ಪಿ.ವಿ. ಮೋಹನ್ ಮತ್ತು ಶಿವಣ್ಣ ಮಳವಳ್ಳಿ ಅವರ



ಹೆಸರಿದೆ.ಬಿ.ಕೆ.ಹರಿಪ್ರಸಾದ್ ಹಾಗೂ ತಿಪ್ಪಣ್ಣಪ್ಪ ಕಮಕನೂರು ಅವರನ್ನು ಮತ್ತೊಂದು ಅವಧಿಗೆ ಮುಂದುವರೆಸಿದ್ದು, ಇನ್ನುಳಿದ ಎರಡು ಸ್ಥಾನಗಳಿಗೆ ಹೊಸ ಮುಖಕ್ಕೆ ಮಣೆ ಹಾಕಲಾಗಿದೆ. ಇನ್ನು ನಾಲ್ಕು ಸ್ಥಾನಕ್ಕೂ ಒಬಿಸಿ ಸಮುದಾಯದವರಿಗೆ ಮಣೆ ಹಾಕಿರುವುದು ಅಚ್ಚರಿಗೆ ಕಾರಣವಾಗಿದೆ.

## ಕೆಪಿಸಿಸಿ ನೂತನ ಅಧ್ಯಕ್ಷರಾಗಿ ಬಿ.ಕೆ ಹರಿಪ್ರಸಾದ್ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಬಿ.ಕೆ ಹರಿಪ್ರಸಾದ್ ಅವರನ್ನ ನೇಮಕ ಮಾಡಿ ಎಐಸಿಸಿ ಅಧಿಕೃತ ಆದೇಶ ಹೊರಡಿಸಿದೆ. ಮುಖ್ಯಮಂತ್ರಿಯಾಗಿ ಡಿಕೆ ಶಿವಕುಮಾರ್ ಅಧಿಕಾರ ಸ್ವೀಕರಿದ ಬೆನ್ನಲ್ಲೇ ಕೆಪಿಸಿಸಿ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಹೀಗಾಗಿ ತೆರವಾದ ಸ್ಥಾನಕ್ಕೆ ಬಿ.ಕೆ ಹರಿಪ್ರಸಾದ್‌ಅವರನ್ನ ತಕ್ಷಣದಿಂದ ಜಾರಿಗೆ ಬರುವಂತೆ ನೇಮಕ ಮಾಡಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಧಿಕೃತ ಆದೇಶ ಹೊರಡಿಸಿದ್ದಾರೆ. ಅಲ್ಲದೇ ನಿರ್ಗಮಿತ ಅಧ್ಯಕ್ಷ ಡಿ.ಕೆ ಶಿವಕುಮಾರ್ ಅವರ ಕೊಡುಗೆಗಳನ್ನ ಪಕ್ಷವು ಶ್ಲಾಘಿಸುತ್ತದೆ ಎಂದು ಸ್ಮರಿಸಿದ್ದಾರೆ.

## ಬೀದರ ಪ್ರಾದೇಶಿಕ ಸಾರಿಗೆ ಅಧಿಕಾರಿಯಾಗಿ ಮಹ್ಮದ್ ಜಾಫರ್ ಸಾದಿಕ್

• ಮಲ್ಲಮ್ಮ ನುಡಿ ವಾರ್ತೆ ಬೀದರ

2026ರ ಮೇ 30 ರಂದು ಶ್ರೀ ಮಹ್ಮದ್ ಜಾಫರ್ ಸಾದಿಕ್ ಅವರು ಬೀದರ ಪ್ರಾದೇಶಿಕ ಸಾರಿಗೆ ಅಧಿಕಾರಿಯಾಗಿ ಪ್ರಭಾರವನ್ನು ವಹಿಸಿಕೊಂಡು ಕರ್ತವ್ಯಕ್ಕೆ ಹಾಜರಾಗಿ

ಕಾರ್ಯನಿರ್ವಹಿಸಲಾಗುತ್ತಿದೆ ಎಂದು ಬೀದರ ಪ್ರಾದೇಶಿಕ ಸಾರಿಗೆ ಅಧಿಕಾರಿ ಅವರು ತಿಳಿಸಿದ್ದಾರೆ.ಶ್ರೀ ಮಹ್ಮದ್ ಜಾಫರ್ ಸಾದಿಕ್ ಅವರು ಮೇ.30 ರಂದು ಅಪರಾಹ್ನಬೀದರ ಸಾರಿಗೆಕಛೇರಿಗೆ ಪ್ರಭಾರ ಪ್ರಾದೇಶಿಕ ಸಾರಿಗೆ ಅಧಿಕಾರಿಯಾಗಿ ಕರ್ತವ್ಯಕ್ಕೆ ಹಾಜರಾಗಿದ್ದು, ಜೊತೆಗೆ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ ಬಸವಕಲ್ಯಾಣ ಮತ್ತು ಹುಮನಾಬಾದ ತನಿಖಾ ಠಾಣೆಯ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

**ದೆಹಲಿಯ ರೆಸ್ಟೋರೆಂಟ್‌ನಲ್ಲಿ ಭಾರೀ ಬೆಂಕಿ : 17 ವಿದೇಶಿಯರು ಸೇರಿ 21 ಮಂದಿ ಸಾವು**

# ಬೀದರ್ ಕೃಷಿ ಇಲಾಖೆ : ಮುಂಗಾರು ಬೆಳೆ (ಸೋಯಾಬೀನ್) ಬಿತ್ತನೆಗೆ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್, ಜೂನ್ 03: ಪ್ರಸ್ತುತ ಕೆಲವು ಪ್ರದೇಶಗಳಲ್ಲಿ ಆರಂಭಿಕವಾಗಿ ಮಳೆಯಾಗಿದ್ದು, ಮುಂಗಾರು ಮಳೆ ಇನ್ನೂ ಸಂಪೂರ್ಣವಾಗಿ ಸ್ಥಿರವಾಗಿಲ್ಲ. ಮುಂದಿನ ಕೆಲವು ದಿನಗಳಲ್ಲಿ ಮುಂಗಾರು ಮಳೆ ವಿಳಂಬವಾಗುವ ಸಾಧ್ಯತೆಗಳಿರುವ, ಸಂದರ್ಭದಲ್ಲಿ, ರೈತರು ತಕ್ಷಣ ಬಿತ್ತನೆ ಮಾಡುವ ಬದಲು ಹವಮಾನ ಪರಿಸ್ಥಿತಿಯನ್ನು ಗಮನಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದು ಅವಶ್ಯಕವಾಗಿದೆ. ಸೋಯಾಬಿನ್ ಬೆಳೆಯಲ್ಲಿ ಉತ್ತಮ ಮೊಳಕೆ, ಸಮಾನ ಗಿಡಗಳ ಸ್ಥಾಪನೆ ಹಾಗೂ ಹೆಚ್ಚಿನ ಇಳುವರಿ ಪಡೆಯಲು ಕೆಳಗಿನ ಬಿತ್ತನೆ ಸಲಹೆಗಳನ್ನು ಅನುಸರಿಸಬೇಕೆಂದು ಬೀದರ್ ಜಂಟಿ ಕೃಷಿ ನಿರ್ದೇಶಕರು ಅವರು ತಿಳಿಸಿದ್ದಾರೆ.

ಮೊದಲು ಮಳೆಯ ನಂತರ ತಕ್ಷಣ ಬಿತ್ತನೆ ಮಾಡಬಾರದು. ಕೆಲವು ಸಣ್ಣ ಮಳೆಯಾದ ತಕ್ಷಣ ಬಿತ್ತನೆ ಮಾಡುವುದನ್ನು ತಪ್ಪಿಸಬೇಕು.

ಒಂದು ಅಥವಾ ಎರಡು ಮಳೆಯ ನಂತರ ದೀರ್ಘಕಾಲ ಮಳೆ ಇಲ್ಲದಿದ್ದರೆ ಬೀಜ ಮೊಳಕೆ ಸಮಸ್ಯೆ ಅಥವಾ ಬೆಳೆ ಒಣಗುವ ಸಾಧ್ಯತೆ ಇರುತ್ತದೆ. ಮುಂಗಾರು ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಿ. ನಿರಂತರವಾಗಿ ಉತ್ತಮ ಮಳೆಯಾದ ನಂತರ ಬಿತ್ತನೆ ಮಾಡುವುದು ಉತ್ತಮ. ಮಣ್ಣಿನಲ್ಲಿ 3–5 ಸೆಂ.ಮೀ ಆಳದವರೆಗೆ ಸಮರ್ಪಕ ತೇವಾಂಶ ಇರಬೇಕು.

ಮುಂಗಾರು ವಿಳಂಬವಾದಲ್ಲಿ ತೆಗೆದುಕೊಳ್ಳಬೇಕಾದ ಕ್ರಮಗಳು ಭೂಮಿ ಸಿದ್ಧಪಡಿಸಿ ಬಿತ್ತನೆಗೆ ಸಿದ್ಧವಾಗಿರಬೇಕು. ಹವಮಾನ ಮುನ್ಸೂಚನೆಯನ್ನು ದಿನನಿತ್ಯ ಪರಿಶೀಲಿಸಬೇಕು. ತೇವಾಂಶ ಸಂರಕ್ಷಣೆಗಾಗಿ ಭೂಮಿಯಲ್ಲಿ ಅನಗತ್ಯ ಉಳುಮೆ ತಪ್ಪಿಸಬೇಕು. ಮೊದಲ ಮಳೆಯ ತೇವಾಂಶವನ್ನು ಉಳಿಸಿಕೊಳ್ಳಲು ಅಂತರ ಬೇಸಾಯ ಅಥವಾ ಮಣ್ಣಿನ ಮೇಲ್ಮ ಸಡಿಲಗೊಳಿಸುವ ಕ್ರಮ ಅನುಸರಿಸಬೇಕು.

ಮಳೆಯ ಪ್ರಮಾಣ : ಸುಮಾರು 50–75 ಮಿ.ಮೀ ಪರಿಣಾಮಕಾರಿ ಮಳೆ ಬಂದ ನಂತರ ಬಿತ್ತನೆ ಮಾಡುವುದು, ಸೂಕ್ತ ಮಳೆ ಕೇವಲ ಮೇಲ್ಮ ತೇವಾಂಶವನ್ನು ಮಾತ್ರ ನೀಡಿದರೆ ಬಿತ್ತನೆ ಮುಂದೂಡುವುದು ಉತ್ತಮ.

ತಾಪಮಾನ : ಸೋಯಾಬೀನ್ ಬೀಜ ಮೊಳಕೆಗೆ ಸೂಕ್ತ ತಾಪಮಾನ 25–30 ಅತಿಯಾದ ಉಷ್ಣತೆ ಮತ್ತು ಕಡಿಮೆ ತೇವಾಂಶದಿಂದ ಮೊಳಕೆ ಪ್ರಮಾಣ ಕಡಿಮೆಯಾಗಬಹುದು. ಬೆಳೆಗಳಿಗೆ ತೇವಾಂಶದ ಕೊರತೆಯಿಂದ ಹಾನಿಯಾಗುತ್ತದೆ. ಆದ್ದರಿಂದ ಮುಂದಿನ ವಾರದ ಹವಾಮಾನ

ಒಣ ಹವಾಮಾನದ ಸಾಧ್ಯತೆ ಇದ್ದಲ್ಲಿ : ಬಿತ್ತನೆ ನಂತರ 7ರಿಂದ 10 ದಿನ ಮಳೆ ಇಲ್ಲದಿದ್ದರೆ, ಮೊಳಕೆಯಾದ ಪರಿಸ್ಥಿತಿ ಗಮನಿಸಿ ಬಿತ್ತನೆ ನಿರ್ಧಾರ ಕೈಗೊಳ್ಳಬೇಕು.

ಬೀಜೋಪಚಾರ ಕಡ್ಡಾಯ : ಬೀಜಗಳನ್ನು ಶಿಲೀಂಧ್ರನಾಶಕ ಮತ್ತು ಜೈವಿಕ ಗೊಬ್ಬರಗಳೊಂದಿಗೆ ಸಂಸ್ಕರಿಸಬೇಕು. ಇದರಿಂದ ಬೀಜದ ಆರೋಗ್ಯ ಹಾಗೂ ಆರಂಭಿಕ ಬೆಳವಣಿಗೆ ಉತ್ತಮವಾಗುತ್ತದೆ.

ನೀರಿನ ಹೊರಹರಿವು ವ್ಯವಸ್ಥೆ : ನಂತರದಲ್ಲಿ ಏಕಾಏಕಿ ಹೆಚ್ಚಿನ ಮಳೆಯಾದಲ್ಲಿ ನೀರು ನಿಲ್ಲದಂತೆ ಕಾಲುವೆ ವ್ಯವಸ್ಥೆ ಮಾಡಬೇಕು.

ವಿಳಂಬವಾದ ಬಿತ್ತನೆಗೆ ಪರ್ಯಾಯ ಕ್ರಮ : ಮುಂಗಾರು ಇನ್ನಷ್ಟು ವಿಳಂಬವಾದಲ್ಲಿ ಸ್ಥಳೀಯ ಕೃಷಿ ವಿಜ್ಞಾನಿಗಳ ಸಲಹೆಯಂತೆ ಕಡಿಮೆ ಅವಧಿಯ ತಳಿಗಳನ್ನು ಆಯ್ಕೆ ಮಾಡಬಹುದು.

ಒಟ್ಟಾರೆಯಾಗಿ ಪ್ರಸ್ತುತ ಬೀದರ ಜಿಲ್ಲೆಯಲ್ಲಿ ಚದುರಿದ ಮಳೆ ಹಾಗೂ ಗುಡುಗು–ಮಿಂಚಿನ ಸಾಧ್ಯತೆ ಕಂಡುಬರುತ್ತಿದ್ದು, ಮುಂಗಾರು ಇನ್ನೂ ಸ್ಥಿರವಾಗದ ಹಿನ್ನಲೆ ರೈತರು ಆತುರದಲ್ಲಿ ಸೋಯಾಬೀನ್ ಬಿತ್ತನೆ ಮಾಡದೇ. ನಿರಂತರ ಮಳೆ ಹಾಗೂ ಸಮರ್ಪಕ ಮಣ್ಣಿನ ತೇವಾಂಶ ಲಭ್ಯವಾದ ನಂತರ ಬಿತ್ತನೆ ಕೈಗೋಳ್ಳುವುದು ಸೂಕ್ತ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಡಿಯಲ್ಲಿ ಕನ್ನಡ ಉಳಿವಿಗಾಗಿ ಕನ್ನಡ ಭಾಷಾ ಅತಿಥಿ ಶಿಕ್ಷಕರಿಗೆ ಪ್ರಥಮ ಆದ್ಯತೆ ನೀಡಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲ್ಲೂಕಿನ ಗಡಿ ಭಾಗದ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಕನ್ನಡ ಬೋಧಿಸುವ ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷಾ ಕಲಿಕೆಗೆ ಹಿನ್ನಡೆಯಾಗುತ್ತಿರುವುದು ಕಂಡು ಬರುತ್ತಿದೆ. ಈ ಹಿನ್ನೆಲೆಯಲ್ಲಿ ಗಡಿ ಭಾಗದ ಶಾಲೆಗಳಿಗೆ ಅತಿಥಿ ಶಿಕ್ಷಕರ ಹಂಚಿಕೆಯಲ್ಲಿ ಪ್ರಥಮ ಆದ್ಯತೆ ನೀಡಬೇಕು ಎಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗಭೂಷಣ ಮಾಮಡಿ ಮನವಿ ಮಾಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ಶಿಕ್ಷಕರ ಕೊರತೆಯಿಂದ ಪಾಲಕರು ಕನ್ನಡ ಮಾಧ್ಯಮದಲ್ಲಿ ಮಕ್ಕಳನ್ನು ದಾಖಲಿಸಲು ಹಿಂದೇಟು ಹಾಕುತ್ತಿದ್ದು, ಕನ್ನಡ ಭಾಷೆಯ ಬೆಳವಣಿಗೆಗೆ ಧಕ್ಕೆಯಾಗುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು. ಅಲ್ಲದೆ, ಇಲಾಖೆಯ ಅಧಿಕಾರಿಗಳು ಮತ್ತು ಶಿಕ್ಷಕರ ಸಹಯೋಗದೊಂದಿಗೆ ಪೋಷಕರಲ್ಲಿ ಕನ್ನಡ ಮಾಧ್ಯಮ ಶಿಕ್ಷಣದ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿ.ಜಿ. ಹಳ್ಳದ ಮಾತನಾಡಿ, ಗಡಿ ಭಾಗದ ಕನ್ನಡ ಶಾಲೆಗಳಿಗೆ ಅತಿಥಿ ಶಿಕ್ಷಕರ ನೇಮಕಾತಿಯಲ್ಲಿ ಪ್ರಥಮ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು. ತಾಲ್ಲೂಕಿನಲ್ಲಿ ಸುಮಾರು 210 ಅತಿಥಿ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಮೊದಲ ಹಂತದಲ್ಲಿ 103 ಅತಿಥಿ ಶಿಕ್ಷಕರ ನೇಮಕಕ್ಕೆ ಆದೇಶ ಬಂದಿದೆ. ಕನ್ನಡ ಭಾಷೆ ಮತ್ತು ಕನ್ನಡ ಮಾಧ್ಯಮ ಶಿಕ್ಷಣದ ಬಲವರ್ಧನೆಗೆ ಇಲಾಖೆ ಸಂಪೂರ್ಣ ಸಹಕಾರ ನೀಡಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಘಟಗಕದ ಆಧ್ಯಕ್ಷ ಸಂತೋಷ ಬಿಜಿ ಪಾಟೀಲ, ಕಾರ್ಯದರ್ಶಿ ಭದ್ರೇಶ ಸ್ವಾಮಿ, ಕನ್ನಡಾಭಿಮಾನಿಗಳಾದ ದಿಲೀಪ ಶೇರಿಕಾರ, ಸಿದ್ರಾಮಪ್ಪ ಕುಡತೆ, ರಮೇಶ ಕನ್ನಾಡೆ, ಶಿಕ್ಷಣ ಸಂಯೋಜಕರಾದ ಮಲ್ಲಿಕಾರ್ಜುನ ಕನ್ನಾಳೆ, ಕ.ರಾ.ಪ್ರಾ.ಶಾ.ಶಿ. ಸಂಘದ ನೂತನ ಅಧ್ಯಕ್ಷ ಬಸವರಾಜ ದಾನಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಒಂದೇ ಕುಟುಂಬದ ಮೂವರ ಕೊಲೆ

ಪ್ರಯಾಗ್‌ರಾಜ್(ಉ.ಪ್ರ), ಮೇ3– ಉತ್ತರಪ್ರದೇಶದ ಪ್ರಯಾರಾಜ್‌ನಲ್ಲಿ ಒಂದೇ ಕುಟುಂಬದ ಮೂವರ ತಲೆಗೆ ಒಡೆದು ಕೊಲೆ ಮಾಡಿರುವ ಘಟನೆ ಕೊಟ್ವಾಲಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

# ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ್, ಜೂನ 03 : ಭಾರತೀಯ ಸಾಂಸ್ಕೃತಿಕ ಸಂಬಂಧಗಳ ಪರಿಷತ್ತು ಖಒಆಖಂಒ ಅಔಗಓ– ಅಖಖ ಅಗಖಖಗಖಂಖ ಖಇಂಖಖಔಓಖ(ಖಅಅಖ) ಹಾಗೂ ಕರ್ನಾಟಕ ಸರಕಾರದ ನಡುವಿನ ಒಡಂಬಡಿಕೆಯಂತೆ ಹೊರದೇಶಗಳಿಗೆ ಹಾಗೂ ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರಗಳಿಗೆ ಕಲಾತಂಡ ಕಳುಹಿಸುವ ಬಗ್ಗೆ ನೋಂದಣಿ ಮಾಡಿಕೊಳ್ಳಲು ಆಹ್ವಾನಿಸಲಾಗಿದೆ ಎಂದು ಬೀದರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಸಿದ್ದರಾಮ ಸಿಂದ್ದೆ ಅವರು ತಿಳಿಸಿದ್ದಾರೆ.

ಭಾರತೀಯ ಸಾಂಸ್ಕೃತಿಕ ಸಂಬಂಧಗಳ ಪರಿಷತ್ತು ಖಒಆಖಂಒ ಅಔಗಓ– ಅಖಖ ಅಗಖಖಗಖಂಖ ಖಇಂಖಖಔಓಖ(ಖಅಅಖ) ಹಾಗೂ ಕರ್ನಾಟಕ ಸರಕಾರದ ನಡುವೆ ಸಾಂಸ್ಕೃತಿ ಕಲೆ ಹಾಗೂ ಶಿಕ್ಷಣಕ್ಕೆ ಸಂಬಂಧಿಸಿದಂತೆ ಒಡಂಬಕೆಯನ್ನು ಮಾಡಿಕೊಳ್ಳಲಾಗಿದೆ. ಖಅಅಖ ಸಂಸ್ಥೆಯ ವತಿಯಿಂದ ರಾಜ್ಯ ಸರಕಾರದ ಸಾಂಸ್ಕೃತಿಕ ಕಲಾತಂಡಗಳು ಅಂತರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ವಿವಿಧ ಸಾಂಸ್ಕೃತಿಕ ಉತ್ಸವ ಹಾಗೂ ಕಾರ್ಯಕ್ರಮಗಳಿಗೆ ಕಳುಹಿಸಿಕೊಡುವ ಮೂಲಕ ಕಲಾತಂಡಗಳು ಹಾಗೂ ಕಲಾವಿದರನ್ನು ಇಒಕಂಒ–ಇಖ ಮಾಡುವುದರೊಂದಿಗೆ ಅವರ ಪ್ರತಿಭೆಯನ್ನು ಹೆಚ್ಚು ಪ್ರಚುರಪಡಿಸಲು ಅವಕಾಶವಾಗುತ್ತದೆ. ರಾಜ್ಯದಲ್ಲಿನ ಕಲಾವಿದರು ಹಾಗೂ ಕಲಾತಂಡಗಳು ನಿಗದಿತ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಬೀದರ ಜಿಲ್ಲೆಯ ಸಹಾಯಕ ನಿರ್ದೇಶಕರ ಕಚೇರಿಗೆ ನಮೂನೆಯನ್ನು ತಿತಿತಿ.ಇಚಿಟಿಟಿಚಿಜಚಿಡಿ. ಇಚಿಡಿಟಿಚಿಣಚಿಇಚಿ.ಂಡಿತಿ. ಟಿನಲ್ಲಿ 2026ರ ಜೂನ್ 12 ರಂದು ಸಂಜೆ 5 ಗಂಟೆಯ ಒಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರ, ಬೀದರ ಇವರನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶೈಕ್ಷಣಿಕ ಸಂಸ್ಥೆಗಳ ಬಳಿ ತಂಬಾಕು ಮಾರಾಟ ನಿಷೇಧ

# ಕಟ್ಟುನಿಟ್ಟಿನ ಅನುಷ್ಠಾನವಾಗಲಿ ಅಪರ ಜಿಲ್ಲಾಧಿಕಾರಿ.



ಮಲ್ಲಮ್ಮ ನುಡಿ ವಾರ್ತೆ

ಕಾರವಾರ, ಜೂ.3 :– ಜಿಲ್ಲೆಯ ಶೈಕ್ಷಣಿಕ ಸಂಸ್ಥೆಗಳ ಅಕ್ಕಪಕ್ಕದಲ್ಲಿ 100 ಗಜಗಳ ಒಳಗೆ ತಂಬಾಕು ಮಾರಾಟ ನಡೆಯದಂತೆ ಇನ್ನೂ ಹೆಚ್ಚಿನ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳುವಂತೆ ಹಾಗೂ ಕೋಟ್ಪಾ ಕಾಯಿದೆಯಲ್ಲಿನ ಸೂಚನೆಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ನಿರ್ದೇಶನ ನೀಡಿದರು.

ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಶೈಕ್ಷಣಿಕ ಸಂಸ್ಥೆಗಳ ಅಕ್ಕಪಕ್ಕದಲ್ಲಿ 100 ಗಜಗಳ ಒಳಗೆ ತಂಬಾಕು ಮಾರಾಟ ನಡೆಯುತ್ತಿರುವ ಕುರಿತಂತೆ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯ ಮೂಲಕ ಪರಿಶೀಲನೆ ಮಾಡಿ ವರದಿ ನೀಡುವಂತೆ ತಿಳಿಸಿದ ಅಪರ ಜಿಲ್ಲಾಧಿಕಾರಿಗಳು, ತಂಬಾಕು ಉತ್ಪನ್ನ ಮಾರಾಟದ ಅಂಗಡಿಗಳು ಕಂಡುಬಂದಲ್ಲಿ ಕೂಡಲೇ ಅವುಗಳನ್ನು ಅಲ್ಲಿಂದ ತೆರವುಗೊಳಿಸಬೇಕು. ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ನಿಯಂತ್ರಿಸಿ, ತಂಬಾಕು ಮುಕ್ತ ಶಾಲೆ/ಕಾಲೇಜು ಘೋಷಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು.

ಕೋಟ್ಪಾ ಕಾಯಿದೆ ಉಲ್ಲಂಘನೆಯ ಕುರಿತಂತೆ ಜಿಲ್ಲೆಯಾದ್ಯಂತ ಹೆಚ್ಚಿನ ಸಂಖ್ಯೆಯ ದಾಳಿಗಳನ್ನು ನಡೆಸಬೇಕು. ತಂಬಾಕು ಉತ್ಪನ್ನಗಳ ಉದ್ದಿಮೆದಾರರು, ಮಾರಾಟಗಾರು, ವ್ಯಾಪಾರಸ್ಥರು ಕಡ್ಡಾಯವಾಗಿ ಕಾಯಿದೆಯನ್ನು ಪಾಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಬೇಕು, ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಪ್ರತ್ಯೇಕ ಪರವಾನಗಿಯನ್ನು ನೀಡುವ ಕುರಿತಂತೆ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವ್ಯಾಪಾರಿಗಳಿಗೆ ಅರಿವು ಮೂಡಿಸಬೇಕು ಎಂದರು.

ಜಿಲ್ಲೆಯಲ್ಲಿ ಈಗಾಗಲೇ ತಂಬಾಕು ಮುಕ್ತ ಹಳ್ಳಿಗೆ ಸಂಬಂಧಿಸಿದಂತೆ ಪ್ರತೀ ತಾಲೂಕಿಗೆ 2 ಹಳ್ಳಿಗಳನ್ನು ಆಯ್ಕೆ ಮಾಡಿದ್ದು, ಅವುಗಳಲ್ಲಿ 8 ಹಳ್ಳಿಗಳನ್ನು ತಂಬಾಕು ಮುಕ್ತ ಹಳ್ಳಿ ಎಂದು ಘೋಷಣೆ ಮಾಡಿದ್ದು, ಉಳಿದ 16 ಹಳ್ಳಿಗಳನ್ನು ಶೀಘ್ರದಲ್ಲಿ ಘೋಷಣೆ ಮಾಡಲು ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳಬೇಕು. ಎಲ್ಲಾ ಸರ್ಕಾರಿ ಕಚೇರಿಗಳನ್ನು ಕೂಡಾ ತಂಬಾಕು ಮುಕ್ತ ಕಚೇರಿಯನ್ನಾಗಿ ಘೋಷಿಸಲು ಇರುವ ಮಾರ್ಗಸೂಚಿಗಳನ್ನು ಎಲ್ಲಾ ಇಲಾಖಾಧಿಕಾರಿಗಳು ತಮ್ಮ ಕಚೇರಿಗಳಲ್ಲಿ ಅನುಷ್ಠಾನಗೊಳಿಸಿ, ಈ ಬಗ್ಗೆ ವರದಿಯನ್ನು ಸಲ್ಲಿಸುವಂತೆ ಹಾಗೂ ಕಚೇರಿಗಳಲ್ಲಿ ತಂಬಾಕು ಮುಕ್ತ ಕಚೇರಿ ಎಂದು ನಾಮಫಲಕಗಳನ್ನು ಅಳವಡಿಸುವಂತೆ ಸೂಚನೆ ನೀಡಿದರು.

ಏಪ್ರಿಲ್ 2025 ರಿಂದ ಮಾರ್ಚ್ 2026 ರವರೆಗೆ ಜಿಲ್ಲೆಯಾದ್ಯಂತ ಕೋಟ್ಪಾ ಕಾಯಿದೆಯಡಿ ನಡೆಸಿದ ದಾಳಿಗಳಲ್ಲಿ 952 ಪ್ರಕರಣಗಳಲ್ಲಿ ಒಟ್ಟು 1,36,200 ದಂಡ ಸಂಗ್ರಹಿಸಿದ್ದು, ವಿವಿಧ ತಾಲೂಕುಗಳಲ್ಲಿ 252 ಮಾಹಿತಿ ಸಂವಹನ ಕಾರ್ಯಕ್ರಮ ಮತ್ತು 135 ಗುಂಪು ಚರ್ಚೆಗಳನ್ನು ಹಮ್ಮಿಕೊಳ್ಳಲಾಗಿದೆ. ಶಾಲಾ ಕಾಲೇಜುಗಳಲ್ಲಿ 104 ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ಜಿಲ್ಲಾ ಮತ್ತು ತಾಲೂಕು ಮಟ್ಟದ ಸಮನ್ವಯ ಸಮಿತಿ ಸಭೆಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ (ಪ್ರಭಾರ) ಕ್ಯಾ.ಡಾ.ರಮೇಶ್ ರಾವ್ ಮಾಹಿತಿ ನೀಡಿದರು.

ಸಭೆಯಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವ ಪ್ರಸಾದ್ ಗಾಂವಕರ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಸತೀಶ್ ನಾಯ್ಕ, ರಾಜ್ಯ ತಂಬಾಕು ನಿಯಂತ್ರಣ ಕೋಶದ ವಿಭಾಗೀಯ ಸಂಯೋಜಕ ಮಹಾಂತೇಶ್ ಉಳ್ಳಾಗೆಡ್ಡಿ ಹಾಗೂ ವಿವಿಧ ಇಲಾಖೆಗಳ ಅನುಷ್ಠಾನಾಧಿಕಾರಿಗಳು ಇದ್ದರು.

# ಚೌಂಡಿ ಗ್ರಾಮದಲ್ಲಿ 'ಖೇತ್ ಬಚಾವೋ' ಕೃಷಿ ಜಾಗೃತಿ ಅಭಿಯಾನಕ್ಕೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬೀದರ್: ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಮಹತ್ವಾಕಾಂಕ್ಷೆಯ 'ಖೇತ್ ಬಚಾವೋ' (ಕೃಷಿ ಉಳಿಸಿ) ಅಭಿಯಾನದ ಅಂಗವಾಗಿ ಬೀದರ ಜಿಲ್ಲೆಯ ಚೌಂಡಿ ಗ್ರಾಮದಲ್ಲಿ ಪ್ರಗತಿ ಪರ ರೈತ ಮಹಿಳೆ ಶ್ರೀಮತಿ ಪೂಜಾ ಗಂಡ ಸಂತೋಷ ಧೂಮನ್‌ಸುರೆ ಇವರ ತೋಟದಲ್ಲಿ ಕೃಷಿ ಜಾಗೃತಿ ಹಾಗೂ ತಾಂತ್ರಿಕ ಸಲಹಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಐಸಿಎಆರ್–ಅಟಾರಿ (ICAR-ATARI) ಬೆಂಗಳೂರು ಇವರ ನಿರ್ದೇಶನದಂತೆ, ಬೀದರ್ ಕೃಷಿ ವಿಜ್ಞಾನ ಕೇಂದ್ರ (KVK) ಹಾಗೂ ಕೃಷಿ ಇಲಾಖೆಯ ಜಂಟಿ ಸಹಯೋಗದಲ್ಲಿ ಜೂನ್ 30 ರವರೆಗೆ ಈ ಬೃಹತ್ ಆಂದೋಲನ ನಡೆಯಲಿದೆ ಎಂದು ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ. ರಾಜಶೇಖರ್ ಬಸನಾಯಕ ತಿಳಿಸಿದ್ದಾರೆ.

ಮಣ್ಣಿನ ಆರೋಗ್ಯ ರಕ್ಷಣೆಗೆ ಆದ್ಯತೆ

ಪ್ರಸ್ತುತ ದಿನಗಳಲ್ಲಿ ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದಾಗಿ ಮಣ್ಣಿನ ಫಲವತ್ತತೆ ಕ್ಷೀಣಿಸುತ್ತಿದ್ದು, ಇದನ್ನು ತಡೆಗಟ್ಟುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಡಾ. ಚಂದ್ರಕಾಂತ್ ಅವರು ಮಾತನಾಡಿ, "ರೈತರು ಕಡ್ಡಾಯವಾಗಿ ಮಣ್ಣಿನ ಪರೀಕ್ಷೆ ಮಾಡಿಸಿ, ಅದರ ಆಧಾರದ ಮೇಲೆ ಸಮತೋಲಿತ ರಸಗೊಬ್ಬರಗಳನ್ನು ಬಳಸಬೇಕು. ಸಮಗ್ರ ಪೋಷಕಾಂಶ ನಿರ್ವಹಣೆ (ಖಓಓ), ಹಸಿರು ಗೊಬ್ಬರ ಹಾಗೂ ಸಾವಯವ–ಜೈವಿಕ ಗೊಬ್ಬರಗಳ ಬಳಕೆಯಿಂದ ಮಾತ್ರ ಮಣ್ಣಿನ ಆರೋಗ್ಯವನ್ನು ದೀರ್ಘಕಾಲ ಕಾಪಾಡಲು ಸಾಧ್ಯ," ಎಂದು ಮಣ್ಣಿನ ಫಲವತ್ತತೆ ಸಂರಕ್ಷಣೆಯ ಕುರಿತು ಸವಿಸ್ತಾರವಾಗಿ ವಿವರಿಸಿದರು.

ಸುಸ್ಥಿರ ಬೆಳೆ ಮತ್ತು ಸಸ್ಯ ಸಂರಕ್ಷಣೆ

ಇದೇ ಸಂದರ್ಭದಲ್ಲಿ ಸಸ್ಯ ಸಂರಕ್ಷಣೆ (ಕಟಚಿಟಿಣ ಕಡಿಂಣಜಛಿಣಂಟಿ) ತಜ್ಞರಾದ ಡಾ. ಶಿವಕುಮಾರ್ ಅವರು ಮಾತನಾಡಿ, "ಉತ್ಪಾದನಾ ವೆಚ್ಚವನ್ನು ಕಡಿತಗೊಳಿಸಿ ಹೆಚ್ಚಿನ ಇಳುವರಿ ಪಡೆಯಲು ವೈಜ್ಞಾನಿಕ ಕೃಷಿ ಪದ್ಧತಿಗಳು ಅತ್ಯಗತ್ಯ. ರೈತರು ಕೀಟ ಮತ್ತು ರೋಗ ಬಾಧೆಗಳ ನಿಯಂತ್ರಣಕ್ಕೆ ರಾಸಾಯನಿಕಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ, ಜೈವಿಕ ಹಾಗೂ ನೈಸರ್ಗಿಕ ಕೃಷಿ ಆಧಾರಿತ ಸಸ್ಯ ಸಂರಕ್ಷಣಾ ಉಪಾಯಗಳನ್ನು ಅಳವಡಿಸಿಕೊಳ್ಳಬೇಕು," ಎಂದು ತಾಂತ್ರಿಕ ಸಲಹೆಗಳನ್ನು ನೀಡಿದರು.

30 ದಿನಗಳ ಕಾಲ ಗ್ರಾಮ ಮಟ್ಟದಲ್ಲಿ ಸಂವಾದ

ದೇಶಾದ್ಯಂತ ಅನುಷ್ಠಾನಗೊಳ್ಳುತ್ತಿರುವ ಈ ಯೋಜನೆಯಡಿ, ಮುಂದಿನ 30 ದಿನಗಳ ಕಾಲ ಬೀದರ್ ಜಿಲ್ಲೆಯಾದ್ಯಂತ ಗ್ರಾಮೀಣ ಭಾಗಗಳಲ್ಲಿ ಸರಣಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕೃಷಿ ವಿಜ್ಞಾನಿಗಳು ಮತ್ತು ಅಧಿಕಾರಿಗಳ ತಂಡವು ಹಳ್ಳಿಗಳಿಗೆ ನೇರ ಭೇಟಿ ನೀಡಿ ರೈತರೊಂದಿಗೆ ನೇರ ಸಂವಾದ, ತಾಂತ್ರಿಕ ಸಲಹಾ ಶಿಬಿರಗಳು ಹಾಗೂ ಮಾಹಿತಿ ಪ್ರಾತ್ಯಕ್ಷಿಕೆಗಳನ್ನು (Demonstrations) ನಡೆಸಿಕೊಡಲಿದ್ದಾರೆ.

ಮುಖ್ಯಸ್ಥರ ಕರೆ: "ಮಣ್ಣಿನ ಆರೋಗ್ಯವೇ ದೇಶದ ಸಂಪತ್ತು. ಜಿಲ್ಲೆಯ ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಈ ಅಭಿಯಾನದಲ್ಲಿ ಭಾಗವಹಿಸಿ, ವಿಜ್ಞಾನಿಗಳ ತಾಂತ್ರಿಕ ಸಲಹೆಗಳನ್ನು ಪಡೆದು ತಮ್ಮ ಜಮೀನಿನ ಮಣ್ಣಿನ ಗುಣಮಟ್ಟವನ್ನು ಕಾಪಾಡಿಕೊಳ್ಳಬೇಕು ಹಾಗೂ ಕೃಷಿ ಉತ್ಪಾದಕತೆಯನ್ನು ಹೆಚ್ಚಿಸಿಕೊಳ್ಳಬೇಕು," ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ರಾಜಶೇಖರ್ ಬಸನಾಯಕ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಈ ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಶ್ರೀ.ಗುರು ಬಸಯ್ಯಾ ಸ್ವಾಮಿ ಹಾಗೂ ರೈತ ಮಹಿಳೆಯರು ಮತ್ತು ರೈತರು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡರು.

# ಹಿರಿಯ ನಾಗರೀಕರಿಂದ ಪರಿಸರ ದಿನಾಚರಣೆ ಅಂಗವಾಗಿ ಸ್ವಚ್ಛತಾ ಶ್ರಮಧಾನ.

ಮಲ್ಲಮ್ಮ ನುಡಿ ವಾರ್ತೆ

ಕಾರವಾರ, ಜೂ.03–ಹಿರಿಯ ನಾಗರಿಕರ ಹಿತರಕ್ಷಣಾ ಸಂಘ(ರಿ) ಕಾರವಾರ ವತಿಯಿಂದ ಜೂ.5 ರಂದು ವಿಶ್ವಪರಿಸರ ದಿನಾಚರಣೆ ಆಚರಣೆ ಅಂಗವಾಗಿ ಬೆಳಗ್ಗೆ 7 ಗಂಟೆಗೆ ಬಸ್ ನಿಲ್ದಾಣದಲ್ಲಿ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸುಭಾಷ ಸರ್ಕಲ್‌ನಲ್ಲಿ ಪರಿಸರ ಅರಿವು ಜಾಥಾಕ್ಕೆ ಚಾಲನೆ ನೀಡಿ, ಜಾಥಾವು ಸವಿತಾ ಸರ್ಕಲ್ ಮುಖಾಂತರ ಕೋಡಿಭಾಗ ಮಾರ್ಗವಾಗಿ, ಪೂರ್ಣಿಮಾ ಹೋಟೆಲ್ , ಸರ್ದಾರ್ಜಿ ಪೆಟ್ರೋಲ್ ಬಂಕ್ ಮಾರ್ಗಕ್ಕೆ ಮೂಲಕ ಗಾಂಧೀಜಿ ಉದ್ಯಾನವನ ತಲುಪಲಿದ್ದು, ಅಲ್ಲಿ ಕನ್ನಡ, ಕೊಂಕಣಿ ಹಾಗೂ ಇಂಗ್ಲೀಷ್ ಭಾಷೆಯಲ್ಲಿ ರಚಿಸಲಾದ ಪರಿಸರ ಗೀತೆಗಳನ್ನು ಹಾಡುತ್ತಾ, ಘೋಷಣೆ ಕೂಗುತ್ತಾ ಸಾರ್ವಜನಿಕರಲ್ಲಿ ಪರಿಸರ ಜಾಗ್ರತೆ ಮೂಡಿಸಲಾಗುವುದು ಎಂದು ಹಿರಿಯ ನಾಗರಿಕರ ಹಿತರಕ್ಷಣಾ ಸಂಘದ ಪ್ರಕಟಣೆ ತಿಳಿಸಿದೆ.

# ಕರ್ನಾಟಕ ರಾಜ್ಯ ಸರ್ಕಾರಿ ಎಸ್ಸಿ, ಎಸ್ಟಿ 6ನೇ ಐಕ್ಯತಾ ಸಮಾವೇಶ ಯಶಸ್ವಿಗೊಳಿಸಲು ಪ್ರಶಾಂತ ಸೋಮವಂಶಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಜೂನ್ 6 ರಂದು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿರುವ ಕರ್ನಾಟಕ ರಾಜ್ಯ ಸರ್ಕಾರಿ ಎಸ್ಸಿ, ಎಸ್ಟಿ ನೌಕರರ ಸಮನ್ವಯ ಸಮಿತಿಯ 6ನೇ ರಾಜ್ಯ ಮಟ್ಟದ ಐಕ್ಯತಾ ಸಮಾವೇಶದಲ್ಲಿ ತಾಲೂಕಿನ ಸರ್ಕಾರಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಕರ್ನಾಟಕ ಎಸ್ಸಿ, ಎಸ್ಟಿ ನೌಕರರ ಸಂಘದ ಕಮಲನಗರ ತಾಲೂಕು ಶಾಖಾ ಕಾರ್ಯದರ್ಶಿ ಪ್ರಶಾಂತ ಸೋಮವಂಶಿ ಮನವಿ ಮಾಡಿದ್ದಾರೆ.

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾರ್ಯಕ್ರಮದ ಕರಪತ್ರ ಬಿಡುಗಡೆ ಮಾಡಿ ಅವರು ಮಾತನಾಡಿದರು.

**ಪ್ರಮುಖ ಹಕ್ಕೊತ್ತಾಯಗಳ ಮಂಡನೆ**

ರಾಜ್ಯದ ಎಸ್ಸಿ ಮತ್ತು ಎಸ್ಟಿ ನೌಕರರ ಒಗ್ಗಟ್ಟನ್ನು ಪ್ರದರ್ಶಿಸುವ ಮತ್ತು ನೌಕರರ ವಿವಿಧ ಹಕ್ಕೊತ್ತಾಯಗಳನ್ನು ಸರ್ಕಾರಕ್ಕೆ ಸಲ್ಲಿಸುವ ಉದ್ದೇಶದಿಂದ ಜೂನ್ 6ರ ಶನಿವಾರದಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ (ಗೇಟ್ ನಂ. 8) ಈ ಬೃಹತ್ ಸಮಾವೇಶವನ್ನು ಆಯೋಜಿಸಲಾಗಿದೆ.

**ವಿಚಾರ ಸಂಕಿರಣ ಮತ್ತು ಸ್ಮರಣ ಸಂಚಿಕೆ**

ಸಮಾವೇಶದ ಅಂಗವಾಗಿ 'ಸಂವಿಧಾನದ ಆಶಯಗಳು, ಎಸ್ಸಿ, ಎಸ್ಟಿ ನೌಕರರು ಮತ್ತು ಅಧಿಕಾರಿಗಳ ಜವಾಬ್ದಾರಿ' ಎಂಬ ವಿಷಯದ ಕುರಿತು ವಿಶೇಷ ವಿಚಾರ ಸಂಕಿರಣವನ್ನು ಹಮ್ಮಿಕೊಳ್ಳಲಾಗಿದೆ. ದಕ್ಷಿಣ ಭಾರತದ ವಿವಿಧ ರಾಜ್ಯಗಳ ಎಸ್ಸಿ, ಎಸ್ಟಿ ನೌಕರರ ಸಂಘಟನೆಗಳ ಮುಖಂಡರು ಸಹ ಈ ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ. ಇದೇ ಸಂದರ್ಭದಲ್ಲಿ ವಿಶೇಷ ಸ್ಮರಣ ಸಂಚಿಕೆಯೊಂದನ್ನು ಹೊರತರಲು ನಿರ್ಧರಿಸಲಾಗಿದೆ ಎಂದು ಅವರು ತಿಳಿಸಿದರು.

**ತನು–ಮನ–ಧನದ ಸಹಕಾರಕ್ಕೆ ಕರೆ**

ಪಟ್ಟಣದ ಕೆಪಿಎಸ್ ಶಾಲೆಯ ಪ್ರಭಾರಿ ಮುಖ್ಯಗುರುಗಳಾದ ಸಂಜೀವಕುಮಾರ ಡೋಂಗರೆ ಮಾತನಾಡಿ, ಈ ಬೃಹತ್ ಸಮಾವೇಶವನ್ನು ಐತಿಹಾಸಿಕವಾಗಿ ಯಶಸ್ವಿಗೊಳಿಸಲು

> "ಈ ಸಮಾವೇಶದಲ್ಲಿ ರಾಜ್ಯದ ಜನಪ್ರಿಯ ಮುಖ್ಯಮಂತ್ರಿಗಳು, ಸಚಿವರು, ಶಾಸಕರು, ಹಿಂದುಳಿದ ಹಾಗೂ ಅಲ್ಪಸಂಖ್ಯಾತ ಸಮುದಾಯಗಳ ಮುಖಂಡರು, ಪ್ರಗತಿಪರ ಸ್ವಾಮೀಜಿಗಳು ಮತ್ತು ಚಿಂತಕರು ಭಾಗವಹಿಸಲಿದ್ದಾರೆ."
> **–ಪ್ರಶಾಂತ ಸೋಮವಂಶಿ, ತಾಲೂಕು ಕಾರ್ಯದರ್ಶಿ**

ಸಮುದಾಯದ ನೌಕರರು ತನು, ಮನ, ಧನದ ಸಹಾಯ ನೀಡಬೇಕು. ಸ್ಮರಣ ಸಂಚಿಕೆಗೆ ಲೇಖನ ಹಾಗೂ ಜಾಹೀರಾತುಗಳನ್ನು ನೀಡಿ ಸಹಕರಿಸಬೇಕು ಎಂದು ಕೋರಿದರು.

**ಉಪಸ್ಥಿತರಿದ್ದ ಪ್ರಮುಖರು:**

ಈ ಸಂದರ್ಭದಲ್ಲಿ ಮಾಧ್ಯಮಿಕ ಶಾಲೆಯ ಮುಖ್ಯಗುರು ಲಿಂಗಾನಂದ ಮಹಾಜನ, ಕಮಲನಗರ ಸರ್ಕಾರಿ ಪ್ರೌಢಶಾಲಾ ಸಂಘದ ಅಧ್ಯಕ್ಷ ಸೂರ್ಯಕಾಂತ ಬಿರಾದಾರ, ತಾಲೂಕು ಸರ್ಕಾರಿ ಪ್ರಾಥಮಿಕ ಶಾಲಾ ಸಂಘದ ಅಧ್ಯಕ್ಷ ವಿಜಯಕುಮಾರ ನುದನೂರೆ, ರೋಹಿದಾಸ ಮೇತ್ರೆ ಸೇರಿದಂತೆ ಇನ್ನಿತರ ಪ್ರಮುಖರು ಉಪಸ್ಥಿತರಿದ್ದರು.

# ವಿಧಾನ ಸಭಾಧ್ಯಕ್ಷ ಸ್ಥಾನಕ್ಕೆ ಯು.ಟಿ.ಖಾದರ್ ರಾಜೀನಾಮೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜೂ.3–ಸಂಪುಟ ಸೇರುವುದು ಖಚಿತವಾಗುತ್ತಿದ್ದಂತೆ ಮಂಗಳೂರು ಉಳ್ಳಾಲಕ್ಷೇತ್ರದ ಶಾಸಕ ಯು.ಟಿ.ಖಾದರ್ ವಿಧಾನ ಸಭಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಕಾಂಗ್ರೆಸ್ ಪಕ್ಷದ ಕಚೇರಿಗೆ ಭೇಟಿ ನೀಡಿದ್ದಾರೆ.

ಇತ್ತೀಚೆಗೆ ದೆಹಲಿಗೆ ಭೇಟಿ ನೀಡಿದ್ದ ಯು.ಟಿ.ಖಾದರ್ ಅವರು ಹೈಕಮಾಂಡ್ ಮೇಲೆ ಒತ್ತಡ ಹೇರಿದ್ದರು. ಅದರ ಪರಿಣಾಮ ಸಂಪುಟ ಸೇರ್ಪಡೆಯಾಗುತ್ತಿದ್ದಾರೆ. ಈ ಮೊದಲು ವಿಧಾನಸಭಾಧ್ಯಕ್ಷರಾಗಿ ಖಾದರ್ ಅವರು ಕಲಾಪ ನಡೆಸುವಾಗಲೆಲ್ಲಾ ಮುಂದಿನ ಅವಧಿಯ ಸಚಿವರು ಎಂದು ವಿರೋಧ ಪಕ್ಷಗಳ ಸದಸ್ಯರು ರೇಗಿಸುತ್ತಿದ್ದರು.

ವಿಧಾನಸಭಾಧ್ಯಕ್ಷರಾಗಿ ಕಳೆದ ಮೂರು ವರ್ಷಗಳಲ್ಲಿ ಖಾದರ್ ಅವರ ಕರ್ತವ್ಯ, ನಿರ್ವಹಣೆ ಭಿನ್ನ ಹಾಗೂ ವಿಶೇಷವಾಗಿತ್ತು. ಕರಾರುವಕ್ಕಾದ ಕಲಾಪ ನಡೆಸುವ ಮೂಲಕ ಗಮನ ಸೆಳೆದಿದ್ದರು.

ವಿಧಾನಸಭೆಯಸಚಿವಾಲಯಕ್ಕಾಗಿ ಖರೀದಿಸಲಾಗಿದ್ದ ಎರಡು ಕಾರುಗಳನ್ನು ಇಂದು ಲೋಕಾರ್ಪಣೆ ಮಾಡಿದ ಬಳಿಕ, ವಿಧಾನ ಸಭೆಯ ಉಪಾಧ್ಯಕ್ಷ ರುದ್ರಪ್ಪ ಲಮಾಣಿಯವರಿಗೆ ತಮ ರಾಜೀನಾಮೆಯನ್ನು ಯು.ಟಿ.ಖಾದರ್ ನೀಡಿದ್ದಾರೆ. ರುದ್ರಪ್ಪ ಲಮಾಣಿ ಕೂಡ ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದರು. ಆದರೆ ಅವರಿಗೆ ಅವಕಾಶ ಸಿಕ್ಕಿಲ್ಲ. ರಾಜೀನಾಮೆ ನೀಡಿರುವುದನ್ನು ಖಾದರ್ ಅವರು ಕೆಪಿಸಿಸಿ ಕಚೇರಿಗೆ ಭೇಟಿ ನೀಡಿದ ವೇಳೆ ಸ್ಪಷ್ಟಪಡಿಸಿದ್ದಾರೆ. ರಾಜ್ಯಪಾಲರು ಮತ್ತು ವಿಧಾನ ಪರಿಷತ್ತಿನ ಸಭಾಪತಿಯವರನ್ನು ಭೇಟಿ ಮಾಡಿ, ಧನ್ಯವಾದ ಹೇಳಿದ್ದೇನೆ. ಮೂರು ವರ್ಷ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಲು ಸಾಧ್ಯವಾಗಿರಲಿಲ್ಲ. ಇಂದು ತಮಗೆ ತವರು ಮನೆಗೆ ಬಂದಷ್ಟೆ ಸಂತೋಷವಾಗುತ್ತಿದೆ ಎಂದು ತಿಳಿಸಿದರು.

ಸಚಿವ ಸ್ಥಾನದಲ್ಲಿ ಯಾವುದೇ ಖಾತೆಕೊಟ್ಟರೂ ನಿಭಾಯಿಸುತ್ತೇನೆ. ರಾಷ್ಟ್ರ ನಾಯಕರು, ರಾಜ್ಯ ನಾಯಕರು ತಮ ಮೇಲೆ ವಿಶ್ವಾಸ ಇರಿಸಿದ್ದಾರೆ. ಈವರೆಗೂ ತಮಗೆ ಹಲವಾರು ಜವಾಬ್ದಾರಿಗಳನ್ನು ನೀಡಲಾಗಿತ್ತು. ಮುಂದಿನ ದಿನಗಳಲ್ಲಿ ಸಚಿವ ಸ್ಥಾನದ ಜವಾಬ್ದಾರಿಯನ್ನು ಮತ್ತಷ್ಟು ಪ್ರಾಮಾಣಿಕತೆಯಿಂದ ನಿರ್ವಹಿಸುವುದಾಗಿ ತಿಳಿಸಿದ್ದಾರೆ.

# ಇಂದು ಬದ್ದೇಪಲ್ಲಿಗೆ ಕೇಂದ್ರ ಹಣಕಾಸು ಸಾಂಸ್ಥಿಕ ವ್ಯವಹಾರಗಳ ಖಾತೆ ಸಚಿವರ ಭೇಟಿ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಕೇಂದ್ರ ಹಣಕಾಸು ಹಾಗೂ ಸಾಂಸ್ಥಿಕ ವ್ಯವಹಾರಗಳ ಖಾತೆ ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರು ಇದೇ ಜೂನ್ 4 ರಂದು ಬೆಳಿಗ್ಗೆ 10 ಗಂ–ಟೆಗೆ ಯಾದಗಿರಿ ಜಿಲ್ಲೆಯ ಬದ್ದೇಪಲ್ಲಿ ಗ್ರಾಮಕ್ಕೆ ಆಗಮಿಸಿ, ಯಾದಗಿರಿ ರೈತರ ತರಬೇತಿ ಕೇಂದ್ರ ಹಾಗೂ ಸಿಎಫ್ ಸಿ ಉದ್ಘಾಟಿಸುವರು. ನಂತರ ಬೆಳಿಗ್ಗೆ 11–15 ಗಂಟೆಗೆ ರಾಯಚೂರು ಶಕ್ತಿನಗರ ಆರ್. ಟಿ ಪಿ ಎಸ್ ಅತಿಥಿಗೃಹಕ್ಕೆ ತೆರಳುವರು. ನಂತರ ಮಧ್ಯಾಹ್ನ 12 ಗಂಟೆಗೆ ರಾಯಚೂರು ಮತ್ತು ಯಾದಗಿರಿ ಜಿಲ್ಲೆ ಗೆ ಸಂಬಂಧಿಸಿದಂತೆ ಮಹತ್ವಾಕಾಂಕ್ಷಿ ಜಿಲ್ಲೆ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಂಜೆ 4 ಗಂಟೆಗೆ ಹೊಸಪೇಟೆಗೆ ಪ್ರಯಾಣ ಬೆಳೆಸುವರು.

# ವಿಶೇಷ ಚೇತನರಿಗೆ ಸಕಾಲಕ್ಕೆ ಸೌಲಭ್ಯ ಕಲ್ಪಿಸಿ: ರಾಹುಲ್ ತುಕಾರಾಮ ಪಾಂಡ್ವೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ವಿಕಲಚೇತನರಿಗಾಗಿ ಸರ್ಕಾರದ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಬರುವ ಯೋಜನೆಗಳ ಲಾಭ ಸಕಾಲಕ್ಕೆ ದೊರಕಿಸುವ ಜೊತೆಗೆ ವಿಕಲಚೇತನರಿಗಾಗಿ ಮೀಸಲಾದ ಅನುದಾನವನ್ನು ಸಮರ್ಪಕವಾಗಿ ಬಳಸುವಂತೆ ಜಿಲ್ಲಾಧಿಕಾರಿ ಶ್ರೀ ರಾಹುಲ್ ತುಕಾರಾಮ ಪಾಂಡ್ವೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಮಟ್ಟದ ಸಮಿತಿ ಮತ್ತು ವಿಕಲಚೇತನರ ಕುಂದು ಕೊರತೆ ಸಭೆ ನಡೆಸಿ ಅವರು ಮಾತನಾಡಿದರು. ಅಂಗವಿಕಲರ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ವಿಶೇಷಚೇತನರ ಅನುದಾನದಡಿ ಸಿಗಬೇಕಾದ ಸೌಲಭ್ಯ ಹಾಗೂ ಮೀಸಲು ಅನುದಾನವನ್ನು ಸಮರ್ಪಕವಾಗಿ ಬಳಸುವಂತೆ ನೋಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲೆಯ ವಿಕಲಚೇತನರು ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಸುತ್ತಿರುವ ಸಂಘ–ಸಂಸ್ಥೆರವರು ಪಾಲ್ಗೊಂಡಿದ್ದರು. ವಿಕಲಚೇತನರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಜಿಲ್ಲಾಧಿಕಾರಿಗಳು ಆಲಿಸಿದರು. ಜಿಲ್ಲೆಯ ಸುರಪುರ ತಾಲೂಕಿನ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ ನಿಗಮದ ಬಸ್‌ಗಳಲ್ಲಿ ವಿಕಲಚೇತನರು ಹಾಗೂ ಹಿರಿಯ ನಾಗರಿಕರಿಗೆ ಮೀಸಲಿರಿಸಿದ ಆಸನಗಳು ಲಭ್ಯವಿಲ್ಲದ ಕುರಿತು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಾಗ, ಜಿಲ್ಲಾಧಿಕಾರಿಗಳು ಮನವಿಗೆ ಸ್ಪಂದಿಸಿ ತಕ್ಷಣ ಕ್ರಮಕೈಗೊಳ್ಳಲು ವಿಭಾಗೀಯ ನಿಯಂತ್ರಕರು, ಕೆ.ಕೆ.ಆರ್.ಟಿ.ಸಿ ರವರಿಗೆ ಸೂಚಿಸಿದರು.

ಶ್ರವಣ ದೋಷವಿರುವ ವಿಕಲಚೇತನರಿಗೆ ಬೆರಾಟೆಸ್ಟ್ ಹಾಗೂ ಸ್ಪೆನಲ್ ಕಾರ್ಡ ವಿಕಲಚೇತನರಿಗೆ ಫಿಸಿಯೋಥೆರಪಿ ಚಿಕಿತ್ಸೆ ಕುರಿತು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ವಡಗೇರಾ ತಾಲೂಕಿನ ವಿಕಲಚೇತನ ವ್ಯಕ್ತಿಯ ಮನೆಯಲ್ಲಿ ಶೌಚಾಲಯ ಇಲ್ಲದ ಕುರಿತು ಸಭೆಯಲ್ಲಿ ವಿನಂತಿಸಿದಾಗ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಪಂಚಾಯತ್ ಯಾದಗಿರಿ ರವರು ತಕ್ಷಣ ಮನವಿದಾರರ ಮನವಿಯನ್ನು ಸಿಟಿಜೆನ್ ಪೋರ್ಟಲ್‌ನಲ್ಲಿ ನೊಂದಾಯಿಸಿ ವಿಕಲಚೇತನರಿಗೆ ಶೌಚಾಲಯ ನಿರ್ಮಿಸಿಕೊಡಲು ಸೂಕ್ತ ಕ್ರಮ ಕೈಗೊಳ್ಳಲು ತಾಲೂಕು ಪಂಚಾಯತ್ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಗೆ ಆಗಮಿಸಿದ ಜಿಲ್ಲೆಯ ವಿವಿಧ ತರಹದ ವಿಕಲಚೇತನರು ತಮಗೆ ಜಾ–ರಿಯಾದ ಪಿಂಚಣಿ ರದ್ದಾದ/ ತಡೆ ಹಿಡಿದ ಕುರಿತು ಸಭೆಯ ಗಮನಕ್ಕೆ ತಂದರು ಕುಂದು ಕೊರತೆ ಸಭೆಯಲ್ಲಿ ವಸತಿ ಯೋಜನೆಯಲ್ಲಿ ಮೀಸಲಾತಿ, ಬಸ್ ನಿಲ್ದಾಣಗಳ ಮಳಿಗೆಗಳ ವಿತರಣೆಯಲ್ಲಿ ಮಿಸಲಾತಿ, ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಅಂಗವಿಕಲರ ಭವನ ನಿರ್ಮಿಸಲು ಮಾನ್ಯ ಜಿಲ್ಲಾಧಿಕಾರಿಗಳು, ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಪಂಚಾಯತ್ ಯಾದಗಿರಿ ರವರಿಗೆ ಮನವಿ ಸಲ್ಲಿಸಿದರು. ಠಾಣಗುಂದಿ ಗ್ರಾಮ ಕಾರ್ಯಕರ್ತರು,

ಕೊನೆಯದಾಗಿ ವಿಶ್ವನಾಥರೆಡ್ಡಿ, ಗ್ರಾಮಿಣ ಪುನರ್ವಸತಿ ಪಂಚಾಯತ್ ರವರು ವಿಕಲಚೇತನರ ಕುಂದು ಕೊರತೆ ಸಭೆಯಲ್ಲಿ ಎಲ್ಲ ವಿಕಲಚೇತನರ ಸಮಸ್ಯೆಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಸ್ಥಳದಲ್ಲಿ ಕ್ರಮ ಕೈಗೊಂಡಿದ್ದಕ್ಕೆ ಹರ್ಷ ವ್ಯಕ್ತಪಡಿಸಿ ಜಿಲ್ಲೆಯ ಎಲ್ಲ ವಿಕಲಚೇತನರ ಪರವಾಗಿ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಯಾದಗಿರಿ ರವರಿಗೆ ಧನ್ಯವಾದ ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಧರಣೇಶ್, ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀ ಮರಿಯಪ್ಪ, ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧೋದ್ದೇಶ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ಎ.ಪಿ.ಡಿ & ಆರ್.ಪಿ.ಡಿ. ಸಂಸ್ಥೆರವರು ಭಾಗವಹಿಸಿದ್ದರು. ಅಂಗವಿಕಲ ಕಲ್ಯಾಣಾಧಿಕಾರಿ ಶ್ರೀ ಶರಣಪ್ಪ ಸ್ವಾಗತಿಸಿ ಅವಶ್ಯಕ ಮಾಹಿತಿ ನೀಡಿದರು.

## ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಪ್ರಮಾಣವಚನ ಹಿನ್ನೆಲೆ ಕಾಂಗ್ರೆಸ್‌ನಲ್ಲಿ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ಚಿಕ್ಕಬಳ್ಳಾಪುರ:ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ಇಂದು ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ಕಾಂಗ್ರೆಸ್ ಘಟಕದಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು. ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿ ಆವರಣದಲ್ಲಿ ಮುಖ್ಯಮಂತ್ರಿ ಪ್ರಮಾಣವಚನ ಸಮಾರಂಭದ ನೇರ ಪ್ರಸಾರವನ್ನು ವೀಕ್ಷಿಸಿದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಿದರು. ಕಾಂಗ್ರೆಸ್ ಹಾಗೂ ಮಹಿಳಾ ಕಾಂಗ್ರೆಸ್ ಕಾರ್ಯಕರ್ತೆಯರು ಸಂಭ್ರಮದಲ್ಲಿ ಭಾಗವಹಿಸಿ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಶುಭಾಶಯಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರೆಸ್ ಸೂರಿ(ಸುರೇಶ್)ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿಯಾಗಿ ಆರಂಭದಿಂದಲೂ ಶ್ರಮವೇ ಉಜ್ವಲ ಭವಿಷ್ಯದ ಮೂಲಮಂತ್ರ ಎಂಬ ನಂಬಿಕೆಯಿಂದ ಪಕ್ಷ ಸಂಘಟನೆಗೆ ದುಡಿದಿರುವ ಡಿ.ಕೆ. ಶಿವಕುಮಾರ್ ಅವರು ಇಂದು ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿರುವುದು ಎಲ್ಲ ಕಾಂಗ್ರೆಸ್ ಕಾರ್ಯಕರ್ತರಿಗೆ ಸಂತಸ ತಂದಿದೆ. ಅನೇಕ ಯುವ ನಾಯಕರನ್ನು ಪಕ್ಷದಲ್ಲಿ ಬೆಳೆಸಿರುವ ಅವರು ಪಕ್ಷದ ಕಟ್ಟಾಳುವಾಗಿ ನಿರಂತರವಾಗಿ ಸೇವೆ ಸಲ್ಲಿಸಿದ್ದಾರೆ. ಅವರ ಆಡಳಿತದಲ್ಲಿ ರಾಜ್ಯ ಮತ್ತಷ್ಟು ಅಭಿವೃದ್ಧಿಯತ್ತ ಸಾಗಲಿದೆ ಎಂದು ಹೇಳಿದರು.

ಮೀನುಗಾರರ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಮಹಿಳಾ ಕಾಂಗ್ರೆಸ್ ನ ಮಂಗಳಪ್ರಕಾಶ್ ಮಾತನಾಡಿ, ಸಾಮಾನ್ಯ ಕಾರ್ಯಕರ್ತನಾಗಿ ತಳಮಟ್ಟದಿಂದ ಪಕ್ಷವನ್ನು ಕಟ್ಟಿಬೆಳೆಸಿದ ಡಿ.ಕೆ. ಶಿವಕುಮಾರ್ ಅವರು ಹಲವು ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿ ಕೆಪಿಸಿಸಿ ಅಧ್ಯಕ್ಷರಾಗಿ ಯಶಸ್ವಿ ನಾಯಕತ್ವ ನೀಡಿದ್ದರು. ಕಾಂಗ್ರೆಸ್ ಪಕ್ಷದಲ್ಲಿ ಸಾಮಾನ್ಯ ಕಾರ್ಯಕರ್ತನೂ ಮುಖ್ಯಮಂತ್ರಿ ಹುದ್ದೆಗೇರಬಹುದು ಎಂಬುದಕ್ಕೆ ಅವರೇ ಉತ್ತಮ ಉದಾಹರಣೆ. ಸಂಕಷ್ಟದ ಸಂದರ್ಭಗಳಲ್ಲಿಯೂ ಪಕ್ಷದ ಮೇಲಿನ ನಿಷ್ಠೆಯನ್ನು ಕಾಪಾಡಿಕೊಂಡು ಇನ್ನಷ್ಟು ಶಕ್ತಿಯುತವಾಗಿ ಪಕ್ಷದ ಅಭಿವೃದ್ಧಿಗೆ ಶ್ರಮಿಸಿದ್ದಾರೆ ಕೋವಿಡ್ ಅವಧಿಯಲ್ಲಿ ವಿರೋಧ ಪಕ್ಷದಲ್ಲಿದ್ದರೂ ಜನಸೇವೆಯ ಮೂಲಕ ಜನರ ಮೆಚ್ಚುಗೆಗೆ ಪಾತ್ರರಾಗಿದ್ದ ಅವರು, ಈಗ ಮುಖ್ಯಮಂತ್ರಿಯಾಗಿ ರಾಜ್ಯದ ಜನತೆಗೆ ಉತ್ತಮ ಆಡಳಿತ ನೀಡಲಿದ್ದಾರೆ. ರೈತಪರ ಹಾಗೂ ಜನಪರ ಯೋಜನೆಗಳನ್ನು ಜಾರಿಗೊಳಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯದರ್ಶಿ ಬಾಬಾ ಜಾನ್, ಹಮೀಮ್, ತಂಜೀಮ್, ನಾರಾಯಣಮ್ಮ, ನಿರ್ಮಲದೇವಿ, ಸರೋಜದೇವಿ, ರತ್ನಮ್ಮ, ಹಸೀನಾ ಬಾನು ,ಅನುಸೂಯಮ್ಮ, ಶಾಂತಮ್ಮ, ನ'ಸೀಮ, ಗಂಗರತ್ನ, ವಸಂತ, ಲಕ್ಷ್ಮಿ ದೇವಿ, ಘಸಲುನ್ನಿಸ ಸೇರಿದಂತೆ ಹಲವರು ಉಪಸ್ಥಿತರಿದ್ದರು.


# ಅತಿಥಿ ಶಿಕ್ಷಕರ ನೇಮಕ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 2026–27ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ವಿಷಯ ಶಿಕ್ಷಕರು ಹಾಗೂ ಉಪನ್ಯಾಸಕರ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ಗೌರವಧನದ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಹಂತದಲ್ಲಿ ಅರ್ಜಿಗಳನ್ನು ಆಹ್ವಾನಿಸಿದೆ.

ಜಿಲ್ಲಾ ವೆಬ್‌ಸೈಟ್ www. koppal.nic.in ದಲ್ಲಿ "2026–27ನೇ ಸಾಲಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿರುವ ವಸತಿ ಶಾಲೆಗಳಲ್ಲಿ ಅತಿಥಿ ಶಿಕ್ಷಕರು ಮತ್ತು ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ" ಎಂಬ ಶಿರ್ಷಿಕೆಯಡಿಯಲ್ಲಿ ಪ್ರಕಟಿಸಲಾಗಿದ್ದು ವಿವರವಾದ ಮಾಹಿತಿಯನ್ನು ವೆಬ್‌ಸೈಟ್ ಮೂಲಕ ಪಡೆದುಕೊಳ್ಳಬಹುದು. ಅರ್ಹ ಆಸಕ್ತ ಅಭ್ಯರ್ಥಿಗಳು ಜಿಲ್ಲಾ ವೆಬ್‌ಸೈಟ್‌ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಹಾಗೂ ಆಯ್ಕೆ ಸಮಿತಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹರಿಪ್ರಸಾದ್ ಗೆ ಒಲಿದ ಕೆಪಿಸಿಸಿ ಅಧ್ಯಕ್ಷ ಪಟ್ಟ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು.ಜೂ.3– ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರನ್ನಾಗಿ ಕಾಂಗ್ರೆಸ್ ನ ಹಿರಿಯ ನಾಯಕ ಬಿ.ಕೆ.ಹರಿಪ್ರಸಾದ್ ಅವರನ್ನು ನೇಮಕ ಮಾಡಲಾಗಿದೆ.

ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪ್ರಮಾಣವಚನ ಸ್ವೀಕರಿಸಿದ ಬೆನ್ನಲ್ಲೇ ಹೈಕಮಾಂಡ್ ನಿಂದು ಇಂದು ಅಧಿಕೃತ ಆದೇಶ ಹೊರಬಿದ್ದಿದೆ.

ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಹಲವು ಆಕಾಂಕ್ಷಿಗಳಿದ್ದರು. ಸತೀಶ್ ಜಾರಕಿಹೊಳಿ, ಈಶ್ವರ ಖಂಡ್ರೆ, ಶಿವರಾಜ್ ತಂಗಡಗಿ, ಜಿ.ಪರಮೇಶ್ವರ್ ಆಕಾಂಕ್ಷಿಗಳ ಪಟ್ಟಿಯಲ್ಲಿ ಹೆಸರುಗಳು ಕೇಳಿ ಬಂದಿದ್ದವು. ಕೊನೆಯದಾಗಿ ಮೂಲ ಕಾಂಗ್ರೆಸಿಗ, ಹಿಂದುಳಿದ ವರ್ಗದ ನಾಯಕ ಎಂಬ ಪ್ರಮುಖ ಅಂಶಗಳನ್ನು ಪರಿಗಣಿಸಿ 71 ವರ್ಷದ ಬಿ.ಕೆ. ಹರಿಪ್ರಸಾದ್‌ಗೆ ಕೆಪಿಸಿಸಿ ಪಟ್ಟ ನೀಡಿದೆ.

## ' ಹೆಗ್ಗನಹಳ್ಳಿ ಕಾಂಗ್ರೆಸ್ ಪ್ರಭಾವಿ ನಾಯಕ ಎನ್ ರಮೇಶ್ ಗೌಡರಿಗೆ ಹುಟ್ಟು ಹಬ್ಬದ ಶುಭ ಕೋರಿದ – ಹೆಚ್ ಆರ್ ಪ್ರಕಾಶ್'



(ಜಿ.ನಂದೀಶ್ ದಾಸರಹಳ್ಳಿ)

ಪೀಣ್ಯ ದಾಸರಹಳ್ಳಿ : ಸರಳ ಸಜ್ಜನಿಕೆ ವ್ಯಕ್ತಿತ್ವದ ಹೊಂದಿದ, ನಿಷ್ಠೆ ಪ್ರಾಮಾಣಿಕತೆ ಪ್ರಬುದ್ಧತೆಯುಳ ವ್ಯಕ್ತಿ ಶಿಸ್ತಿನ ಸಿಪಾಯಿ ಯಾರಾದರೂ ಇದ್ದರೆ ಅವರೆ ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡ ಹಾಗೂ ಹೆಗ್ಗನಹಳ್ಳಿ ವಾರ್ಡಿನ ಕಾಂಗ್ರೆಸ್ ಪ್ರಭಾವಿ ನಾಯಕ ಎನ್. ರಮೇಶ್ ಗೌಡ್ರು ಎಂದರೆ ತಪ್ಪಾಗಲಾರದು ಎಂದು ಹೆಚ್ ಆರ್ ಪ್ರಕಾಶ್ ಹೆಗ್ಗನಹಳ್ಳಿ ಅವರು ಹೇಳಿದರು.


ಅವರು ಹೆಗ್ಗನಹಳ್ಳಿ ಮುಖ್ಯ ರಸ್ತೆಯಲ್ಲಿರುವ ಅವರ ಸ್ವ–ಂತ ಬಿಲ್ಡಿಂಗ್ ಹಾಲ್ ನಲ್ಲಿ ಕಾಂಗ್ರೆಸ್ ಪ್ರಭಾವಿ ನಾಯಕ ಎನ್ ರಮೇಶ್ ಗೌಡರ ಹುಟ್ಟು ಹಬ್ಬವನ್ನು ಆಯೋಜಿಸಲಾಗಿತ್ತು.

ಎನ್.ರಮೇಶ್ ಗೌಡರ ಹುಟ್ಟು ಹಬ್ಬದ ನಿಮಿತ್ತ ಅವರಿಗೆ ಹೆಚ್ ಆರ್ ಪ್ರಕಾಶ್ ಅವರು ರಮೇಶ್ ಅವರಿಗೆ ಶಾಲು ಹೊದಿಸಿ ಮೈಸೂರು ಪೆಟಾ ಧರಿಸಿ ಫಲಪುಷ್ಪದೊಂದಿಗೆ ಗೌರವಿಸಿ ಸಿಹಿ ತಿನ್ನಿಸಿ ಶುಭ ಕೋರಿ ಮಾತನಾಡಿದರು.

ಖ್ಯಾತ್ ಜಾನಪದ ಗಾಯಕ ಕುಣಿಗಲ್ ರಾಮಚಂದ್ರ ಅವರು ಕಾರ್ಯಕ್ರಮ ನಿರೂಪಣೆ ಮತ್ತು ಸಂಗೀತ ಮನೊರಂಜನೆ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಆರ್. ಮಂಜುನಾಥ್, ಬಿಜೆಪಿ ಪ್ರಭಾವಿ ಮುಖಂಡ ಸಪ್ತಗಿರಿ ಆನಂದ್, ಅರುಣ್ ಬೈಲಪ್ಪ, ವಿನಯ್ ಕುಮಾರ್ ಶಿವಣ್ಣ, ಶಶಿಕುಮಾರ್ ಸೇರಿದಂತೆ ಕಾಂಗ್ರೆಸ್ ಮುಖಂಡರು ಮಹಿಳೆಯರು ಕಾರ್ಯಕರ್ತರು ಹೆಗ್ಗನಹಳ್ಳಿ ಸಮಸ್ತ ನಾಗರಿಕರು ಮಹಿಳೆಯರು ಮುಂತಾದವರು ಇದ್ದರು.

# ಸ್ವಂತ ಹಣದಿಂದ ರಸ್ತೆ ದುರಸ್ತಿಗೊಳಿಸಿದ ಶಾಸಕ ತುನ್ನೂರಗೆ ರೈತರಿಂದ ಕೃತಜ್ಞತೆ ಸಲ್ಲಿಕೆ.






ಮಲ್ಲಮ್ಮ ನುಡಿವಾರ್ತೆ

ವಡಗೇರಾ ತಾಲೂಕಿನ ಊಳ್ಳೆ ಸೂಗೂರು ಗ್ರಾಮದಲ್ಲಿ ರೈತರ ಜಮೀನುಗಳಿಗೆ ತೆರಳುವ ರಸ್ತೆ ಸಂಪೂರ್ಣ ಹದಗೆಟ್ಟಿದ್ದು ಅದನ್ನು ದುರಸ್ತಿಗಳಿಸುವಂತೆ ರೈತರು ಶಾಸಕರಲ್ಲಿ ಮನವಿ ಮಾಡಿಕೊಂಡಿದ್ದ ಪರಿಣಾಮ ರೈತರ ಮನವಿಗೆ ಸ್ಪಂದಿಸಿ ಯಾದಗಿರಿ ಮತ ಕ್ಷೇತ್ರದ ಜನಪ್ರಿಯ ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರ ರವರು ಸ್ವಂತ ಹಣದಿಂದ ರೈತರು ಜಮೀನಿಗೆ ತೆರಳುವ ರಸ್ತೆಯನ್ನು ದುರಸ್ತಿಗೊಳಿಸಿದ್ದಾರೆ. ಎಂದು ಕಾಂಗ್ರೆಸ್ ಯುವ ಮುಖಂಡರಾದ ಜಲಾಲ ಸಾಬ್ ಮನಗಾರ ಊಳ್ಳೆಸೂಗುರು ತಿಳಿಸಿ ಮಾತನಾಡಿದರು. ನಮ್ಮ ಗ್ರಾಮದಲ್ಲಿ ರೈತರು ಜಮೀನುಗಳಿಗೆ ತೆರಳಲು ಸರಿಯಾದ ರಸ್ತೆ ಇಲ್ಲದ ಕಾರಣ ರೈತರಿಗೆ ತುಂಬಾ ತೊಂದರೆ ಆಗುತ್ತಿತ್ತು ಈ ಕುರಿತು ಶಾಸಕರ ಗಮನಕ್ಕೆ ತಂದಾಗ ಸ್ವಂತ ಕಾಳಜಿ ವಹಿಸಿ ಅವರೇ ಹಣವನ್ನು ನೀಡಿ ರಸ್ತೆಗೆ ಮರಮ ಹಾಕಿಸಿ ರಸ್ತೆ ದುರಸ್ತಿಗೊಳಿಸಿದ್ದು ಇದ–ರಿಂದ ರೈತರಿಗೆ ತುಂಬಾ ಅನುಕೂಲವಾಗಿದೆ ಎಂದರು ಅವರ ಈ ರೈತ ಪರ ಕಾಳಜಿಗೆ ಊಳ್ಳೆ ಸೂಗುರು ಗ್ರಾಮದ ಸಾರ್ವಜನಿಕರು ರೈತರು ಶಾಸಕರಿಗೆ ಕೃತಜ್ಞತೆಯನ್ನು ಸಲ್ಲಿಸಿದ್ದಾರೆ.

# ಅಂಧ, ಬುದ್ಧಿಮಾಂದ್ಯ ಟಿನ್ ಶೆಡ್ ಮನೆಯನ್ನು ನಿರ್ಮಿಸಿಕೊಟ್ಟು: ಡಾನ್ ಬೊಸ್ಕೋ ಸಮಾಜ ಸೇವಾ ಕೇಂದ್ರ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಮಾನವೀಯತೆ ಮತ್ತು ಕರುಣೆಯ ಅಪೂರ್ವ ಉದಾಹರಣೆಯಾಗಿ ಡಾನ್ ಬೊಸ್ಕೋ ಸಮಾಜ ಸೇವಾ ಕೇಂದ್ರ, ಯಾದಗಿರಿಯ ನಿರ್ದೇಶಕರಾದ ಫಾದರ್ ಶಾಬು ಫ್ರಾನ್ಸಿಸ್ ಅವರು ಅಂಧ ತಂದೆ ತಿಪ್ಪಣ್ಣ ಹಾಗೂ ಅವರ ಬುದ್ಧಿಮಾಂದ್ಯ ಮಗಳು ಕವಿತಾ ಅವರಿಗೆ ಟಿನ್ ಶೆಡ್ ಮನೆಯನ್ನು ನಿರ್ಮಿಸಿಕೊಟ್ಟು ನೆರವಿನ ಹಸ್ತ ಚಾಚಿದ್ದಾರೆ. ಠಾಣಾಗುಂದಿ ಗ್ರಾಮದ ನಿವಾಸಿಯಾದ ತಿಪ್ಪಣ್ಣ ಅವರು ಕಳೆದ 20 ವರ್ಷಗಳಿಂದ ದೃಷ್ಟಿಹೀನರಾಗಿದ್ದು, ಸುಮಾರು ಎರಡು ದಶಕಗಳ ಹಿಂದೆ ಮುಂಬೈಯಲ್ಲಿ ಕಲ್ಲಿನ ಕೆಲಸ ಮಾಡುತ್ತಿದ್ದ ವೇಳೆ ಸಂಭವಿಸಿದ ಅಪಘಾತದಲ್ಲಿ ತಮ್ಮ ಪತ್ನಿಯನ್ನು ಕಳೆದುಕೊಂಡಿದ್ದರು. ಪ್ರಸ್ತುತ ಅವರು ತಮ್ಮ 25 ವರ್ಷದ ಬುದ್ಧಿಮಾಂದ್ಯ ಮಗಳು ಕವಿತಾ ಅವರೊಂದಿಗೆ ಜೀವನ ಸಾಗಿಸುತ್ತಿದ್ದು, ದೈನಂದಿನ ಚಟುವಟಿಕೆಗಳಿಗೆ ಸಂಪೂರ್ಣವಾಗಿ ಮಗಳನ್ನೇ ಅವಲಂಬಿಸಿದ್ದಾರೆ. ಆರ್ಥಿಕ ಸಂಕಷ್ಟದಲ್ಲಿರುವ ಈ ಕುಟುಂಬಕ್ಕೆ ಪಡಿತರ ಚೀಟಿ, ಮಾಸಾಶನ ಸೇರಿದಂತೆ ಹಲವು ಮೂಲಭೂತ ಸೌಲಭ್ಯಗಳೂ ಲಭ್ಯವಿಲ್ಲ. ಇವರ ಪರಿಸ್ಥಿತಿಯನ್ನು ಗಮನಿಸಿದ ಡಾನ್ ಬೊಸ್ಕೋ ಸಮಾಜ ಸೇವಾ ಕೇಂದ್ರ ಕಳೆದ ಮೂರು ವರ್ಷಗಳಿಂದ ಪ್ರತಿ ತಿಂಗಳು ರೇಷನ್ ಕಿಟ್ ವಿತರಿಸುವ ಮೂಲಕ ನೆರವಾಗುತ್ತಿದೆ. ಈ ತಿಂಗಳ ರೇಷನ್ ವಿತರಣೆಯ ಸಂದರ್ಭದಲ್ಲಿ ತಿಪ್ಪಣ್ಣ ಅವರು ತಮಗೆ ಮಲಗಲು, ಅಡುಗೆ ಮಾಡಿಕೊಳ್ಳಲು ಹಾಗೂ ಸುರಕ್ಷಿತವಾಗಿ ವಾಸಿಸಲು ಟಿನ್ ಶೆಡ್ ಮನೆಯನ್ನು ನಿರ್ಮಿಸಿಕೊಡುವಂತೆ ಮನವಿ ಮಾಡಿದ್ದರು. ಅವರ ಮನವಿಗೆ ಸ್ಪಂದಿಸಿದ ಫಾದರ್ ಶಾಬು ಫ್ರಾನ್ಸಿಸ್ ಅವರು ಸಿಬ್ಬಂದಿಗಳಾದ ದೇವೀಂದ್ರಪ್ಪ ಬಂದಳ್ಳಿ, ಶರಣಪ್ಪ ಅಮರಪುರ ಹಾಗೂ ಸೂರ್ಯಕಾಂತ್ ಕೊಯಿಲೂರ್ ಅವರೊಂದಿಗೆ ಸೇರಿ ಟಿನ್ ಶೆಡ್ ಮನೆಯನ್ನು ನಿರ್ಮಿಸಿ ನೀಡಿದ್ದಾರೆ. ಮನೆ ನಿರ್ಮಾಣ ಪೂರ್ಣಗೊಂಡ ನಂತರ ತಿಪ್ಪಣ್ಣ ಅವರು ಸಂತಸ ವ್ಯಕ್ತಪಡಿಸಿ, "ನಮ್ಮ ಜೀವನಕ್ಕೆ ಹೊಸ ಭರವಸೆ ದೊರೆತಿದೆ" ಎಂದು ಕೃತಜ್ಞತೆ ಸಲ್ಲಿಸಿದರು. ಈ ಸೇವಾ ಕಾರ್ಯಕ್ಕೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಮೋನಪ್ಪ ಧಣಿ ಅವರು ಮಧ್ಯಾಹ್ನದ ಊಟದ ವ್ಯವಸ್ಥೆ ಮಾಡಿದ್ದರು. ಸಾಬಣ್ಣ ದೊರೆ, ಮಾಳಮ್ಮ ಹಾಗೂ ಸ್ಥಳೀಯ ನಿವಾಸಿಗಳು ಮಾತನಾಡಿ, "ಇದು ಕೇವಲ ಒಂದು ಮನೆ ನಿರ್ಮಾಣವಲ್ಲ; ಸಂಕಷ್ಟದಲ್ಲಿರುವ ಕುಟುಂಬಕ್ಕೆ ಹೊಸ ಭರವಸೆ ಮತ್ತು ಗೌರವಯುತ ಬದುಕಿನ ಅವಕಾಶವನ್ನು ಒದಗಿಸಿರುವ ಕಾರ್ಯ" ಎಂದು ಶ್ಲಾಘಿಸಿದರು. ಡಾನ್ ಬೊಸ್ಕೋ ಸಮಾಜ ಸೇವಾ ಕೇಂದ್ರದ ಈ ಮಾನವೀಯ ಕಾರ್ಯವು ಸಮಾಜದಲ್ಲಿ ಸಹಾನುಭೂತಿ, ಪರೋಪಕಾರ ಮತ್ತು ಸಾಮಾಜಿಕ ಹೊಣೆಗಾರಿಕೆಯ ಮೌಲ್ಯಗಳನ್ನು ಮತ್ತಷ್ಟು ಬಲಪಡಿಸಿದೆ.

# ಮನೆ ಮನೆ ಸಮೀಕ್ಷೆ ಮೂಲಕ ಮತದಾರರ ಮಾಹಿತಿ ಸಂಗ್ರಹ : ಸಾರ್ವಜನಿಕರು ಸಹಕರಿಸಬೇಕು: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 03 : ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ವಿಶೇಷ ತೀವ್ರ ಪರಿಷ್ಕರಣೆ (Special IntensiveRevision-2026)ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು,ಮತದಾರರ ಪಟ್ಟಿಯನ್ನು ಇನ್ನಷ್ಟು ನಿಖರ,ದೋಷರಹಿತ ಹಾಗೂ ಪಾರದರ್ಶಕಗೊಳಿಸುವ ಉದ್ದೇಶ ಹೊಂದಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

ಬುಧವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯ ಅಂಗವಾಗಿ ಮನೆ ಮನೆ ಸಮೀಕ್ಷೆ (House to House Enumeration) ನಡೆಸಲಾಗುವುದು. ಈ ವೇಳೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್ಒ) ಮನೆಗಳಿಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಸಂಗ್ರಹಿಸಿ ಪರಿಶೀಲಿಸಲಿದ್ದಾರೆ.ಸಂಗ್ರಹಿಸಲಾದ ಮಾಹಿತಿಯ ಆಧಾರದ ಮೇಲೆ ಮತದಾರರ ಪಟ್ಟಿಯ ಪರಿಷ್ಕರಣೆ, ತಿದ್ದುಪಡಿ ಹಾಗೂ ನವೀಕರಣ ಕಾರ್ಯ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲಾಧಿಕಾರಿಗಳ ಮಾಹಿತಿ ಪ್ರಕಾರ, 2026ರ ಅಕ್ಟೋಬರ್ 1 ಅನ್ನು ಅರ್ಹತಾ ದಿನಾಂಕವಾಗಿ ನಿಗದಿಪಡಿಸಲಾಗಿದೆ. ಜೂನ್ 20ರಿಂದ 29ರವರೆಗೆ ಸಿದ್ಧತೆ ಮತ್ತು ತರಬೇತಿ ಕಾರ್ಯಕ್ರಮ, ಜೂನ್ 30 ರಿಂದ ಜುಲೈ 29ರವರೆಗೆ ಮನೆ ಮನೆ ಸಮೀಕ್ಷೆ, ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ, ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆ, ಅಕ್ಟೋಬರ್ 3ರ ವರೆಗೆ ಅವುಗಳ ವಿಲೇವಾರಿ ಹಾಗೂ ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು.



ಮನೆ ಮನೆ ಸಮೀಕ್ಷೆ ಸಂದರ್ಭದಲ್ಲಿ ಹೊಸದಾಗಿ ಮತದಾನಕ್ಕೆ ಅರ್ಹರಾಗಿರುವವರ ಹೆಸರು ಸೇರ್ಪಡೆ, ಸ್ಥಳಾಂತರಗೊಂಡ ಮತದಾರರ ವಿವರಗಳ ನವೀಕರಣ, ಮೃತರ ಹೆಸರುಗಳ ತೆರವು ಸೇರಿದಂತೆ ಅಗತ್ಯ ತಿದ್ದುಪಡಿಗಳನ್ನು ಕೈಗೊಳ್ಳಲಾಗುವುದು. ಮತದಾರರು ಅಗತ್ಯ ದಾಖಲೆಗಳನ್ನು ಒದಗಿಸಿ ಬಿಎಲ್ಒಗಳಿಗೆ ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಕರಡು ಮತದಾರರ ಪಟ್ಟಿ ಪ್ರಕಟವಾದ ಬಳಿಕ ಸಾರ್ವಜನಿಕರು ತಮ್ಮ ಹೆಸರು, ವಿಳಾಸ ಹಾಗೂ ಇತರ ವಿವರಗಳಲ್ಲಿ ಯಾವುದೇ ದೋಷಗಳಿದ್ದಲ್ಲಿ ನಿಗದಿತ ಅವಧಿಯಲ್ಲಿ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ. ಸಲ್ಲಿಕೆಯಾಗುವ ಅರ್ಜಿಗಳನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

2025ರ ಜನವರಿ 6 ರಂದು ಪ್ರಕಟಗೊಂಡ ಅಂತಿಮ ಮತದಾರರ ಪಟ್ಟಿ ಪ್ರಕಾರ, ಬೀದರ್ ಜಿಲ್ಲೆಯಲ್ಲಿ ಒಟ್ಟು 1,528 ಮತಗಟ್ಟೆಗಳು ಕಾರ್ಯನಿರ್ವಹಿಸುತ್ತಿದ್ದು, 740,462 ಪುರುಷ ಮತದಾರರು ಇದ್ದು, 7059,83 ಮಹಿಳಾ ಮತದಾರರು ಸೇರಿದಂತೆ ಒಟ್ಟು 14,46,445 ಮತದಾರರು ದಾಖಲಾಗಿದ್ದಾರೆ ಎಂದು ಮಾಹಿತಿ ನೀಡಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ಅತ್ಯಂತ ಮಹತ್ವದ ಪ್ರಕ್ರಿಯೆಯಾಗಿದ್ದು, ಎಲ್ಲ ಮತದಾರರು, ರಾಜಕೀಯ ಪಕ್ಷಗಳು ಹಾಗೂ ಸಾರ್ವಜನಿಕರು ಬಿಎಲ್ಒಗಳಿಗೆ ಅಗತ್ಯ ಸಹಕಾರ ನೀಡುವ ಮೂಲಕ ಮತದಾರರ ಪಟ್ಟಿಯನ್ನು ಸಂಪೂರ್ಣ, ನಿಖರ ಮತ್ತು ಪಾರದರ್ಶಕಗೊಳಿಸಲು ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ. ಕರಾಳ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಜೂ.11, 12 ರಂದು ಈಡಿಗ ಮಹಾಮಂಡಳಿಯ ವಾರ್ಷಿಕ ಸಭೆ

• ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ



ರಾಷ್ಟ್ರೀಯ ಈಡಿಗ ಮಹಾಮಂಡಳಿಯ 26–27 ನೇ ಸಾಲಿನ ರಾಜ್ಯ, ಜಿಲ್ಲಾ, ತಾಲೂಕು ಮಟ್ಟದ ಪದಾಧಿಕಾರಿಗಳ ಆಯ್ಕೆ ಮತ್ತು 5 ನೇ ವರ್ಷದ ವಾರ್ಷಿಕ ಸಭೆ ಹಾಗೂ ಚಿಂತನಾ ಶಿಬಿರ ಇಲ್ಲಿಯ ಪುಣ್ಯಾಶ್ರಮದಲ್ಲಿ ಜೂನ್ 11,12 ರಂದು ಎರಡು ದಿನಗಳ ಕಾಲ ರಾಷ್ಟ್ರೀಯ ಅಧ್ಯಕ್ಷ ಡಾ. ಪ್ರಣವಾನಂದ ಸ್ವಾಮೀಜಿ ನೇತೃತ್ವದಲ್ಲಿ ನಡೆಯಲಿದೆ. ಈ ಸಭೆಗೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಯ್ದ ಪ್ರಮುಖರು ಆಗಮಿಸಲಿದ್ದಾರೆ. ಸ್ಥಳೀಯ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಜಿಲ್ಲಾಧ್ಯಕ್ಷ ದೇವರಾಜ ನಾಯ್ಕ ಶಿರಸಿ, ದಾಮೋದರ ಜಿ. ನಾಯ್ಕ ಅಂಕೋಲಾ, ಶ್ರೀಧರ ನಾಯ್ಕ ಭಟ್ಕಳ, ರಾಜೇಶ ನಾಯ್ಕ ಹೊನ್ನಾವರ, ಸಂತೋಷ ನಾಯ್ಕ ಗೋಕರ್ಣ, ಶೇಖರ ಪೂಜಾರಿ ಶಿರಸಿ, ಪ್ರದೀಪ ನಾಯ್ಕ ಹೊನ್ನಾವರ, ರವಿಚಂದ್ರ ನಾಯ್ಕ ಯಲ್ಲಾಪುರ, ಸಿ.ಕೆ.ಅಶೋಕ ಮುಂಡಗೋಡ, ಗಾಂಧೀಜಿ ನಾಯ್ಕ ಸಿದ್ದಾಪುರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ವರಿಗೂ ಸೂರು ಯೋಜನೆಯಡಿ ಸಹಾಯಧನಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಪ್ರಧಾನ ಮಂತ್ರಿ (ನಗರ) 2.0 ಯೋಜನೆಯನ್ನು 2024ರ ಸೆಪ್ಟೆಂಬರ್ 1ರಿಂದ ಅನ್ವಯವಾಗುವಂತೆ ಸರ್ವರಿಗೂ ಸೂರು ಯೋಜನೆಯಡಿ ಮುಂದಿನ 5 ವರ್ಷಗಳಲ್ಲಿ ದೇಶದಾದ್ಯಂತ ನಗರ ಪ್ರದೇಶಗಳಲ್ಲಿ ಒಂದು ಕೋಟಿ ಬಡವರು, ಕೊಳಚೆ ನಿವಾಸಿಗಳು ಒಳಗೊಂಡಂತೆ ಮಧ್ಯಮ ವರ್ಗದವರಿಗೆ ಸೂರು ಕಲ್ಪಿಸಲು ಸಹಾಯಧನ ನೀಡಲಾಗುವುದು.

ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ವಸತಿ ರಹಿತ ಕಚ್ಚಾ ಮನೆ ಅಥವಾ ಖಾಲಿ ನಿವೇಶನ ಹೊಂದಿರುವ ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯಕ್ಕಾಗಿ ಯೂನಿಫೈಡ್ ವೆಬ್ ಪೋರ್ಟಲ್ (Unified Web Portal) ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನಾವಗಿದೆ.

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆ ವ್ಯಾಪ್ತಿಯ ನಗರವಾಸಿ ವಸತಿ ರಹಿತ ಹಾಗೂ ನಿವೇಶನ ರಹಿತ ಅರ್ಹ ಫಲಾನುಭವಿಗಳು http://pmay-urbun.gov.in ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ನಗರಾಭಿವೃದ್ಧಿಕೋಶ ಯೋಜನಾ ನಿರ್ದೇಶಕ ಮನೋಹರ್ ತಿಳಿಸಿದ್ದಾರೆ.

# ಪಿ.ಎಂ.ಸ್ವ-ನಿಧಿ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)ನಗರದ ಡೇ–ನಲ್ಮ್ ವಿಭಾಗದಿಂದ ಪ್ರಧಾನ ಮಂತ್ರಿಗಳ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳು ತಮ್ಮ ವ್ಯಾಪಾರವನ್ನು ವಿಸ್ತರಿಸಿಕೊಳ್ಳಲು ಬ್ಯಾಂಕುಗಳಲ್ಲಿ ಶೇ.7 ರಷ್ಟು ಬಡ್ಡಿದರದಲ್ಲಿ ಕಿರು ಸಾಲ ಸೌಲಭ್ಯ ಕಲ್ಪಿಸಲಾಗಿದ್ದು, ಆಸಕ್ತ ವ್ಯಾಪಾರಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ.

ನಗರ ವ್ಯಾಪ್ತಿಯ ರಹವಾಸಿಗಳು ಮತ್ತು ನಗರಸಭೆ ವ್ಯಾಪ್ತಿಯಲ್ಲಿ ವ್ಯಾಪಾರ ಮಾಡುವ ಎಲ್ಲಾ ಬೀದಿ ಬದಿಯ ಸ್ಥಿರ ಸಂಚಾರಿ ವ್ಯಾಪಾರಿ, ಹಾಲು ಮಾರಾಟಗಾರರು, ಪತ್ರಿಕೆ ವಿತರಕರಿಗೂ ಆರ್ಥಿಕ ಭದ್ರತೆಗಾಗಿ 1ನೇ ಹಂತದಲ್ಲಿ ರೂ.15ಸಾವಿರ ಸಾಲ ನೀಡಿ 12 ಕಂತುಗಳಲ್ಲಿ ಮರುಪಾವತಿಸಬೇಕಾಗುತ್ತದೆ. ನಂತರ 2ನೇ ಹಂತದಲ್ಲಿ ರೂ.25 ಸಾವಿರ ಸಾಲ ನೀಡಿ ಸದರಿ ಸಾಲವನ್ನು 18 ಕಂತುಗಳಲ್ಲಿ ಮರು ಪಾವತಿಸಿದಲ್ಲಿ 3ನೇ ಹಂತದಲ್ಲಿ ರೂ.50 ಸಾವಿರ ಸಾಲವನ್ನು 36 ಕಂತುಗಳಲ್ಲಿ ಮರುಪಾವತಿಸಲು ಅವಕಾಶವಿದೆ. ವ್ಯಾಪಾರದ ಅನುಕೂಲಕ್ಕಾಗಿ ಕ್ಯೂಆರ್ ಕೋಡ್ ಬಳಕೆ ಮೂಲಕ ಕ್ಯಾಶ್ ಬ್ಯಾಕ್ ಪಡೆದುಕೊಳ್ಳುವುದಾಗಿದೆ. ಆಹಾರ ಉತ್ಪನ್ನ ವ್ಯಾಪಾರಿಗಳಿಗೆ ಈಖಖಂಖ ತರಬೇತಿ ನೀಡಲಾಗುವುದು.

ಅರ್ಜಿ ಸಲ್ಲಿಸಲು ಆಧಾರ್ ಕಾರ್ಡ, ರೇಷನ್ ಕಾರ್ಡ, ಮತದಾರರ ಗುರುತತಿನ ಚೀಟಿ, ಪಾನ್ ಕಾರ್ಡ, ರಾಷ್ಟ್ರೀಕೃತ ಬ್ಯಾಂಕ್ ಪಾಸ್ ಬುಕ್, ಆಯುಷ್ಮಾನ್ ಭಾರತ್ ಕಾರ್ಡ್, ಈ–ಶ್ರಮ ಕಾರ್ಡ್, ಪಿ.ಎ ಜೆಜೆಬಿವೈ, ಪಿ.ಎಂ.ಎಸ್ಬಿ.ವೈ ವಿಮೆ ದಾಖಲಾತಿ ಮಾಹಿತಿ, ವಿಕಲಚೇತನರ ಯು.ಡಿ.ಐ.ಡಿ ಕಾರ್ಡ ದಾಖಲಾತಿಗಳೊಂದಿಗೆ ನಗರಸಭೆ ಕಾರ್ಯಾಲಯ ಡೇ–ನಲ್ಮ್ ಶಾಖೆಗೆ ಬೇಟಿ ನೀಡಿ ಸೌಲಭ್ಯ ಪಡೆದುಕೋಳ್ಳಬಹುದು ಎಂದು ನಗರಸಭೆ

ಪೌರಾಯುಕ್ತ ಶಿವಕುಮಾರ್ ತಿಳಿಸಿದ್ದಾರೆ.

# ಮುಂಬಡ್ತಿ ಪಡೆದ ಡಾ. ರುಬಿನಾ ಪರ್ವೀನ್ ಅವರಿಗೆ ಸನ್ಮಾನ




• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.03–ಜೇವರ್ಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ (ಐಟಿಐ) ಪ್ರಾಚಾರ್ಯರಾದ ಡಾ. ರುಬಿನಾ ಪರ್ವೀನ್ ಅವರಿಗೆ ಇಲಾಖೆಯ ತರಬೇತಿ ವಿಭಾಗದ ಕಲ್ಯಾಣ ಕರ್ನಾಟಕ ವೃಂದದ ಗ್ರೂಪ್–ಬಿ ವೃಂದದ ಸಹಾಯಕ ನಿರ್ದೇಶಕರು (ತ)/ಪ್ರಾಚಾರ್ಯರು ದರ್ಜೆ–2 ಹುದ್ದೆಯಿಂದ ಗ್ರೂಪ್–ಎ ಹಿರಿಯ ಶ್ರೇಣಿ ವೃಂದದ ಉಪನಿದೇರ್ಶಕರು(ತ)/ಪ್ರಾಚಾರ್ಯರು ದರ್ಜೆ–1 ಹುದ್ದೆಗೆ ಮುಂಬಡ್ತಿ ದೊರೆತಿದೆ.

ಈ ಹಿನ್ನೆಲೆಯಲ್ಲಿ ಮಂಗಳವಾರ ಜೇವರ್ಗಿ ಐಟಿಐ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ವಿಶೇಷ ಕಾರ್ಯಕ್ರಮದಲ್ಲಿ ಸಂಸ್ಥೆಯ ಸಿಬ್ಬಂದಿ ಹಾಗೂ ಐ.ಎಂ.ಸಿ ಅಧ್ಯಕ್ಷರು ಮತ್ತು ಸದಸ್ಯರು ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಿದರು. ಇದೇ ವೇಳೆ ಕಲಬುರಗಿ ಜಿಲ್ಲೆಯ ವಿವಿಧ ಐಟಿಐ ಸಂಸ್ಥೆಗಳ ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗದವರು ನೂತನ ಉಪನಿರ್ದೇಶಕರಿಗೆ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ತರಬೇತಿ ಅಧಿಕಾರಿ ಅಶೋಕಕುಮಾರ, ಕಛೇರಿ ಅಧೀಕ್ಷಕ ಶಿವರಾಜ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಶಿವಶರಣಪ್ಪ ಸ್ವಾಗತಿಸಿದರು, ಬಸನಗೌಡ ಪಾಟೀಲ ನಿರೂಪಿಸಿದರು ಹಾಗೂ ಸುಧಾಕರ ಎಸ್. ಚಿಕ್ಕಯ್ಯನವರ್ ಮತ ವಂದಿಸಿದರು.

# ಶಿಕ್ಷಣವಂತರಾಗಿ ಪ್ರತಿ ಹಳ್ಳಿ ಹಳ್ಳಿಗೂ ಜ್ಞಾನದ ಬೆಳಕು ಹಚ್ಚಿ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ



ಶಿಕ್ಷಣವಂತರಾಗಿ ಪ್ರತಿ ಹಳ್ಳಿ ಹಳ್ಳಿಗೂ ಜ್ಞಾನದ ಬೆಳಕನ್ನು ಹಚ್ಚಬೇಕು ಎಂದುರೇವತಿ ನರಗುಂದ ಪ್ರಶಾಂತ ವೆಂಕಟೇಗೌಡರು ತಿಳಿಸಿದರು.

ತಾಲ್ಲೂಕು ಆಯಿತನಹಳ್ಳಿ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಮತ್ತು ಎಸ್ ಎಸ್ ಎಲ್ ಸಿ ಪಿಯುಸಿ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ಮಾತನಾಡಿದರು.

ಎಲ್ಲಾ ಮುಖ್ಯ ಅತಿಥಿ ಗಣ್ಯರು ಭಗವಾನ್ ಬುದ್ಧರ ಡಾ ಬಿಆರ್ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಜ್ಯೋತಿ ಬೆಳಗಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಅಂಬೇಡ್ಕರ್ ಅವರು ಈ ದೇಶಕ್ಕೆ ಸಂವಿಧಾನವನ್ನು ಅರ್ಪಣೆ ಮಾಡುವುದರ ಮುಖಾಂತರ ದೇಶದ ಪ್ರತಿಯೊಬ್ಬ ಕಟ್ಟೆ ಕಡೆಯ ವ್ಯಕ್ತಿಗೂ ಸಾಮಾಜಿಕವಾಗಿ ಆರ್ಥಿಕವಾಗಿ ಶೈಕ್ಷಣಿಕವಾಗಿ ರಾಜಕೀಯವಾಗಿ ಹಕ್ಕುಗಳು ದೊರೆಯಬೇಕು ಎಂದು ಹೇಳಿದರು.

ಬಾಬಾ ಸಾಹೇಬರು ಇವರ ಆದರ್ಶ ಮಾರ್ಗದಲ್ಲಿ ಶಿಕ್ಷಣವಂತರಾಗಿ ಪ್ರತಿ ಹಳ್ಳಿ ಹಳ್ಳಿಗೂ ಜ್ಞಾನದ ಬೆಳಕನ್ನ ಹಚ್ಚಬೇಕು ಆ ಜ್ಞಾನದ ಬೆಳಕು ಪ್ರತಿಯೊಬ್ಬ ಕಟ್ಟ ಕಡೆಯ ವ್ಯಕ್ತಿಗೂ ತಲುಪಬೇಕು ಎಂದು ಹೇಳಿದರು ವಿದ್ಯಾರ್ಥಿಗಳು ನಿರಂತರ ಕಲಿಕೆಯಿಂದ ಉತ್ತಮ ಪ್ರಜೆಗಳಾಗಬಹುದು ಎಂದರು ಹಾಗೂ ಇವರನ್ನು ವಿಶ್ವರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಯುವಕರ ಸಂಘ ವತಿಯಿಂದ ಪ್ರಸಂಶ ಪತ್ರವನ್ನು ನೀಡುವುದರ ಮುಖಾಂತರ ಸನ್ಮಾನಿಸಲಾಯಿತು.

ಇವರು ಹುಟ್ಟೂರಾದ ರಾಗಿ ಮರೂರಿನಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆಯನ್ನು ನಿರ್ಮಾಣದ ಮುಖಾಂತರ ಪಕ್ಕದ ಹಲಗನಹಳ್ಳಿ ಗ್ರಾಮದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆಯನ್ನ ನಿರ್ಮಾಣ ಮಾಡಿಕೊಟ್ಟಿದ್ದು ಜೊತೆಗೆ ರಾಗಿ ಮರೂರಿನಲ್ಲಿ ಒಂದು ಕಿಲೋಮೀಟರ್ ರಸ್ತೆ ನಿರ್ಮಾಣ ಶಾಲೆಗೆ ಬಣ್ಣದ ನಿರ್ಮಾಣ ಹಾಗೂ ಇನ್ನಿತರ ಹಲವಾರು ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಂಡಿರುವ ಬಗ್ಗೆ ಸ್ಪಡಿಸಲಾಯಿತು.

ಅವರ ಆಪ್ತ ಸಲಹೆಗಾರರು ಸಮಾಜ ಸೇವಕರು ರಾಗಿ ಮರೂರು ಮರಿಗೌಡರು ಮಾತನಾಡಿ ಬಾಬಾ ಸಾಹೇಬ್ ಅಂಬೇಡ್ಕರ್ ಜಗತ್ತಿನ ಜ್ಯೋತಿ ಎಂದು ಹೇಳಿದರು ಬೌದ್ಧ ಗುರು ಡಾ. ಕಲ್ಯಾಣ ಸಿರಿ ಬಂತೆ ದಿವ್ಯ ಸಾನಿಧ್ಯ ವಹಿಸಿದರು

ಬೌದ್ಧ ಉಪಸಕರಾದ ಪುಟ್ಟಮಣಿ ಜೆ ಪದ್ಮಾವತಿ ಮೈಸೂರು ಕೊಡಗಿನ ದಲಿತ ಹೋರಾಟಗಾರ ಕೆ ಬಿ ರಾಜು ರಾಜ್ಯ ಸಂಘಟನಾ ಸಂಚಾಲಕರು ಮತ್ತು ಪ್ರಗತಿಪರ ಚಿಂತಕರಾದ ನಂದಿಪುರ ಸೋಮಣ್ಣ ವಾಜೀದ್ ಹಲಗನಹಳ್ಳಿ ಮನೋಹರ್ ಯೋಗೇಶ್ ಕಣಗಾಲು ಲೋಕೇಶ್ ಯಜಮಾನ ಶಿವಣ್ಣ ಜವರಯ್ಯ ಸಣ್ಣ ಕಾಳಯ್ಯ ಶಿವರುದ್ರಪ್ಪ ತಾತನಹಳ್ಳಿ ಗೋವಿಂದ್ ರಾಜ್ ವಕೀಲರಾದ ಶಂಕರ್ ಕೆ ಗಣೇಶ್ ಎ ಜೆ ಇವರ ನೇತೃತ್ವದಲ್ಲಿ ಗ್ರಾಮಸ್ಥರು ರಾಗಿ ಮಿಲ್ ನಾಗಣ್ಣ ರಮೇಶ್ ಶೆಟ್ಟಿ ಮಹದೇವ್ ಸಿದ್ದಯ್ಯ ಕಾಳಯ್ಯ ಮುಂತಾದವರು ಭಾಗವಹಿಸಿದ್ದರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಶೋಷಿತ ಸಮುದಾಯ ಅಭ್ಯುದಯಕ್ಕೆ 1.96 ಲಕ್ಷ ಕೋಟಿ ರೂ. ಮೀಸಲು:ರಾಮದಾಸ್ ಅಠವಳೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಜೂ.03: ಪ್ರಸಕ್ತ 2026–27ನೇ ಸಾಲಿಗೆ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಪರಿಶಿಷ್ಟ ಜಾತಿ ಸಮುದಾಯಗಳ ಕಲ್ಯಾಣಕ್ಕೆ ಸುಮಾರು 1,96,400.37 ಕೋಟಿ ರೂ. ಹಣ ಮೀಸಲಿಟ್ಟಿದೆ ಎಂದು ಕೇಂದ್ರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ರಾಮದಾಸ್ ಅಠವಳೆ ಹೇಳಿದರು.

ಮಂಗಳವಾರ ಇಲ್ಲಿನ ಐವಾನ್–ಎ–ಶಾಹಿ ಅತಿಥಿಗೃಹದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿಯ ಆಯವ್ಯಯದಲ್ಲಿ 35,195.27 ಕೋಟಿ ರೂ. ಹೆಚ್ಚಳವಾಗಿದೆ. ಇದು ತಳ ಸಮುದಾಯದ ಅಭಿವೃದ್ಧಿಗೆ ನಮ್ಮ ಸರ್ಕಾರಕ್ಕಿರುವ ಬದ್ಧತೆ ತೋರಿಸುತ್ತದೆ ಎಂದರು.

ದಲಿತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರವು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಮುಖಾಂತರ ಅನೇಕ ಯೋಜನೆಗಳನ್ನು ರೂಪಿಸಿದೆ. ಇದಲ್ಲದೆ ಪ್ರಧಾನಮಂತ್ರಿ ಅವಾಸ್ ಯೋಜನೆ, ಮುದ್ರಾ ಯೋಜನೆ, ಜನಧನ ಯೋಜನೆ, ಸ್ವಚ್ಛ ಭಾರತ ಮಿಷನ್ ಹೀಗೆ ಅನೇಕ ಸಮಾಜ ಸುಧಾರಣೆ ಯೋಜನೆ ಹಾಕಿಕೊಂಡಿದೆ ಎಂದ ಅವರು, ತಮ್ಮ ಸಚಿವಾಲಯವು ಎಸ್. ಸೇರಿದಂತೆ ಓ.ಬಿ.ಸಿ, ವಿಶೇಷಚೇತನರು, ಹಿರಿಯ ನಾಗರಿಕರು, ಲಿಂಗತ್ವ ಅಲ್ಪಸಂಖ್ಯಾತರ ಕಲ್ಯಾಣಕ್ಕೂ ಶ್ರಮಿಸುತ್ತಿದೆ ಎಂದರು.

ಆದರ್ಶ ಗ್ರಾಮ ಯೋಜನೆಯಡಿ ಕಳೆದ 2021–22 ರಿಂದ 2025–26ರ ವರೆಗೆ 85 ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ಅದರಲ್ಲಿ ರಸ್ತೆ, ಚರಂಡಿ, ಕುಡಿಯುವ ನೀರು, ಹೈಮಾಸ್ಟ್ ದೀಪ ಅಳವಡಿಕೆದಂತಹ 205 ಕಾಮಗಾರಿಗಳ ಸಮರ್ಪಕ ಅನುಷ್ಠಾನ ಮಾಡಿ 65 ಗ್ರಾಮಗಳನ್ನು ಆದರ್ಶ ಗ್ರಾಮವೆಂದು ಘೋಷಿಸಲಾಗಿದೆ. ಇನ್ನು 2025–26ರಲ್ಲಿ 20 ಗ್ರಾಮಗಳ ಆಯ್ಕೆ ಮಾಡಿದ್ದು, ಡಿ.ಪಿ.ಆರ್ ಕಾರ್ಯ ಸಿದ್ಧತೆಯಲ್ಲಿದೆ. 2021–22 ರಿಂದ 2025–26 ಅವಧಿಯಲ್ಲಿ ಒಟ್ಟಾರೆ 7.68 ಕೋಟಿ ರೂ. ಕಲಬುರಗಿ ಜಿಲ್ಲೆಗೆ ಹಂಚಿಕೆ ಮಾಡಿದ್ದು, ಅಷ್ಟು ಹಣ ಖರ್ಚು ಮಾಡಲಾಗಿದೆ ಎಂದು ಸಚಿವ ರಾಮದಾಸ್ ಅಠವಳೆ ತಿಳಿಸಿದರು.

ಸಬಕಾ ಸಾತ್ ಸಬಕಾ ವಿಕಾಸ್ ಘೋಷವಾಕ್ಯದೊಂದಿಗೆ ಸರ್ವ ಜನರ ಹಿತ ಕಾಪಾಡುವ ಕೆಲಸ ನಮ್ಮ ಸರ್ಕಾರ ಮಾಡುತ್ತಿದೆ. ಸಮಾಜ ಸುಧಾರಕ ಕಾಕಾ ಕಾಳೆಸ್ಕರ್ ಅವರ ನೇತೃತ್ವದ ಹಿಂದುಳಿದ ಆಯೋಗವು ಓ.ಬಿ.ಸಿ. ವರ್ಗಕ್ಕೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಕಲ್ಪಿಸಬೇಕೆಂದು ವರದಿ ನೀಡಿದ್ದರು ಅದು ಅನುಷ್ಠಾನಕ್ಕೆ ಬಂದಿರಲಿಲ್ಲ. ಮಂಡಲ್ ಆಯೋಗದ ಪರಿಣಾಮ ಶೇ.27 ಮೀಸಲಾತಿ ಈ ಸಮುದಾಯಕ್ಕೆ ದೊರಕಿತ್ತು. ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಕಲ್ಪಿಸಿದ್ದರಿಂದ ಎಸ್.ಸಿ–ಎಸ್.ಟಿ. ಸಮುದಾಯಕ್ಕೆ ಮೀಸಲು ಲಭ್ಯವಾಗುತ್ತಿದೆ. ಸರ್ವರ ಹಿತ ಬಯಸುವ ನಮ್ಮ ಸರ್ಕಾರ ಹಿಂದುಳಿದ ಸಮಯದಾಯಕ್ಕೆ ನ್ಯಾಯ ಕಲ್ಪಿಸಲು ದೇಶದಾದ್ಯಂತ ಹಿಂದುಳಿದವರ ಜಾತಿ ಜನಗಣತಿ ಮಾಡಲು ನಿರ್ಧರಿಸಿದೆ ಎಂದರು.

ಕಲಬುರಗಿ ದಲಿತ ಜಾಗೃತ ನೆಲವಾಗಿದೆ. ಅಂಬೇಡ್ಕರ್ ಮೂಮೆಂಟ್, ದಲಿತ ಚಳುವಳಿಗಳು ಇದು ನಡೆದಿರುವುದು ಇತಿಹಾಸ. 12ನೇ ಶತಮಾನದಲ್ಲಿ ಲಿಂಗಾಯತ ಧರ್ಮ ಸ್ಥಾಪಿಸಿದ ಮತ್ತು ಜಾತಿ ರಹಿತ ಸಮಾಜ ನಿರ್ಮಾಣಕ್ಕೆ ಅವಿರತ ಶ್ರಮಿಸಿದ ಬಸವಣ್ಣನವರ ಪುಣ್ಯ ಭೂಮಿಯಲ್ಲಿ ಇದೇ ಪ್ರಥಮ ಬಾರಿಗೆ ಬುದ್ಧ, ಬಸವ–ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಲ್ಲಿಗೆ ಆಗಮಿಸಿರುವೆ ಎಂದರು.

ಪೆಟ್ರೋಲ್–ಡೀಸೆಲ್, ಅಡುಗೆ ಅನಿಲ ದರ ಏರಿಕೆ ಕುರಿತಂತೆ ಮಾತನಾಡಿದ ಸಚಿವರು, ಮಧ್ಯ ಪ್ರಾಚ್ಯದಲ್ಲಿ ಯುದ್ಧದ ಪರಿಣಾಮ ಪೆಟ್ರೋಲಿಯಂ, ಗ್ಯಾಸ್ ಉತ್ಪನ್ನಗಳಲ್ಲಿ ದರ ಏರಿಕೆಯಾಗುತ್ತಿದೆ. ದರ ಹೆಚ್ಚಳ ಸಾಮಾನ್ಯವಾಗಿ ಜನಸಾಮಾನ್ಯರಿಗೆ ಹೊರೆಯಾಗುತ್ತಿದೆ. ಹಿಂದೆ ಯು.ಪಿ.ಎ. ಸರ್ಕಾರದ ಕಾಲದಲ್ಲಿಯೂ ಪೆಟ್ರೋಲ್ ದರ ಹತ್ತು ಬಾರಿ ಹೆಚ್ಚಿಸಿದರು. ಪೆಟ್ರೋಲ್–ಡೀಸೆಲ್ ದರ ಏರಿಕೆಯಲ್ಲಿ ಸರ್ಕಾರ ನಿಯಂತ್ರಣ ಸಾಧಿಸುವ ಸರ್ವ ಪ್ರಯತ್ನ ಮುಂದುವರೆಸಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಆರ್.ಪಿ. ಪಕ್ಷದ ರಾಷ್ಟ್ರೀಯ ಕಾರ್ಯಾಧ್ಯಕ್ಷ ವೆಂಕಟಸ್ವಾಮಿ, ಉಪಾಧ್ಯಕ್ಷ ಕಾಕಾಸಾಹೇಬ್ ಕಂಬಾಳಕರ್, ಮಹಾರಾಷ್ಟ್ರದ ಅಧ್ಯಕ್ಷ ರಾಜಾ ಸರ್ವದೆ, ಮುಂಬೈ ಪ್ರದೇಶದ ಜನರಲ್ ಸೆಕ್ರೆಟರಿ ವಿವೇಕ ಪವಾರ, ದಕ್ಷಿಣ ಭಾರತದ ಜನರಲ್ ಸೆಕ್ರೆಟರಿ ಎ.ಬಿ.ಹೊಸಮನಿ, ಮುಖಂಡರಾದ ಪ್ರಕಾಶ ಮೂಲಭಾರತಿ, ನಾಗೇಶ ತಳಕೇರಿ ಇದ್ದರು.

# ಹಕ್ಕು ಪತ್ರ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರದ ಕೊಳಚೆ ನಿರ್ಮೂಲನ ಮಂಡಳಿಯಿಂದ ನಗರದಲ್ಲಿ ಗುರುತಿಸಲಾಗಿದೆ ಕೊಳಚೆ ನಿರ್ಮೂಲನೆ ಮಂಡಳಿಯಿಂದ ಫಲಾನುಭವಿಗಳನ್ನು ಇರುವುದರಿಂದ ಯಾರು ನಗರಸಭೆಯಲ್ಲಿ ಆನ್ಲೈನಲ್ಲಿ ಅರ್ಜಿ ಹಾಕಿದ್ದಾರೆ ಅಂತವರನ್ನು ಇ–ಆಸ್ತಿ ಖಾತೆ ಯನ್ನು ಫಲಾನುಭವಿಗಳಿಗೆ ಅಂಥವರನ್ನು ಗುರುತಿಸಿ ಹಕ್ಕು ಪತ್ರಗಳಿಗೆ ಹುಣಸೂರು ನಗರಸಭೆ ವತಿಯಿಂದ ಪೌರಾಯುಕ್ತರಾದ ಮಾನಸ ಎಂ ರವರು ವಿತರಿಸಿದರು

ನಂತರ ಸುದ್ದಿಗಾರರೊಂದಿಗೆ ಮಾತನಾಡಿ ನಗರದಲ್ಲಿ ಕೊಳಚೆ ನಿರ್ಮಲನ ಮಂಡಳಿ ವತಿಯಿಂದ ನಗರದಲ್ಲಿ ವಾಸವಾಗಿದ್ದಾರದಲ್ಲಿ ನಿವಾಸಿಗಳು ಅಂತವರು ಮಂಡಳಿಗೆ ಸೇರ್ಪಟ್ಟಿರುವ ಕೊಳಚೆ ನಿರ್ಮಲ ನಿರ್ಮಲ ಮಂಡಳಿ ವತಿಯಿಂದ ವಾಸ ಇರುವ ಫಲಾನುಭವಿಗಳು ಆನ್ಲೈನಲ್ಲಿ ಅರ್ಜಿ ಹಾಕಿದರೆ ಅಂಥವರನ್ನು ಗುರುತಿಸಿ ಹಕ್ಕುಪತ್ರವನ್ನು ನಗರಸಭೆ ವತಿಯಿಂದ ವಿತರಿಸಲಾಗುವುದು ಎಂದು ತಿಳಿಸಿದರು

# ಆಗಸ್ಟ್ ಅಂತ್ಯಕ್ಕೆ ರೈಲ್ವೆ ಮೇಲ್ಸೇತುವೆ ಕಾಮಗಾರಿ ಪೂರ್ಣಗೊಳಿಸಿ:ಡಿ ಸಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಜೂ.03:ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅನಂತಶಯನ ಗುಡಿ ರೈಲ್ವೆ ಕ್ರಾಸಿಂಗ್ ಹಂಪಿ ರಸ್ತೆಯ ಮೇಲ್ಸೇತುವೆ ಕಾಮಗಾರಿ ಪ್ರಗತಿ ಪರಿಶೀಲನೆಯ ತುರ್ತು ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾಧಿಕಾರಿ ಅವರು ಮಾತನಾಡಿದರು. ಭೂಸ್ವಾಧೀನ ಪ್ರಕ್ರಿಯೆ, ಅನುದಾನ ಬಿಡುಗಡೆ ಹಾಗೂ ತಾಂತ್ರಿಕ ಅಡಚಣೆಗಳು ಸೇರಿದಂತೆ ಎಲ್ಲಾ ರೀತಿಯ ತೊಡಕುಗಳನ್ನು ಜಿಲ್ಲಾಡಳಿತ ಈಗಾಗಲೇ ಸಂಪೂರ್ಣವಾಗಿ ನಿವಾರಿಸಿ, ಸುಗಮ ಕಾಮಗಾರಿ ಕೆಲಸಕ್ಕೆ ದಾರಿ ಮಾಡಿಕೊಟ್ಟಿದೆ. ಹೀಗಿದ್ದರೂ ಸಹ ಕಾಮಗಾರಿ ಮಾತ್ರ ಆಮೆಗತಿಯಲ್ಲಿ ಸಾಗುತ್ತಿರುವುದಕ್ಕೆ ಜಿಲ್ಲಾಧಿಕಾರಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಅಧಿಕಾರಿಗಳು ಮತ್ತು ಗುತ್ತಿಗೆದಾರರ ಇಂತಹ ನಿಧಾನಗತಿಯ ಧೋರಣೆ ಸಾರ್ವಜನಿಕರ ಮತ್ತು ಸ್ಥಳೀಯ ಜನಪ್ರತಿನಿಧಿಗಳ ಕೆಂಗಣ್ಣಿಗೆ ಗುರಿಯಾಗಿದೆ ಎಂದು ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡರು. ರೈಲ್ವೆ ಮೇಲ್ಸೇತುವೆ ಕಾಮಗಾರಿಯ ಎಲ್ಲಾ ಲೋಪದೋಷಗಳನ್ನು ತಕ್ಷಣವೇ ಸರಿಪಡಿಸಿಕೊಂಡು, ಮುಂಬರುವ ಆಗಸ್ಟ್ ಅಂತ್ಯದ ವೇಳೆಗೆ ಕಾಮಗಾರಿಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಗಡುವು ನೀಡಿದರು ಹಂಪಿ ರಸ್ತೆಯು ಹೊಸಪೇಟೆಯ ಪ್ರಮುಖ ಸಂಪರ್ಕ ರಸ್ತೆಯಾಗಿದ್ದು, ಇಲ್ಲಿನ ರೈಲ್ವೆ ಗೇಟ್ ಬಳಿ ಮೇಲ್ಸೇತುವೆ ಕೆಲಸ ಅರ್ಧಕ್ಕೆ ನಿಂತಿರುವುದರಿಂದ ನಿತ್ಯ ಸಾವಿರಾರು ವಾಹನ ಸವಾರರು ಹಾಗೂ ಸಾರ್ವಜನಿಕರು ಸಂಚಾರ ದಟ್ಟಣೆಯಲ್ಲಿ ಸಿಲುಕಿ ನರಕಯಾತನೆ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇನ್ನು ಮುಂದೆ ಯಾವುದೇ ರೀತಿಯ ನೆಪಗಳನ್ನು ಹೇಳಿದರೆ ಕೇಳುವುದಿಲ್ಲ. ಕಾಮಗಾರಿಯಲ್ಲಿ ಕಂಡುಬರುತ್ತಿರುವ ಸಣ್ಣಪುಟ್ಟ ಲೋಪದೋಷಗಳನ್ನು ತಕ್ಷಣವೇ ಸರಿಪಡಿಸಿಕೊಂಡು ತ್ವರಿತಗತಿಯಲ್ಲಿ ಕೆಲಸ ನಿರ್ವಹಿಸಬೇಕು. ಜೂನ್ ಅಂತ್ಯಕ್ಕೆ ಆಗಿರುವ ಪ್ರಗತಿ ಮತ್ತು ಜೂನ್ ಮಾಹೆಯಲ್ಲಿ ಪ್ರಗತಿಯಲ್ಲಿ ಆಗಿರುವ ಕಾಮಗಾರಿಯ ಅಭಿವೃದ್ಧಿ ಕಾರ್ಯಗಳ ಪ್ರಗತಿಯ ಸಂಪೂರ್ಣ ವರದಿ ನೀಡಬೇಕು ಎಂದು ತಾಕೀತು ಮಾಡಿದ ಅವರು, ಆಗಸ್ಟ್ ಅವಧಿಗೆ ಮೇಲ್ಸೇತುವೆಯೊಂದಿಗೆ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅತ್ಯಗತ್ಯವಾಗಿರುವ ಸೇವಾ ರಸ್ತೆಯನ್ನು ಸಹ ಪೂರ್ಣಗೊಳಿಸಿ ಬಳಕೆಗೆ ಮುಕ್ತಗೊಳಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಕಾಮಗಾರಿ ಪೂರ್ಣಗೊಳಿಸುವ ಭರದಲ್ಲಿ ಅಧಿಕಾರಿಗಳು ಅಥವಾ ಗುತ್ತಿಗೆದಾರರು ನಿಗದಿತ ಅವಧಿಯೊಳಗೆ ಗುಣಮಟ್ಟದಲ್ಲಿ ರಾಜಿಯಿಲ್ಲದೇ ಕಾಮಗಾರಿ ಪೂರ್ಣಗೊಳಿಸಬೇಕು ಎಂದರು.

# ಪತ್ರಕರ್ತರ ಧ್ವನಿಗೆ ಹೊಸ ಶಕ್ತಿ: ಕರ್ನಾಟಕ ಕಾರ್ಯನಿರತ ಸಂಪಾದಕರ ಹಾಗೂ ವರದಿಗಾರರ ಸಂಘದ ಜಿಲ್ಲಾಧ್ಯಕ್ಷರಾಗಿ ರಫೀಕ್ ಪಟೇಲ್ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂನ್ 3: ಸಮಾಜದ ನಾಲ್ಕನೇ ಅಂಗವೆಂದು ಕರೆಯಲ್ಪಡುವ ಪತ್ರಿಕೋದ್ಯಮದ ಬಲವರ್ಧನೆ ಹಾಗೂ ಪತ್ರಕರ್ತರ ಹಕ್ಕುಗಳ ರಕ್ಷಣೆಗಾಗಿ ಕಾರ್ಯನಿರ್ವಹಿಸುವ ಕರ್ನಾಟಕ ಕಾರ್ಯನಿರತಸಂಪಾದಕರ ಹಾಗೂ ವರದಿಗಾರರ ಸಂಘದ ಯಾದಗಿರಿ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ನಗರದ ಹಳೆ ಪ್ರವಾಸಿ ಮಂದಿರದಲ್ಲಿ ನಡೆದ ಸಭೆಯಲ್ಲಿ ಹಿರಿಯ ಪತ್ರಕರ್ತ ಮೊಹಮ್ಮದ್ ರಫೀಕ್ ಪಟೇಲ್ ಅವರನ್ನು ಜಿಲ್ಲಾ ಅಧ್ಯಕ್ಷರಾಗಿ ನೇಮಕಗೊಳಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಸಂಘಟನೆ ಕೇವಲ ಹೆಸರಿಗಷ್ಟೇ ಸೀಮಿತವಾಗದೆ ಜಿಲ್ಲೆಯ ಪ್ರತಿಯೊಬ್ಬ ನೈಜ ಪತ್ರಕರ್ತರ ಬೆನ್ನೆಲುಬಾಗಿ ಕಾರ್ಯನಿರ್ವಹಿಸಲಿದೆ. ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ನೆರವು ನೀಡುವುದು, ಮೂಲಭೂತ ಸೌಲಭ್ಯಗಳಿಗಾಗಿ ಹೋರಾಟ ನಡೆಸುವುದು ಹಾಗೂ ವೃತ್ತಿಪರ ಗೌರವವನ್ನು ಹೆಚ್ಚಿಸುವ



ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ" ಎಂದು ಭರವಸೆ ನೀಡಿದರು.

ಪತ್ರಕರ್ತರು ಸಮಾಜದ ಕಣ್ಣು ಮತ್ತು ಕಿವಿಗಳಾಗಿದ್ದು, ಅವರ ಸಮಸ್ಯೆಗಳಿಗೆ ಸ್ಪಂದಿಸುವುದು ಸಂಘಟನೆಯ ಪ್ರಮುಖ ಧ್ಯೇಯವಾಗಿರಲಿದೆ ಎಂದು ಅವರು ಹೇಳಿದರು. ಪತ್ರಕರ್ತರ ಏಕತೆ ಮತ್ತು ಸಹಕಾರದಿಂದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಸಂಕಲ್ಪವನ್ನೂ ವ್ಯಕ್ತಪಡಿಸಿದರು.

ಸಭೆಯಲ್ಲಿ ಜಿಲ್ಲಾ ಉಪಾಧ್ಯಕ್ಷರಾಗಿ ಡಿ.ಕೆ. ದೇವಿಂದ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ರುದ್ರುಸ್ವಾಮಿ, ಸಹ ಕಾರ್ಯದರ್ಶಿಯಾಗಿ ನಿಜಾಮುದ್ದೀನ್, ಖಜಾಂಚಿಯಾಗಿ ರಮೇಶ್ ವಿಶ್ವಕರ್ಮ, ಗುರುಮಿಟಕಲ್ ತಾಲೂಕು ಅಧ್ಯಕ್ಷರಾಗಿ ಜಗದೀಶ ಕುಮಾರ ಬೂಮ, ಸುರಪುರ ತಾಲೂಕು ಅಧ್ಯಕ್ಷರಾಗಿ ವೀರೇಶ್ ಟೆಕ್ಕಳಕಿ, ಶಹಾಪುರ ತಾಲೂಕು ಅಧ್ಯಕ್ಷರಾಗಿ ಸುನಿಲ್ ಕುಮಾರ ಹೊಸಮನಿ ಹಾಗೂ ನಾಮನಿರ್ದೇಶಿತ ಸದಸ್ಯರಾಗಿ ರಿಯಾಜ್ ಪಟೇಲ್ ಅವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಗುರುರಾಜ್ ಅಂಗಡಿ, ಶಿವಶಂಕರ ವಡಿಗೇರ, ಚಾಂದಪಾಷ ಸೇರಿದಂತೆ ಹಲವಾರು ಪತ್ರಕರ್ತರು ಹಾಗೂ ಗಣ್ಯರು ಉಪಸ್ಥಿತರಿದ್ದರು.

## ಜಿಲ್ಲಾಧಿಕಾರಿಗಳಿಗೆ ಸಸಿ ನೀಡಿ ಗೌರವ

ನೂತನ ಸಂಘಟನೆಯ ಪದಾಧಿಕಾರಿಗಳು ಯಾದಗಿರಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಪಾಂಡ್ವೆ ರಾಹುಲ್ ತುಕಾರಾಂ ಅವರನ್ನು ಭೇಟಿ ಮಾಡಿ ಸಸಿ ನೀಡಿ ಗೌರವಿಸಿದರು. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, ಜಿಲ್ಲೆಯ ನಗರ ಹಾಗೂ ಗ್ರಾಮೀಣ ಭಾಗದ ಪತ್ರಕರ್ತರಿಗೆ ಅಗತ್ಯವಿರುವ ಮೂಲಸೌಲಭ್ಯಗಳನ್ನು ಒದಗಿಸಲು ಆಡಳಿತ ಸದಾ ಸಹಕಾರ ನೀಡಲಿದೆ ಎಂದು ಭರವಸೆ ನೀಡಿದರು.

## ಪತ್ರಕರ್ತರ ಭದ್ರತೆಗೆ ಎಸ್‌ಪಿ ಭರವಸೆ

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಅವರನ್ನು ಭೇಟಿ ಮಾಡಿದ ಸಂಘದ ಪದಾಧಿಕಾರಿಗಳು ಪತ್ರಕರ್ತರ ಸಮಸ್ಯೆಗಳು ಹಾಗೂ ಭದ್ರತೆ ಕುರಿತು ಮನವಿ ಸಲ್ಲಿಸಿದರು. ಮನವಿಗೆ ಸ್ಪಂದಿಸಿದ ಎಸ್‌ಪಿ ಅವರು, "ಜಿಲ್ಲೆಯ ಎಲ್ಲಾ ಪತ್ರಕರ್ತರು ಒಂದಾಗಿ ಸಮಾಜಸೇವೆಯ ಕಾರ್ಯದಲ್ಲಿ ತೊಡಗಿರುವುದು ಶ್ಲಾಘನೀಯ. ಯಾವುದೇ ಸಮಸ್ಯೆ ಎದುರಾದರೂ ಪೊಲೀಸ್ ಇಲಾಖೆ ನಿಮ್ಮೊಂದಿಗೆ ಇರುತ್ತದೆ. ಅಗತ್ಯ ರಕ್ಷಣೆ ಹಾಗೂ ಸಹಕಾರವನ್ನು ಒದಗಿಸಲಾಗುವುದು" ಎಂದು ಭರವಸೆ ನೀಡಿದರು.

ಪತ್ರಕರ್ತರ ಹಕ್ಕು, ಭದ್ರತೆ ಮತ್ತು ಗೌರವಕ್ಕಾಗಿ ಹೊಸ ನಾಯಕತ್ವದೊಂದಿಗೆ ಸಂಘಟನೆ ಕೈಗೊಂಡಿರುವ ಈ ಹೆಜ್ಜೆ ಜಿಲ್ಲೆಯ ಮಾಧ್ಯಮ ವಲಯದಲ್ಲಿ ಹೊಸ ಆಶಾಭಾವನೆ ಮೂಡಿಸಿದೆ.

## ಅಧಿಕಾರಿಗಳಿಂದ ಕೃಷಿ ಪರಿಕರಗಳ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಪಟ್ಟಣದ ಬದ್ರಿನಾಥ್ ಟ್ರೇಡರ್ಸ್ ಕಷಿ ಪರಿಕರ ಮಾರಾಟ ಮಳಿಗೆಗೆ ಭೇಟಿ ನೀಡಿದ್ದ ತಾಲೂಕ ಅಧಿಕಾರಿ ಎಡಿಎ ವಿಜಯಮೂರ್ತಿ ನೇತತ್ವದ ತಂಡ ಪರಿಕರಗಳ ತಪಾಸಣೆಗೆ ಮಾಡಿದರು.

ಕಷಿ ಪರಿಕರ ಮಳಿಗೆಯಲ್ಲಿ ಮಾರಾಟ ಮಾಡುವಂತಹ ರಸಗೊಬ್ಬರ, ಕೀಟನಾಶಕ, ಬಿತ್ತನೆಬೀಜಗಳ ಧರಪಟ್ಟಿ, ಸಂಬಂಧಪಟ್ಟ ಸರಬರಾಜುದಾರರ ಸಂಸ್ಥೆ ನೀಡಿರುವ ಪ್ರಮಾಣ ಪತ್ರದಲ್ಲಿರುವ ಪರಿಕರಗಳನ್ನು ಹಾಗೂ ಅಂಗಡಿ ಪರವಾನಿಗೆ, ಅವಧಿ ಮೀರಿದ ಕೀಟನಾಶಕ, ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಿರುವ ವಿವರಗಳನ್ನು ಪರಿಶೀಲಿಸಿದರು. ಅಧಿನಿಯಮ ಉಲಂಗಿಸಿದ ಪರಿಣಾಮ ಮಾಲೀಕರಿಗೆ ಶೋ ಕಾರ್ಡ್ ನೋಟೀಸ್ ನೀಡಲಾಯಿತು.

ಕೃಷಿ ಅಧಿಕಾರಿ ಶ್ರೀಶೈಲಬೋವಿ, ತಾಂತ್ರಿಕ ಅಧಿಕಾರಿ ಅಮರೇಗೌಡ ಸೇರಿದಂತೆ ರೈತರು ಉಪಸ್ಥಿತರಿದ್ದರು.

## ಗುರುಕುಲದಲ್ಲಿ ಐಐಟಿ ಸಾಧಕ ವಿಶ್ವರಾಜಗೆ ಸನ್ಮಾನ ಪ್ರಯತ್ನದ ಫಲ ಸಿಹಿಯಾಗಿರುತ್ತದೆ: ಕೋಸಂಬೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ವಿದ್ಯಾರ್ಥಿಗಳು ಶೈಕ್ಷಣಿಕ ಜೀವನದಲ್ಲಿ ಸಾಧನೆಗೈಯಲು ನಿರಂತರ ಪ್ರಯತ್ನ ಮಾಡುತ್ತಿರಬೇಕು. ಪ್ರಯತ್ನದ ಫಲ ಯಾವಾಗಲೂ ಸಿಹಿಯಾಗಿರುತ್ತದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠದ ನಿರ್ದೇಶಕ ಶಶಿಧರ ಕೋಸಂಬೆ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪಿಯು ಕಾಲೇಜಿನಲ್ಲಿ ಜೆಇಇ ಅಡ್ವಾನ್ಸ್ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದು ಅಂಕವಿಕಲರ ಕೋಟಾದಲ್ಲಿ ದೇಶಕ್ಕೆ ಮೊದಲ ಯಾರ್ಂಕ್ ಪಡೆದ ವಿದ್ಯಾರ್ಥಿ ವಿಶ್ವರಾಜನನ್ನು ಸನ್ಮಾನಿಸಿ ಅವರು ಮಾತನಾಡಿದರು.

ಸಂಸ್ಥೆಯ ಕಾರ್ಯದರ್ಶಿ ಮಹಾಲಿಂಗ ಸ್ವಾಮೀಜಿ ಮಾತನಾಡಿ, ಗುರುಕುಲ ಶಿಕ್ಷಣ ಸಂಸ್ಥೆಯಲ್ಲಿ ಉತ್ತಮ ಸಂಸ್ಕಾರದೊಂದಿಗೆ ಗುಣಾತ್ಮಕ ಶಿಕ್ಷಣವನ್ನು ಪರಮ ಪೂಜ್ಯ ಬಸವಲಿಂಗ ಪಟ್ಟದ್ದೇವರು ಧಾರೆ ಎರೆಯುತ್ತಿರುವುದರ ಫಲವಾಗಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ರಾಷ್ಟ್ರಮಟ್ಟದ ಪರೀಕ್ಷೆಯಲ್ಲಿ ಮಹೋನ್ನತ ಸಾಧನೆ ಮಾಡುತ್ತಿದ್ದಾರೆ ಎಂದು ತಿಳಿಸಿದರು. ಆಡಳಿತಾಧಿಕಾರಿ ಮೋಹನರೆಡ್ಡಿ, ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ ಸೇರಿದಂತೆ ಉಪನ್ಯಾಸಕರು ಇದ್ದರು.

## ಅನಧಿಕೃತ ಕಾಲೇಜಿನ ಮಾನ್ಯತೆ ರದ್ದುಪಡಿಸಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ನಗರದಲ್ಲಿ ಅನಧಿಕೃತವಾಗಿ ನಡೆಯುತ್ತಿರುವ ಮಹಾತ್ಮ ಗಾಂಧಿ ಪದವಿ ಪೂರ್ವ ಕಾಲೇಜಿನ ಆಡಳಿತ ಮಂಡಳಿ ಜತೆಗೆ ಸುಳ್ಳು ಮಾಹಿತಿ ನೀಡಿದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವಂತೆ ತಾಲೂಕು ದಲಿತ ಸಂಘರ್ಷ ಸಮಿತಿ ಒತ್ತಾಯಿಸಿದೆ. ಈ ಕುರಿತು ನಗರದ ತಹಸೀಲ್ ಕಚೇರಿಯಲ್ಲಿ ತಾಲೂಕು ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ತಹಸೀಲ್ದಾರ ಮೂಲಕ ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಿದರು.

ನಂತರ ತಾಲೂಕು ದಲಿತ ಸಂಘರ್ಷ ಸಮಿತಿ ಸಂಚಾಲಕ ಪ್ರವೀಣ ಮೋರೆ ಮಾತನಾಡಿ, ನಗರದಲ್ಲಿ ಮಹಾತ್ಮ ಗಾಂಧಿ ಪದವಿ ಪೂರ್ವ ಕಾಲೇಜಿನ ಹೆಸರಿನಲ್ಲಿ ಅನಧಿಕೃತ ಶಿಕ್ಷಣ ಸಂಸ್ಥೆ ನಡೆಸಲಾಗುತ್ತಿದೆ. ಈ ಸಂಸ್ಥೆಯಲ್ಲಿ ಕೇವಲ ದಾಖಲೆಗಳಲ್ಲಿ ಮಾತ್ರ ನಡೆಯುತ್ತಿದೆ. ಕಾಲೇಜಿಗೆ

ಯಾವುದೇ ಸ್ವಂತ ಅಥವಾ ಬಾಡಿಗೆ ಕಟ್ಟಡವಿಲ್ಲ, ಅಗತ್ಯವಿರುವ ಮೂಲ ಸೌಕರ್ಯಗಳಿಲ್ಲ, ಯಾವುದೇ ಬೋಧಕ/ಬೋಧಕೇತರ ಸಿಬ್ಬಂದಿ ಇಲ್ಲ ಮತ್ತು ಒಬ್ಬನೇ ಒಬ್ಬ ವಿದ್ಯಾರ್ಥಿಯೂ ಕೂಡ ಇಲ್ಲಿ ನಿಜವಾಗಿ ವ್ಯಾಸಂಗ ಮಾಡುತ್ತಿಲ್ಲ. ಕೇವಲ ಕಾಗದದ ಹಾಳೆಗಳಲ್ಲಿ ವಿದ್ಯಾರ್ಥಿಗಳ ಹೆಸರನ್ನು ಸೃಷ್ಟಿಸಿ ಈ ನಕಲಿ ಕಾಲೇಜನ್ನು ನಡೆಸಲಾಗುತ್ತಿದೆ.

ಈ ಕುರಿತು ನಾನು ಮಾಹಿತಿ ಹಕ್ಕು ಕಾಯಿದೆಯಡಿ ಮಾಹಿತಿ ಕೋರಿ ಅರ್ಜಿ ಸಲ್ಲಿಸಿದ್ದೆ. ಆದರೆ, ಸದರಿ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸದೆ, ಅಕ್ರಮವನ್ನು ಮುಚ್ಚಿಹಾಕುವ ಉದ್ದೇಶದಿಂದ ಬೇರೆ ಸಂಸ್ಥೆಯ/ಶಾಲೆಯ ಗೋಡೆಗೆ ಈ ನಕಲಿ ಕಾಲೇಜಿನ ಬೋರ್ಡ್ ಅನ್ನು ತಾತ್ಕಾಲಿಕವಾಗಿ ಅಂಟಿಸಿ, ಅದನ್ನೇ ಕಾಲೇಜಿನ ಕಟ್ಟಡವೆಂದು ಬಿಂಬಿಸಿ ನನಗೆ ಸುಳ್ಳು ಮತ್ತು ದಾರಿ ತಪ್ಪಿಸುವ ಮಾಹಿತಿಯನ್ನು ನೀಡಿದ್ದಾರೆ.

ಶಿಕ್ಷಣ ಇಲಾಖೆಯ ನಿಯಮಾವಳಿಗಳನ್ನು ಗಾಳಿಗೆ ತೂರಿ, ಸರಕಾರದ ಸವಲತ್ತು ಅಥವಾ ಅನುದಾನವನ್ನು ದುರುಪಯೋಗಪಡಿಸಿಕೊಳ್ಳುವ ಉದ್ದೇಶದಿಂದ ಈ ನಕಲಿ ಕಾಲೇಜನ್ನು ಸೃಷ್ಟಿಸಲಾಗಿದೆ ಎಂಬುದು ಮೇಲ್ನೋಟಕ್ಕೆ ಸ್ಪಷ್ಟವಾಗುತ್ತದೆ. ಇದಕ್ಕೆ ಸ್ಥಳೀಯ ಶಿಕ್ಷಣ ಇಲಾಖೆಯ ಕೆಲವು ಅಧಿಕಾರಿಗಳು ಕೂಡ ಶಾಮೀಲಾಗಿರುವ ಶಂಕೆ ಇದೆ.

ಆದ್ದರಿಂದ, ಮಾನ್ಯ ನಿರ್ದೇಶಕರು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ಬೆಂಗಳೂರಿನ ಉನ್ನತ ಮಟ್ಟದ ಅಧಿಕಾರಿಗಳ ತಂಡದಿಂದ ಜಂಟಿ ಸ್ಥಳ ಪರಿಶೀಲನೆ ನಡೆಸಿ, ಈ ನಕಲಿ ಕಾಲೇಜಿನ ಮಾನ್ಯತೆಯನ್ನು ತಕ್ಷಣವೇ ರದ್ದುಪಡಿಸಬೇಕು. ಹಾಗೆಯೇ, ಸರಕಾರಕ್ಕೆ ವಂಚಿಸಿ ಸುಳ್ಳು ವರದಿ ನೀಡಿದ ಬೀದರ್ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಮತ್ತು ಕಾಲೇಜಿನ ಆಡಳಿತ ಮಂಡಳಿಯ ವಿರುದ್ಧ ಕಾನೂನು ರೀತಿ ಕಠಿಣ ಶಿಸ್ತುಕ್ರಮ ಕೈಗೊಳ್ಳಬೇಕಾಗಿ ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ಪ್ರಮುಖರಾದ ತುಕಾರಾಮ ಕಾಸ್ಲೆ, ರಾಜಕುಮಾರ, ಶಶಿಕಾಂತ ಸೇರಿದಂತೆ ಹಲವರು ಇದ್ದರು.

## ಈಶ್ವರ ಖಂಡ್ರೆಗೆ ಉಪ ಮುಖ್ಯಮಂತ್ರಿ ಸ್ಥಾನಕ್ಕಾಗಿ ರಕ್ತದಲ್ಲಿ ಪತ್ರ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಶಾಸಕ ಈಶ್ವರ್ ಖಂಡ್ರೆ ಅವರಿಗೆ ನೂತನ ಕಾಂಗ್ರೆಸ್ ಸರ್ಕಾರದಲ್ಲಿ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿ ಅವರ ಬೆಂಬಲಿಗ ಶಿವು ಮಡಿವಾಳ ರಕ್ತದಲ್ಲಿ ಎಐಸಿಸಿ ಅಧ್ಯಕ್ಷರಿಗೆ ಬರೆದ ಪತ್ರವನ್ನು ನಗರದಲ್ಲಿ ತಹಶೀಲ್ದಾರ್ ಗೆ ಸಲ್ಲಿಸಿದರು.

ಶಾಸಕ ಈಶ್ವರ ಖಂಡ್ರೆ ಯುವ ಬೆಂಬಲಿಗರಾದ ಗಜಾನಂದ ಚಳಕಾಪುರೆ, ದತ್ತು ಸಾವರೆ, ಅಪ್ಪು ಮದ್ನುರೆ, ಸತೀಶ ಮಡಿವಾಳ, ಸಂಗಮೇಶ ಕಣಜೆ, ಧ್ರುವ ಬಿರಾದಾರ, ಕಿರಣ ಅಂಬರಶೆಟ್ಟೆ, ಪಿಂಟು, ಲಿಂಗರಾಜ ಉಡಬಳೆ, ಈಶ್ವರ ಖಂಡಾಳೆ, ರೋಹನ ಸಿಂಧೆ, ರಾಹುಲ್ ಮೇತ್ರೆ, ಗೋವಿಂದ ಶೆಟಕಾರ, ಶರಣು ಇದ್ದರು.

## ರಸ್ತೆ ಅತಿಕ್ರಮಣ ತೆರವಿಗೆ ಕ್ರಮ : ಡಿಸಿ ಸಂಗಪ್ಪ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

3– ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಹೆದ್ದಾರಿಗಳಲ್ಲಿ ವಾಹನ ಸಂಚಾರದ ಸುರಕ್ಷತೆಗೆ ಅಡ್ಡಿಯಾಗಿರುವ ಅನಧಿಕೃತ ವಾಣಿಜ್ಯ ಕಟ್ಟಡಗಳು ಹಾಗೂ ದಾಬಾಗಳನ್ನು ಗುರುತಿಸಿ ನಿಯಮಾನುಸಾರ ತೆರವುಗೊಳಿಸಲು ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಹೆದ್ದಾರಿ ರಸ್ತೆ ಸುರಕ್ಷತೆ ಕುರಿತು ಜರುಗಿದ ಜಿಲ್ಲಾ ಟಾಸ್ಕಫೋರ್ಸ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹೆದ್ದಾರಿ ರಸ್ತೆ ವ್ಯಾಪ್ತಿಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಅಪಘಾತಗಳು ಸಂಭವಿಸುತ್ತಿವೆ. ಅಪಘಾತಗಳ ಸಂಖ್ಯೆ ಕಡಿಮೆ ಮಾಡುವ ನಿಟ್ಟಿನಲ್ಲಿ ಸರ್ವೋಚ್ಛ ನ್ಯಾಯಾಲಯ ನೀಡಿರುವ ನಿರ್ದೇಶನಗಳು ಕಟ್ಟುನಿಟ್ಟಾಗಿ ಪಾಲನೆ ಆಗಬೇಕಿದೆ. ಈ ಹಿನ್ನಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಇಲಾಖೆ ಮಾರ್ಕಿಂಗ್ ಮಾಡಿಕೊಟ್ಟಲ್ಲಿ ಲೋಕೋಪಯೋಗಿ, ಸಾರಿಗೆ ಇಲಾಖೆ ಹಾಗೂ ಪೊಲೀಸ್ ಇಲಾಖೆಯೊಂದಿಗೆ ಜಂಟಿ ಸರ್ವೆ ಕೈಗೊಂಡು ಅತಿಕ್ರಮಣಗಳ ಪಟ್ಟಿ ಮಾಡಲು ಕ್ರಮವಹಿಸಲಾಗುತ್ತದೆ ಎಂದರು.

ಅಪಘಾತ ಹೆಚ್ಚಾಗಿ ಸಂಭವಿಸುವ ಸ್ಥಳಗಳನ್ನು ಗುರುತಿಸಿ, ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು. ಎಚ್ಚರಿಕೆ ಫಲಕಗಳ ಅಳವಡಿಕೆ, ವೇಗ ನಿಯಂತ್ರಣ ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮುಂದಾಗಬೇಕು. ಅನುಷ್ಠಾನಗೊಳಿಸಿದ ಬಗ್ಗೆ ಸಂಬಂಧಿಸಿದ ಇಲಾಖೆಗಳು ಮಾಹಿತಿ ನೀಡುವ ಕೆಲಸವಾಗಬೇಕು. ಪಾರ್ಕಿಂಗ್ ವ್ಯವಸ್ಥೆ, ಸೌಲಭ್ಯಗಳ ಹಾಗೂ ಇತರೆ ಕಾರ್ಯ ಕೈಗೊಂಡ ಬಗ್ಗೆ ಅನುಸರಣಾ ವರದಿ ನೀಡುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಕೆಲವೊಂದು ಹೆದ್ದಾರಿ ರಸ್ತೆಗಳಲ್ಲಿ ಬಿಳಿ ಪಟ್ಟಿ ಇರುವುದಿಲ್ಲ. ಬಿಳಿ ಪಟ್ಟಿ ಹಾಕಲು ತಕ್ಷಣ ಕ್ರಮಕೈಗೊಳ್ಳುವಂತೆ ಅವರು ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್ ಮಾತನಾಡಿ, ರಸ್ತೆ ಅತಿಕ್ರಮಣ ತೆರವಿಗೆ ಪೊಲೀಸ್ ಇಲಾಖೆ ಸಹಕಾರ ನೀಡಲಿದ್ದು, ಇದಕ್ಕೂ ಮೊದಲು ಎಲ್ಲೆಲ್ಲಿ ಅತಿಕ್ರಮವಾಗಿದೆ ಎಂಬುದರ ಬಗ್ಗೆ ಪಟ್ಟಿ ಮಾಡಿಕೊಳ್ಳಿ. ನಂತರ ತೆರವಿಗೆ ಕ್ರಮವಹಿಸಲು ಅನುಕೂಲವಾಗುತ್ತದೆ. ಈ ಕಾರ್ಯದಲ್ಲಿ ಜಂಟಿ ಕಾರ್ಯಾಚರಣೆ ಅಗತ್ಯವಾಗಿದೆ ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಹೆದ್ದಾರಿ ರಸ್ತೆಗಳಲ್ಲಿ ಅತಿಕ್ರಮಣಗೊಂಡ ಬಗ್ಗೆ ಮಾಹಿತಿ ನೀಡಿದಲ್ಲಿ ಪರವಾನಿಗೆ ಪಡೆದಿದ್ದಲ್ಲಿ ರದ್ದತಿಗೆ ಹಾಗೂ ಪರವಾನಿಗೆ ಕೊಡದಂತೆ ಕ್ರಮ ಜರುಗಿಸುವಂತೆ ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ ಅವರಿಗೆ ತಿಳಿಸಲಾಯಿತು.

ಸಭೆಯಲ್ಲಿ ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರ ದುರ್ಗಾದಾಸ್, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಾರ್ಯಪಾಲಕ ಅಭಿಯಂತರ ಪವನಕುಮಾರ, ಪ್ರಾದೇಶಿಕ ಸಾರಿಗೆ ಅಧಿಕಾರಿ ಚಂದ್ರಶೇಖರ ಪಾಟೀಲ, ಜಿಲ್ಲಾ ಸಂಚಾರಿ ಅಧಿಕಾರಿ ಕೆ.ಕೆ.ಲಮಾಣಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕೊಪ್ಪಳ ಜಿಲ್ಲೆಯಲ್ಲಿ ಮನೆಗೊಂದು ಗ್ರಂಥಾಲಯ ಅನುಷ್ಠಾನ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ನಮ್ಮೆಲ್ಲರ ಮನೆಯಲ್ಲಿ ಭಕ್ತಿಗಾಗಿ ದೇವರ ಕೋಣೆ ಇರುವಂತೆ, ಪುಸ್ತಕಕ್ಕೂ ಮೀಸಲು ಜಾಗ ಇರಲಿ, ಪುಸ್ತಕ ಕೋಣೆ ಇರಲಿ ಎಂದು ಕನ್ನಡ ಪುಸ್ತಕ ಪ್ರಾಧಿಕಾರ ಅಧ್ಯಕ್ಷರಾದ ಡಾ.ಮಾನಸ ಅವರು ಸಲಹೆ ಮಾಡಿದರು.

ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕನ್ನಡ ಪುಸ್ತಕ ಪ್ರಾಧಿಕಾರದಿಂದ ನಗರದ ಎನ್.ಜಿ.ಓ ಕಾಲೋನಿಯಲ್ಲಿನ ಲೇಖಕರು ಹಾಗೂ ರಂಗಕರ್ಮಿಗಳಾದ ನಾಗರಾಜನಾಯಕ ಡಿ. ಡೊಳ್ಳಿನ ಅವರ ಅಪ್ಪಾಜಿ ನಿಲಯದ ಮನೆಯಲ್ಲಿ ಮನೆಗೊಂದು ಗ್ರಂಥಾಲಯ ಕಾರ್ಯಕ್ರಮದಡಿ ಜೂನ್ 2ರಂದು ಏರ್ಪಡಿಸಲಾಗಿದ್ದ ಪುಸ್ತಕ ಪ್ರದರ್ಶನಕ್ಕೆ ದೀಪ ಬೆಳಗಿಸಿ ಚಾಲನೆ ಅವರು ಮಾತನಾಡಿದರು.ಪ್ರತಿಯೊಬ್ಬರ ಮನೆಯಲ್ಲೂ ಪುಸ್ತಕಗಳಿರಬೇಕು ಎಂಬುದು ಭಾರತ ಭಾಗ್ಯವಿಧಾತ ಡಾ.ಬಿ.ಆರ್.ಅಂಬೇಡ್ಕರ್ ಅವರ ಕನಸು. ಓದು ಮನುಷ್ಯನನ್ನು ಪ್ರಜ್ಞಾವಂತನನ್ನಾಗಿಸುತ್ತದೆ. ಸಮಾಜದಲ್ಲಿ ಉತ್ತಮ ನಾಗರಿಕರಾಗಲು ಓದು ತುಂಬಾ ಸಹಕಾರಿಯಾಗಲಿದೆ. ಇಂದಿನ ಒತ್ತಡದ ಬದುಕಿನಲ್ಲಿ ಓದು ಮಾತ್ರ ನಮ್ಮನ್ನು ಶಾಂತವಾಗಿರುವಂತೆ ಮಾಡುತ್ತದೆ. ಪುಸ್ತಕಗಳು ಉತ್ತಮ ಸ್ನೇಹಿತರಿದ್ದಂತೆ. ಓದು ಮತ್ತು ಲೇಖಕ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಈ ವರೆಗೂ ಲೇಖಕನಿಗೆ ಸಿಕ್ಕ ಗೌರವ ಓದುಗನಿಗೆ ಸಿಗುತ್ತಿರಲಿಲ್ಲ. ಇದನ್ನರಿತು ಕನ್ನಡ ಪುಸ್ತಕ ಪ್ರಾಧಿಕಾರವು ಓದುಗ ಪ್ರತಿ ಮನೆಯಲ್ಲೂ ಇರಲಿ ಎನ್ನುವ ಆಶಯದೊಂದಿಗೆ ಈ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.ಶಿಕ್ಷಕರಾದ ಶಿವಮ್ಮ, ಉಪನ್ಯಾಸಕರಾದ ನಿಂಗಪ್ಪ ಕಂಬಳಿ, ಮುಖ್ಯಾಧ್ಯಾಪಕರಾದ ವಿಕಯಲಕ್ಷ್ಮಿ ??ೀ, ಮಾರುತಿ ಕಟ್ಟಿಮನಿ ಗೆಳೆಯರ ಬಳಗ ಗುಡಿ ಗ್ರಂಥಾಲಯ ನಿರ್ಮಾಣ ಮಾಡಿದ್ದಕ್ಕಾಗಿ ಈ ಐವರ ಮನೆಗೆ ತೆರಳಿ ಕನ್ನಡ ಪುಸ್ತಕ ಪ್ರಾಧಿಕಾರದಿಂದ ಗೌರವಿಸಿ ಸನ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಜಿಲ್ಲಾ ಗ್ರಂಥಾಲಯ ಜಾಗೃತಿ ಸಮಿತಿ ಸಂಚಾಲಕ ಜಿ.ಎಸ್.ಗೋನಾಳ, ಜಿಲ್ಲಾ ಗ್ರಂಥಾಲಯ ಜಾಗೃತಿ ಸಮಿತಿ ಸದಸ್ಯರಾದ ಸಾವಿತ್ರಿ ಮುಜುಂದಾರ, ಫಕೀರಪ್ಪ ವಜ್ರಬಂಡಿ, ನಿವೃತ್ತ ಉಪನ್ಯಾಸಕರಾದ ಎಸ್.ಎ.ರಜಪೂತ, ಉಪಪ್ರಾಂಶುಪಾಲರಾದ ಮಂಜುನಾಥ ಚಿತ್ರಗಾರ ಮತ್ತಿತರರು ಹಾಜರಿದ್ದರು.

## ಈಶ್ವರ ಖಂಡ್ರೆ ಸಚಿವರಾಗಿ ಪ್ರಮಾಣ ವಚನ: ಪ್ರವೀಣ ಪಾಟೀಲ ಹರ್ಷ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ನಮ್ಮ ಭಾಗದ ಹೆಮ್ಮೆಯ ನಾಯಕರು ಹಾಗೂ ಜನಪ್ರಿಯ ಮುಖಂಡರಾದ ಶ್ರೀ ಈಶ್ವರ ಬಿ.ಖಂಡ್ರೆ ಅವರು ಮೂರನೇ ಬಾರಿಗೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿರುವುದು ಇಡೀ ಕ್ಷೇತ್ರಕ್ಕೆ ಮತ್ತು ನಮಗೆ ಅತ್ಯಂತ ಹೆಮ್ಮೆಯ ವಿಷಯವಾಗಿದೆ ಎಂದು ಕಾಂಗ್ರೆಸ್ ಮುಖಂಡರಾದ ಪ್ರವೀಣ ಪಾಟೀಲ ಅವರು ಪ್ರಕಟಣೆಯ ಮೂಲಕ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಮಾತನಾಡಿರುವ ಅವರು, "ಈಶ್ವರ ಖಂಡ್ರೆ ಅವರ ದಕ್ಷ ನಾಯಕತ್ವದಲ್ಲಿ ನಮ್ಮ ಭಾಗವು ಅಭಿವೃದ್ಧಿಯತ್ತ ಮುನ್ನಡೆಯುತ್ತಿದೆ. ಅವರು ಮೂರನೇ ಬಾರಿ ಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಿರುವುದರಿಂದ, ಮುಂಬರುವ ದಿನಗಳಲ್ಲಿ ನಮ್ಮ ರಾಜ್ಯ ಹಾಗೂ ನಮ್ಮ ಪ್ರದೇಶವು ಮತ್ತಷ್ಟು ಉನ್ನತಿ ಮತ್ತು ಪ್ರಗತಿ ಸಾಧಿಸುವುದು ನೂರಕ್ಕೆ ನೂರರಷ್ಟು ಖಚಿತ," ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಖಂಡ್ರೆ ಅವರ ಸಚಿವ ಸ್ಥಾನವು ಈ ಭಾಗದ ಜನರಲ್ಲಿ ಹೊಸ ಭರವಸೆಯನ್ನು ಮೂಡಿಸಿದೆ ಎಂದು ಅವರು ಹೇಳಿದ್ದಾರೆ.

## ಅತಿಥಿ ಶಿಕ್ಷಕರ ನೇಮಕ: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕರ್ನಾಟಕ ವಸತಿಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವವಸತಿ ಶಾಲೆಗಳಲ್ಲಿ 2026–27ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ವಿಷಯ ಶಿಕ್ಷಕರು ಹಾಗೂ ಉಪನ್ಯಾಸಕರ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ಗೌರವಧನದ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಹಂತದಲ್ಲಿ ಅರ್ಜಿಗಳನ್ನು ಆಹ್ವಾನಿಸಿದೆ.ಜಿಲ್ಲಾ ವೆಬ್‌ಸೈಟ್ www.koppalnicin ದಲ್ಲಿ "2026–27ನೇ ಸಾಲಿಗೆ ಕರ್ನಾಟಕವಸತಿಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿರುವ ವಸತಿ ಶಾಲೆಗಳಲ್ಲಿ ಅತಿಥಿಶಿಕ್ಷಕರು ಮತ್ತು ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ" ಎಂಬ ಶಿ?ರ್ಷಿಕೆಯಡಿಯಲ್ಲಿ ಪ್ರಕಟಿಸಲಾಗಿದ್ದು ವಿವರವಾದ ಮಾಹಿತಿಯನ್ನು ವೆಬ್‌ಸೈಟ್ ಮೂಲಕ ಪಡೆದುಕೊಳ್ಳಬಹುದು. ಅರ್ಹ ಆಸಕ್ತ ಅಭ್ಯರ್ಥಿಗಳು ಜಿಲ್ಲಾ ವೆಬ್‌ಸೈಟ್‌ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಹಾಗೂ ಆಯ್ಕೆ ಸಮಿತಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ : ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಜೂ 03: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು/ಮಾಧ್ಯಮ ಸಂಸ್ಥೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಗೆ ತಿದ್ದುಪಡಿ ಮಾಡಲಾದ ಹೊಸ ಮಾರ್ಗಸೂಚಿಯನ್ವಯ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.ಪತ್ರಕರ್ತರು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ "ಪೂರ್ಣಾವಧಿ/ ಅರೆಕಾಲಿಕ ವರದಿಗಾರರಾಗಿ ನೇಮಕವಾಗಿದ್ದಲ್ಲಿ ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ/ಸ್ಥಾನಿಕ ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸು ಪತ್ರ ಮತ್ತು ಸೇವಾ ಪ್ರಮಾಣ ಪತ್ರವನ್ನು ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ https://sevasindhu.karnataka.gov.in ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.2025ರ ಸೆಪ್ಟೆಂಬರ್ 12ರ ನಂತರ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಮತ್ತೊಮ್ಮೆ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.ಈ ಹಿಂದೆ ಇದ್ದ ಮಾರ್ಗಸೂಚಿಯಲ್ಲಿ 11 ತಿಂಗಳ ವೇತನ ಪತ್ರ ಸಲ್ಲಿಸಬೇಕು ಎಂಬ ಷರತ್ತನ್ನು ಸಡಿಲಿಸಿ. ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ, ಸ್ಥಾನಿಕ ಸಂಪಾದಕರ/ಮುಖ್ಯಸ್ಥರ ಶಿಫಾರಸ್ಸು ಪತ್ರವನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ. ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ತಾಲ್ಲೂಕು ಮಟ್ಟದ ಪತ್ರಕರ್ತರಿಗೆ ಸುದ್ದಿ ಸಂಗ್ರಹಿಸಲು ಅನುಕೂಲ ಕಲ್ಪಿಸಲು ಸರ್ಕಾರವು ವಾರ್ತಾ ಇಲಾಖೆಯ ಮೂಲಕ ಉಚಿತ ಬಸ್ ಪಾಸ್ ಗಳನ್ನು ನೀಡುತ್ತಿದೆ.

## ಪೆಟ್ರೋಲ್, ಡೀಸೆಲ್ ಸಾಕಷ್ಟು ದಾಸ್ತಾನು ಲಭ್ಯ: ತಹಶೀಲ್ದಾರ್ ವರ್ಮಾ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 03 : ರಾಯಚೂರು ತಾಲೂಕಿನಾದ್ಯಂತಹ ಪೆಟ್ರೋಲ್ ಬಂಕ್‌ಗಳಲ್ಲಿ ಹಾಗೂ ಗ್ಯಾಸ್ ಏಜೆನ್ಸಿಗಳಲ್ಲಿ ಸಾಕಷ್ಟು ಮಟ್ಟದ ದಾಸ್ತಾನು ಸೌಲಭ್ಯವಿದ್ದು, ಸಾರ್ವಜನಿಕರು, ಗ್ರಾಹಕರು, ವಾಹನ ಮಾಲೀಕರು ಯಾವುದೇ ರೀತಿಯಾಗಿ ಆತಂಕಪಡದಂತೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ತಿಳಿಸಿದ್ದಾರೆ.

ಯಾರಾದರೂ ಪೆಟ್ರೋಲ್, ಡೀಸೆಲ್ ಬಂಕ್ ಅಥವಾ ಗ್ಯಾಸ ಏಜೆನ್ಸಿ ಮಾಲಿಕರು ಅಥವಾ ವಿತರಕರು ಎಲ್.ಪಿ.ಜಿ ಗ್ಯಾಸ್, ಪೆಟ್ರೋಲ್ ಅಥವಾ ಡೀಸೆಲ್ಗಳನ್ನು ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದಲ್ಲಿ ಏಜೆನ್ಸಿ ಮಾಲಿಕರು ಅಥವಾ ವಿತರಕರ ವಿರುದ್ಧ ಶಿಸ್ತುಕ್ರಮ ಕೈಗೊಂಡು ಮಾರಾಟ ಪರವಾನಗಿಯನ್ನು ರದ್ದು ಮಾಡಲಾಗುವುದು.ಪೆಟ್ರೋಲ್ ಬಂಕ್ ಅಥವಾ ಗ್ಯಾಸ್ ಏಜೆನ್ಸಿ ಮಾಲಿಕರು/ವಿತರಕರು ನೋ ಸ್ಟಾಕ್ ಎಂದು ಬಿತ್ತಿ ಪತ್ರವನ್ನು ಅಂಟಿಸಬಾರದು. ಮುಂಜಾಗ್ರತವಾಗಿ ದಾಸ್ತಾನು ಸಂಗ್ರಹಣೆಯನ್ನು ಪರಿಗಣಿಸಿ ಎಲ್.ಪಿ.ಜಿ ಗ್ಯಾಸ್/ಪೆಟ್ರೋಲ್, ಡೀಸೆಲ್ ಖರೀದಿ ಮಾಡಿ ಸಾರ್ವಜನೀಕರಿಗೆ ಮಾರಾಟ ಮಾಡುವುದು.ಪೆಟ್ರೋಲ್ ಅಥವಾ ಡೀಸೆಲ್ ನಲ್ಲಿ ಯಾವುದೇ ರೀತಿ ಅಭಾವ ಇರುವುದಿಲ್ಲ. ಯಾವುದೇ ರೀತಿಯಾಗಿ ಕೃತಕವಾಗಿ ಅಭಾವ ಸೃಷ್ಟಿಸುವ ಸಾಮಾಜಿಕ ಜಾಲತಾಣದಲ್ಲಿ ಬರುವಂತಹ ಸಂದೇಶಗಳಿಗೆ ಕಿವಿಕೊಡದೇ ನಿಶ್ಚಿಂತೆಯಾಗಿ ಇರಬೇಕೆಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂರನೇ ಬಾರಿಗೆ ಸಚಿವರಾಗಿ ಆಯ್ಕೆಯಾದ ಈಶ್ವರ ಖಂಡ್ರೆ

## ಜನಸೇವೆ, ಅಭಿವೃದ್ಧಿ ,ನಾಯಕತ್ವದ ಯಶೋಗಾಥೆ ಜನರ ಆಶೀರ್ವಾದ, ನಾಯಕತ್ವದ ಸಾಧನೆ

**ಪರಶುರಾಮ ಕರಣಂ**

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಕರ್ನಾಟಕ ರಾಜಕೀಯದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಪ್ರಭಾವಿ ನಾಯಕರಲ್ಲಿ ಒಬ್ಬರಾಗಿ ಗುರುತಿಸಿಕೊಂಡಿರುವ ಈಶ್ವರ ಖಂಡ್ರೆ ಅವರು ಮೂರನೇ ಬಾರಿಗೆ ಸಚಿವರಾಗಿ ಆಯ್ಕೆಯಾಗಿರುವುದು ಅವರ ದೀರ್ಘ ರಾಜಕೀಯ ಅನುಭವ, ಜನಪರ ಕಾರ್ಯಶೈಲಿ ಮತ್ತು ಅಭಿವೃದ್ಧಿ ಪರ ಚಿಂತನೆಗೆ ಸಂದ ಗೌರವವಾಗಿದೆ. ಜನರೊಂದಿಗೆ ನಿರಂತರ ಸಂಪರ್ಕ, ಆಡಳಿತಾತ್ಮಕ ದಕ್ಷತೆ ಹಾಗೂ ಪಕ್ಷದ ಮೇಲಿನ ನಿಷ್ಠೆಯ ಮೂಲಕ ಅವರು ರಾಜ್ಯ ರಾಜಕೀಯದಲ್ಲಿ ತಮ್ಮದೇ ಆದ ವಿಶಿಷ್ಟ ಸ್ಥಾನವನ್ನು ನಿರ್ಮಿಸಿಕೊಂಡಿದ್ದಾರೆ.ದಿವಂಗತ ಭೀಮಣ್ಣ ಖಂಡ್ರೆ ಅವರ ರಾಜಕೀಯ ಪರಂಪರೆಯನ್ನು ಮುಂದುವರಿಸಿಕೊಂಡು ಸಾರ್ವಜನಿಕ ಜೀವನಕ್ಕೆ ಬಂದ ಈಶ್ವರ ಖಂಡ್ರೆ ಅವರು, ಭಾಲ್ಕಿ ಕ್ಷೇತ್ರದ ಅಭಿವೃದ್ಧಿಯನ್ನೇ ತಮ್ಮ ರಾಜಕೀಯ ಧ್ಯೇಯವನ್ನಾಗಿ ಮಾಡಿಕೊಂಡಿದ್ದಾರೆ. ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಅವರು ಸಾಮಾನ್ಯ ಜನರ ನಾಯಕನಾಗಿ ಹೊರಹೊಮ್ಮಿದ್ದಾರೆ. ಹಲವು ಬಾರಿ ಭಾಲ್ಕಿ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿರುವುದು ಅವರ ಮೇಲಿನ ಜನರ ವಿಶ್ವಾಸಕ್ಕೆ ಸಾಕ್ಷಿಯಾಗಿದೆ.

ಸಚಿವರಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಖಂಡ್ರೆ ಅವರು ವಿವಿಧ ಇಲಾಖೆಗಳ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಿದ್ದಾರೆ. ವಿಶೇಷವಾಗಿ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಸಚಿವರಾಗಿ ರಾಜ್ಯದ ಹಸಿರು ಸಂಪತ್ತಿನ ಸಂರಕ್ಷಣೆ, ಅರಣ್ಯ ವಿಸ್ತರಣೆ ಹಾಗೂ ಪರಿಸರ ಸಂರಕ್ಷಣೆಗೆ ಮಹತ್ವದ ಕ್ರಮಗಳನ್ನು ಕೈಗೊಂಡಿದ್ದಾರೆ. ಅರಣ್ಯ ಪ್ರದೇಶಗಳ ಅಭಿವೃದ್ಧಿ, ವನ್ಯಜೀವಿ ಸಂರಕ್ಷಣೆ ಮತ್ತು ಪರಿಸರ ಜಾಗೃತಿಗೆ ಸಂಬಂಧಿಸಿದ ಹಲವು ಯೋಜನೆಗಳಿಗೆ ಚಾಲನೆ ನೀಡಿ ಗಮನ ಸೆಳೆದಿದ್ದಾರೆ.

ಭಾಲ್ಕಿ ಕ್ಷೇತ್ರದ ಅಭಿವೃದ್ಧಿಯಲ್ಲಿ ಅವರ ಕೊಡುಗೆ ಗಮನಾರ್ಹವಾಗಿದೆ. ರಸ್ತೆ, ಕುಡಿಯುವ ನೀರು, ಶಿಕ್ಷಣ, ಆರೋಗ್ಯ, ನೀರಾವರಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ವಿಶೇಷ ಒತ್ತು ನೀಡಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಸಾವಿರಾರು ಜನರ ಜೀವನಮಟ್ಟ ಸುಧಾರಣೆಗೆ ಕಾರಣರಾಗಿದ್ದಾರೆ.



ಕಲ್ಯಾಣ ಕರ್ನಾಟಕ ಭಾಗದ ಹಿತಾಸಕ್ತಿಗಾಗಿ ಸದಾ ಧ್ವನಿಯಾಗಿರುವ ಖಂಡ್ರೆ ಅವರು, ಈ ಭಾಗ–ಕ್ಕೆ ಹೆಚ್ಚಿನ ಅನುದಾನ, ಮೂಲಸೌಕರ್ಯ ಮತ್ತು ಉದ್ಯೋಗಾವಕಾಶಗಳನ್ನು ಒದಗಿಸಲು ನಿರಂತರವಾಗಿ ಪ್ರಯತ್ನಿಸಿದ್ದಾರೆ. ಪ್ರಾದೇಶಿಕ ಅಸಮಾನತೆ ನಿವಾರಣೆ ಹಾಗೂ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗೆ ಅವರು ಸಲ್ಲಿಸಿರುವ ಸೇವೆ ವಿಶೇಷವಾಗಿದೆ.

ಕಾಂಗ್ರೆಸ್ ಪಕ್ಷದ ಸಂಘಟನೆ ಬಲವರ್ಧನೆಯಲ್ಲಿಯೂ ಈಶ್ವರ ಖಂಡ್ರೆ ಅವರ ಪಾತ್ರ ಮಹತ್ವದ್ದಾಗಿದೆ. ಪಕ್ಷದ ತತ್ವಸಿದ್ಧಾಂತಗಳನ್ನು ಜನರಿಗೆ ತಲುಪಿಸುವುದು, ಕಾರ್ಯಕರ್ತರನ್ನು ಸಂಘಟಿಸುವುದು ಮತ್ತು ಚುನಾವಣಾ ಸಂದರ್ಭಗಳಲ್ಲಿ ಪಕ್ಷವನ್ನು ಬಲಪಡಿಸುವ ಕಾರ್ಯದಲ್ಲಿ ಅವರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಪಕ್ಷದ ಹೈಕಮಾಂಡ್‌ನ ವಿಶ್ವಾಸ ಗಳಿಸಿರುವ ನಾಯಕರಾಗಿ ಗುರುತಿಸಿಕೊಂಡಿದ್ದಾರೆ.ಸರಳತೆ, ಸೌಜನ್ಯ ಮತ್ತು ಜನರೊಂದಿಗೆ ಬೆರೆತು ನಡೆಯುವ ಗುಣಗಳು ಈಶ್ವರ ಖಂಡ್ರೆ ಅವರ ರಾಜಕೀಯ ವ್ಯಕ್ತಿತ್ವದ ಪ್ರಮುಖ ಅಂಶಗಳಾಗಿವೆ. ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಅವರ ಕಾರ್ಯವೈಖರಿ ಅವರನ್ನು ಜನಪ್ರಿಯ ನಾಯಕನನ್ನಾಗಿ ರೂಪಿಸಿದೆ.

ಅಧಿಕಾರವನ್ನು ಸೇವೆಯ ಸಾಧನವಾಗಿ ಬಳಸಿಕೊಂಡು ಜನರ ವಿಶ್ವಾಸವನ್ನು ಉಳಿಸಿಕೊಂಡಿರುವುದು ಅವರ ದೊಡ್ಡ ಸಾಧನೆಯಾಗಿದೆ.ಇದೀಗ ಮೂರನೇ ಬಾರಿಗೆ ಸಚಿವರಾಗಿ ಆಯ್ಕೆಯಾಗಿರುವ ಈಶ್ವರ ಖಂಡ್ರೆ ಅವರ ಮೇಲೆ ರಾಜ್ಯದ ಜನತೆ ಮತ್ತು ವಿಶೇಷವಾಗಿ ಭಾಲ್ಕಿ ಕ್ಷೇತ್ರದ ಜನರು ಹೆಚ್ಚಿನ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಅವರ ಅನುಭವ, ಆಡಳಿತಾತ್ಮಕ ಸಾಮರ್ಥ್ಯ ಮತ್ತು ಅಭಿವೃದ್ಧಿ ದೃಷ್ಟಿಕೋನ ರಾಜ್ಯದ ಪ್ರಗತಿಗೆ ಮತ್ತಷ್ಟು ವೇಗ ನೀಡಲಿದೆ ಎಂಬ ವಿಶ್ವಾಸ ವ್ಯಕ್ತವಾಗುತ್ತಿದೆ.

ಒಟ್ಟಾರೆ, ಮೂರನೇ ಬಾರಿಗೆ ಸಚಿವ ಸ್ಥಾನ ಅಲಂಕರಿಸಿರುವ ಈಶ್ವರ ಖಂಡ್ರೆ ಅವರ ರಾಜಕೀಯ ಪಯಣವು ಜನಸೇವೆ, ಅಭಿವೃದ್ಧಿ ಮತ್ತು ನಾಯಕತ್ವದ ಯಶೋಗಾಥೆಯಾಗಿದ್ದು, ಕಲ್ಯಾಣ ಕರ್ನಾಟಕ ಭಾಗದ ರಾಜಕೀಯ ಇತಿಹಾಸದಲ್ಲಿ ಮಹತ್ವದ ಅಧ್ಯಾಯವಾಗಿ ಉಳಿಯಲಿದೆ.



## ಕಾಮುಕ ಸ್ಟೀವ್ ಆರೋನ್ ರಾಜ್ ನನ್ನು ಬಂಧಿಸುವಂತೆ ಲೈಂಗಿಕ ದೌರ್ಜನ್ಯ ಸಂತ್ರಸ್ತೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಪೀಣ್ಯ ದಾಸರಹಳ್ಳಿ



'ಸಿಲ್ವೆಪುರದ ನಿವಾಸಿ ಸ್ಟೀವ್ ಆರೋನ್ ರಾಜ್ ಎಂಬುವವನಿಂದ ನನಗೆ ಲೈಂಗಿಕ ದೌರ್ಜನ್ಯವಾಗಿದ್ದು ನನ್ನ ಮೈ ಮುಟ್ಟುವುದು, ನನ್ನನ್ನು ತಬ್ಬಿಕೊಳ್ಳುವುದನ್ನು ಮಾಡಿ ನನ್ನ ಖಾಸಗಿ ಅಂಗಗಳನ್ನು ಮುಟ್ಟಿ ನನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ಹಾಗಾಗಿ ನನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಸ್ಟೀವ್ ಆರೋನ್ ರಾಜ್ ಅನ್ನು ಬಂಧಿಸಿ ಅವನ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು', ಹೆಸರೇಳಲು ಇಚ್ಚಿಸದ ಲೈಂಗಿಕ ದೌರ್ಜನ್ಯದ ಸಂತ್ರಸ್ತೆ ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಂತ್ರಸ್ತೆ, 'ನನ್ನ ಹುಟ್ಟುಹಬ್ಬಕ್ಕೆ ಟ್ರೀಟ್ ಕೊಡಿಸುತ್ತೇನೆ ಎಂದು ಕೆಎ–04 ಎಂ.ಕ್ಯೂ–0239 ಕಾರಿನಲ್ಲಿ ಕರೆದು–ಕೊಂಡು ಹೋಗಿ ನನ್ನ ಮೈ ಮುಟ್ಟುವುದು, ನನ್ನನ್ನು ತಬ್ಬಿಕೊಳ್ಳುವುದನ್ನು ಮಾಡಿ ನನ್ನ ಖಾಸಗಿ ಅಂಗಗಳನ್ನು ಮುಟ್ಟಿ ನನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ಹಾಗೆಯೇ ಈ ವಿಷಯವನ್ನು ನಿಮ್ಮ ಮನೆಯಲ್ಲಿ ಹೇಳಿದರೆ ನಿನ್ನನ್ನು ಹಾಗೂ ನಿಮ್ಮ ಮನೆಯವರನ್ನು ಕೊಲೆ ಮಾಡುತ್ತೇನೆ ಎಂದು ಹೆದರಿಸಿದ್ದ. ಹಾಗಾಗಿ ನಾನು ಭಯಪಟ್ಟು ಈ ವಿಷಯವನ್ನು ಮನೆಯಲ್ಲಿ ತಿಳಿಸಿರಲಿಲ್ಲ. ಇವನ ದೌರ್ಜನ್ಯ ಹೆಚ್ಚಾದಾಗ ವಿಧಿ ಇಲ್ಲದೆ ಮನೆಯವರಿಗೆ ಈ ವಿಷಯವನ್ನು ತಿಳಿಸಬೇಕಾಯಿತು. ಈ ಬಗ್ಗೆ ಸೋಲದೇವನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದೇವೆ. ಪೊಲೀಸರು ಆ ಕಾಮುಕನನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು', ಎಂದು ಆಗ್ರಹಿಸಿದರು

ಸಂತ್ರಸ್ತೆಯ ತಾಯಿ ಮಾತನಾಡಿ, 'ಸ್ಟೀವ್ ಆರೋನ್ ರಾಜ್ ಎಂಬುವವನು ನಮ್ಮ ಮನೆಗೆ ಬಂದು ಹೋಗುತ್ತಿದ್ದ. ಪಾನಿಪುರಿ ತಿನ್ನುವ ಸಲುವಾಗಿ ಕರೆದುಕೊಂಡು ಹೋಗಿ ಆ ಸಮಯದಲ್ಲಿ ನನ್ನ ಮಗಳ ಕೈ ಹಿಡಿದು ನೀನು ದಪ್ಪ ಇದ್ದೀಯ ಬೇರೆ ಯಾರು ನಿನ್ನನ್ನು ಒಪ್ಪಿಕೊಳ್ಳುವುದಿಲ್ಲ ನಾನು ಮಾತ್ರ ನಿನ್ನನ್ನು ಒಪ್ಪಿಕೊಳ್ಳಬಹುದು ಎಂದು ಹೇಳಿ ನನ್ನ ಮಗಳ ಮೈ ಕೈ ಮುಟ್ಟಿ ಲೈಂಗಿಕವಾಗಿ ಅಸಭ್ಯವಾಗಿ ವರ್ತಿಸಿದ್ದು ಇದಕ್ಕೂ ಮುಂಚೆ ಕೂಡ ಮನೆಗೆ ಬಂದು ನನ್ನ ಮಗಳನ್ನು ಬಲವಂತವಾಗಿ ಪಕ್ಕದಲ್ಲಿ ಕುಳಿಸಿಕೊಂಡು ಅವಳ ಇಚ್ಛೆಯ ವಿರುದ್ಧವಾಗಿ ಮೈಕೈ ಮತ್ತು ಎದೆಯನ್ನು ಮುಟ್ಟುವ ಮೂಲಕ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ', ಎಂದು ಹೇಳಿದರು.

ಲೈಂಗಿಕ ದೌರ್ಜನ್ಯದ ವಿಷಯವನ್ನು ನಿಮ್ಮ ಮನೆಯವರಿಗೆ ಹೇಳಿದರೆ ನಿನ್ನನ್ನು ಹಾಗೂ ನಿಮ್ಮ ತಂದೆ ತಾಯಿಯನ್ನು ಕೊಲೆ ಮಾಡುತ್ತೇನೆ ಎಂದು ಬೆದರಿಕೆ ಹಾಕಿರುತ್ತಾನೆ. ಹಾಗಾಗಿ ಆತನಿಗೆ ಹೆದರಿ ನಮ್ಮ ಮಗಳು ಈ ವಿಚಾರವನ್ನು ನಮಗೆ ತಿಳಿಸದೆ ಸುಮ್ಮನಿದ್ದಳು. ಸ್ಟೀವ್ ಆರೋನ್ ರಾಜ್ ವಿರುದ್ಧ ಸೋಲದೇವನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು ನನ್ನ ಮೇಲೆ ದೂರು ನೀಡಿದ ನಿಮ್ಮನ್ನು ನಾನು ಬಿಡುವುದಿಲ್ಲ, ನಿನ್ನನ್ನು ಸೇರಿ ನಿಮ್ಮ ಮನೆಯವರನ್ನು ಕೊಲೆ ಮಾಡುತ್ತೇನೆ ಎಂದು ಊರಿನವರ ಬಳಿ ಹೇಳಿದ್ದಾನೆ. ದೂರು ದಾಖಲಾದ ಮೇಲೆ ಸ್ಟೀವ್ ಆರೋನ್ ರಾಜ್ ಕಣ್ಮರೆಯಾಗಿದ್ದು ಆತನನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ನಮಗೆ ನ್ಯಾಯ ಸಿಗುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ', ಎಂದು ಸಂತ್ರಸ್ತೆ ತಾಯಿ ತಿಳಿಸಿದರು.

ಸ್ಟೀವ್ ಆರೋನ್ ರಾಜ್ ರವರ ಚಿಕ್ಕಪ್ಪ ವಕೀಲರಾಗಿರುವ ಕಾರಣ ಅವನು ಕಣ್ಮರೆಯಾಗಲು ಸಹಕರಿಸುತ್ತಿದ್ದು ಸ್ಟೀವ್ ಆರೋನ್ ರಾಜ್ ನಿಂದ ನನ್ನ ಮಗಳಿಗಾಗಿರುವ ಅನ್ಯಾಯದ ಬಗ್ಗೆ ಹಾಗೂ ದೌರ್ಜನ್ಯದ ಬಗ್ಗೆ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ. ನಾಗಲಕ್ಷ್ಮಿ ಚೌದರಿ ರವರನ್ನು ಭೇಟಿ ಮಾಡಿ ನ್ಯಾಯ ಕೇಳುತ್ತೇವೆ. ಹೆಣ್ಣು ಮಕ್ಕಳ ಬಗ್ಗೆ ವಿಶೇಷ ಕಾಳಜಿ ಇರುವ ಡಾ. ನಾಗಲಕ್ಷ್ಮಿ ಚೌದ್ರಿ ಅವರು ನಮಗೆ ನ್ಯಾಯ ಕೊಡಿಸುತ್ತಾರೆ ಎಂಬ ನಂಬಿಕೆ ನಮಗಿದೆ. ಇಂತಹ ಕಾಮುಕರನ್ನು ಮಟ್ಟ ಹಾಕದಿದ್ದಲ್ಲಿ ಇಂತಹವರು ಸಮಾಜದ ಹೆಣ್ಣು ಮಕ್ಕಳನ್ನು ಬಿಡುವುದಿಲ್ಲ. ಮುಂದಿನ ದಿನಗಳಲ್ಲಿ ನಮ್ಮ ಮಗಳಿಗೆ ಆಗಿರುವ ಅನ್ಯಾಯ ಬೇರೆ ಹೆಣ್ಣು ಮಕ್ಕಳಿಗೆ ಆಗಬಾರದು. ಹಾಗಾಗಿ ಆತನಿಗೆ ಕಠಿಣ ಶಿಕ್ಷೆ ಆಗುವವರೆಗೂ ನಾವು ಅವನನ್ನು ಬಿಡುವುದಿಲ್ಲ', ಎಂದು ಹೇಳಿದರು.

## ನವಜಾತ ಶಿಶುವಿನಲ್ಲಿ ಚಯಾಪಚಯ ನ್ಯೂನ್ಯತೆ ಆರಂಭಿಕ ಹಂತದಲ್ಲೇ ಪತ್ತೆ : ಡಾ.ಸುರೇಂದ್ರ ಬಾಬು

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 03: ನವಜಾತ ಶಿಶುವಿನಲ್ಲಿ ಜನ್ಮಜಾತ ಚಯಾಪಚಯ ನ್ಯೂನ್ಯತೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚುವುದು ಶಿಶುವಿನ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಅತ್ಯಂತ ಅವಶ್ಯಕವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.ಜೂನ್ 02ರ ಮಂಗಳವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣ ಸಭಾಂಗಣದಲ್ಲಿ ಜನ್ಮಜಾತ ಚಯಾಪಚಯ ನ್ಯೂನ್ಯತೆಗಳನ್ನು ಪತ್ತೆ ಹಚ್ಚುವ ವಿಧಾನಗಳ ಕುರಿತು ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ನವಜಾತ ಶಿಶುಗಳಲ್ಲಿ ಆರೋಗ್ಯ ಸ್ಥಿತಿಯ ಜೈವಿಕ ಕ್ರಿಯೆಯಲ್ಲಿ (ಚಯಾಪಚಯ) ಕೆಲವು ಜನ್ಮಜಾತ ದೋಷಗಳನ್ನು ನಿರ್ಲಕ್ಷಿಸಿದರೆ ಮಗುವಿನ ಕುಂಠಿತ ಬೆಳವಣಿಗೆಗೆ ಕಾರಣವಾಗುತ್ತದೆ. ಹೆರಿಗೆ ಸಮಯದಲ್ಲಿ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಪ್ರಯೋಗಾಲಯ ಸೇವೆ ಮೂಲಕ ಪತ್ತೆ ಹಚ್ಚಿ ಚಿಕಿತ್ಸೆ ನೀಡುವ ಸೌಲಭ್ಯವನ್ನು ಕರ್ನಾಟಕ ಸರಕಾರವು ಕಲ್ಯಾಣ ಕರ್ನಾಟಕ ಹಾಗೂ ಗಣಿ ಭಾದಿತ ಜಿಲ್ಲೆಗಳಿಗೆ ಮೊದಲ ಆಧ್ಯತೆ ನೀಡಿ ಆರಂಭಿಸಿದ್ದು, ಮಗುವಿನ ಬೆಳವಣಿಗೆಗೆ ಪೂರಕವಾದ ಈ ಸೌಲಭ್ಯವನ್ನು ಪಡೆಯಲು ಹೆಚ್ಚು ಜಾಗೃತಿ ಮೂಡಿಸಬೇಕು. ಅಲ್ಲದೆ ಸರ್ಕಾರದ ಈ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಲು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸಬೇಕೆಂದರು.

ಈ ವೇಳೆ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ಮಗು ಜನಿಸಿದ ತಕ್ಷಣವೇ ಕೈಗೊಳ್ಳುವ ನವಜಾತ ಶಿಶು ತಪಾಸಣೆ ಮೂಲಕ ಈ ದೋಷಗಳನ್ನು ಮೊದಲೇ ಪತ್ತೆ ಹಚ್ಚಬಹುದಾಗಿದೆ. ಥೈರಾಯಿಡ್ ಕಾಯಿಲೆಯನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿದರೆ ನಿರ್ದಿಷ್ಟ ಆಹಾರ ಪದ್ಧತಿ ಮತ್ತು ಔಷಧಿಗಳ ಮೂಲಕ ಮಗುವಿನ ಸಾಮಾನ್ಯ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಬಹುದಾಗಿದೆ. ಆಸ್ಪತ್ರೆಗೆ ಬರುವ ತಾಯಂದಿರು ಪಾಲಕರಿಗೆ ತಮ್ಮ ಮಗುವಿಗೆ ಇಂತಹ ಸಮಸ್ಯೆಗಳ ಬಗ್ಗೆ ಅನುಮಾನವಿದ್ದರೆ, ಕೂಡಲೇ ಸರ್ಕಾರಿ ಆಸ್ಪತ್ರೆಯ ಮಕ್ಕಳ ತಜ್ಞರ ಸಲಹೆಯನ್ನು ಪಡೆಬೇಕೆಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮಹಮ್ಮದ್ ಶಾಕೀರ್, ಯುಎನ್‌ಡಿಪಿ ರಾಕೇಶ್, ಡಿಪಿಸಿ ಹಾಗೂ ಸಿಪಿಓ ಬಸವರಾಜಪ್ಪಗೌಡ, ಎಮ್‌ಎನ್‌ಡಿ ಜಿಲ್ಲಾ ವ್ಯವಸ್ಥಾಪಕ ಗುರುಗುಪ್ಪಾ ಸೇರಿದಂತೆ ಜಿಲ್ಲೆಯ ವಿವಿಧ ವೈದ್ಯಕೀಯ ಪ್ರಯೋಗ ಶಾಲಾ ತಂತ್ರಜ್ಞರು ತರಬೇತಿ ಕಾರ್ಯಾಗಾರದಲ್ಲಿ ಇದ್ದರು.

## ನಾಡ ಕಚೇರಿಯಿಂದ ತ್ವರಿತ ಸೇವೆ:ರಾಜ್ಯದಲ್ಲಿಯೇ ಕಲಬುರಗಿ ನಂಬರ್–1

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.03: ಅಟಲ್‌ಜೀ ಜನಸ್ನೇಹಿ ಕೇಂದ್ರದ ಮೂಲಕ ಮೇ–2026ರ ಮಾಹೆಯಲ್ಲಿ ಸ್ವೀಕರಿಸಿದ 39,363 ಅರ್ಜಿಗಳಲ್ಲಿ 38,551 ಅರ್ಜಿಗಳನ್ನು ಕಾಲಮಿತಿಯಲ್ಲಿಯೇ ವಿಲೇವಾರಿ ಮಾಡಿ ಶೇ.97.94ರಷ್ಟು ಪ್ರಗತಿ ಸಾಧಿಸುವ ಮೂಲಕ ರಾಜ್ಯದಲ್ಲಿಯೇ ಅರ್ಜಿ ವಿಲೇವಾರಿಯಲ್ಲಿ ಕಲಬುರಗಿ ಜಿಲ್ಲೆ ಮತ್ತೆ ನಂಬರ್–1 ಸ್ಥಾನ ಪಡೆದಿದೆ.

ನಾಡ ಕಚೇರಿಯಿಂದ ಕಂದಾಯ ಇಲಾಖೆಯ 43 ಸೇವೆ ನೀಡಲು ಮೇ –2026ರ ಮಾಹೆಯಲ್ಲಿ ಸ್ವೀಕರಿಸಲಾಗಿರುವ ಅರ್ಜಿಗಳನ್ನು ನಿಗಧಿತ ಅವಧಿಯಲ್ಲಿ 9.48 ವಿಲೇವಾರಿ ಸೂಚ್ಯಂಕದ ಪ್ರಕಾರ ವಿಲೇವಾರಿ ಮಾಡುವ ಮೂಲಕ ಈಶಾನ್ಯದ ತುದಿಯಲ್ಲಿರುವ ಕಲಬುರಗಿ ಜಿಲ್ಲೆ ಸಾರ್ವಜನಿಕರ ಸೇವೆ ವಿಲೇವಾರಿ ಮತ್ತು ಮಾದರಿ ಆಡಳಿತದ ಮೂಲಕ ಮತ್ತೆ ರಾಜ್ಯದ ಗಮನ ಸೆಳೆದಿದೆ.

ಕಳೆದ 2025ರ ಜುಲೈ, ಡಿಸೆಂಬರ್ ಮಾಹೆಯಲ್ಲಿಯೂ ಕಲಬುರಗಿ ಜಿಲ್ಲೆ ಅಟಲ್‌ಜೀ ಜನಸ್ನೇಹಿ ಕೇಂದ್ರದಿಂದ ಅರ್ಜಿ ವಿಲೇವಾರಿಯಲ್ಲಿ ಮೊದಲನೇ ಸ್ಥಾನ ಪಡೆದಿತ್ತು. ಇದೀಗ ಮತ್ತೆ ವಿಲೇವಾರಿಯಲ್ಲಿ ಅಗ್ರ ಸ್ಥಾನ ಪಡೆದುಕೊಂಡಿದ್ದು, ಕಲಬುರಗಿ ಜಿಲ್ಲಾಡಳಿತ ಕಾರ್ಯವೈಖರಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.




ಕಲಬುರಗಿ ಜಿಲ್ಲೆಯ ಅಫಜಲಪೂರ ತಾಲೂಕಿನಲ್ಲಿ ಸ್ವೀಕೃತ 3,572 ರಲ್ಲಿ 3,516, ಆಳಂದನಲ್ಲಿ 4,203 ರಲ್ಲಿ 4,116, ಚಿಂಚೋಳಿಯಲ್ಲಿ ಸ್ವೀಕೃತ 3,326ರಲ್ಲಿ 3,297, ಚಿತ್ತಾಪುರನಲ್ಲಿ ಸ್ವೀಕೃತ 3,355ರಲ್ಲಿ 3,324, ಜೇವರ್ಗಿಯಲ್ಲಿ ಸ್ವೀಕೃತ 2,078 ರಲ್ಲಿ 2,009, ಕಲಬುರಗಿಯಲ್ಲಿ ಸ್ವೀಕೃತ 10,557 ರಲ್ಲಿ 10,212, ಕಾಳಗಿಯಲ್ಲಿ ಸ್ವೀಕೃತ 2,096 ರಲ್ಲಿ 2,056, ಕಮಲಾಪುರನಲ್ಲಿ ಸ್ವೀಕೃತ 2,754ರಲ್ಲಿ 2,709, ಸೇಡಂನಲ್ಲಿ ಸ್ವೀಕೃತ 3,806ರಲ್ಲಿ 3,750, ಶಹಾಬಾದನಲ್ಲಿ ಸ್ವೀಕೃತ 1,781 ರಲ್ಲಿ 1,761, ಯಡ್ರಾಮಿಯಲ್ಲಿ ಸ್ವೀಕೃತ 1,835ರಲ್ಲಿ 1,801 ಅರ್ಜಿ ವಿಲೇವಾರಿ ಮಾಡುವ ಜಿಲ್ಲೆಯ ಜನತೆಗೆ ನಾಡ ಸೇವೆ ಕಚೇರಿ ತ್ವರಿತವಾಗಿ ಸ್ಪಂದಿಸಿದಿರುವುದು ಅಂಕಿ ಅಂಶಗಳು ಖಚಿತಪಡಿಸಿವೆ.

ಜಿಲ್ಲೆಯಲ್ಲಿನ ಈ ಕಾರ್ಯ ಸಾಧನೆಗೆ ನಾಡ ಕಛೇರಿ ಮತ್ತು ಆಟಲ್‌ಜೀ ಜನಸ್ನೇಹಿ ಕೇಂದ್ರದ ಸಿಬ್ಬಂದಿಗಳ ಸಹಕಾರ, ಕಾರ್ಯತತ್ಪರತೆ ಕಾರಣವಾಗಿರುತ್ತದೆ. ಇದಕ್ಕಾಗಿ ಶ್ರಮಿಸಿದ ಎಲ್ಲಾ ಸಿಬ್ಬಂದಿ ವರ್ಗದವರಿಗೆ ಅಭಿನಂದನೆ ಸಲ್ಲಿಸಿರುವ ಡಿ.ಸಿ ಇಕ್ರಮ್ ಶರೀಫ್ ಅವರು, ಮುಂದಿನ ದಿನಗಳಲ್ಲಿ ಇದೇ ರೀತಿಯ ಸಾಧನೆ ಮಾಡುವಂತೆ ಹುರಿದುಂಬಿಸಿದಲ್ಲದೆ ಸಾರ್ವಜನಿಕರ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸುವ ಮನೋಭಾವ ಬೆಳೆಸಿಕೊಳ್ಳುವಂತೆ ಸಿಬ್ಬಂದಿಗಳಿಗೆ ಕರೆ ನೀಡಿದ್ದಾರೆ.

ಟಾಪ್ 10ನಲ್ಲಿ ಕಲ್ಯಾಣದ 4 ಜಿಲ್ಲೆಗಳು: ಇನ್ನು ರಾಜ್ಯದಾದ್ಯಂತ ಜಿಲ್ಲಾವಾರು ಅರ್ಜಿ ವಿಲೇವಾರಿ ಪಟ್ಟಿ ಅವಲೋಕಿಸಿದಾಗ ಅಗ್ರ 10 ರಲ್ಲಿ ಕಲಬುರಗಿ ನಂಬರ್ 1 ಸ್ಥಾನದಲ್ಲಿದರೆ, ಶೇ.8.71 ವಿಲೇವಾರಿ ಸೂಚ್ಯಂಕದೊಂದಿಗೆ ವಿಜಯನಗರ ಜಿಲ್ಲೆ ಮೂರನೇ, ಶೇ.8.29 ವಿಲೇವಾರಿ ಸೂಚ್ಯಂಕದೊಂದಿಗೆ ಬಳ್ಳಾರಿ ಜಿಲ್ಲೆ ನಾಲ್ಕನೇ ಹಾಗೂ ಶೇ.6.52 ವಿಲೇವಾರಿ ಸೂಚ್ಯಂಕದೊಂದಿಗೆ ರಾಯಚೂರು ಜಿಲ್ಲೆ ಏಳನೇ ಸ್ಥಾನ ಪಡೆದಿದೆ. ಈ ಮೂಲಕ ಕಲ್ಯಾಣ ಕರ್ನಾಟಕ ಭಾಗದ 4 ಜಿಲ್ಲೆಗಳು ಸಾರ್ವಜನಿಕ ಸೇವೆ ನೀಡುವಲ್ಲಿ ಮುಂಚೂಣಿಯಲ್ಲಿ ಕಾಣಿಸಿಕೊಂಡಂತಾಗಿದೆ.

## ಪ್ರೀತಿಯ ಮಾತುಗಳೆ ನೆಮ್ಮದಿಯ ಬದುಕಿನ ಜೀವಾಳ:ಚಂದ್ರಶೇಖರ ಕಾಳನ್ನವರ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

3– ಇಂದಿನ ಆಧುನಿಕ ತಂತ್ರಜ್ಞಾನದ ಕಾಲಘಟ್ಟದಲ್ಲಿ ಹಿರಿಯರು ಕೌಟುಂಬಿಕ ಮತ್ತು ಸಾಮಾಜಿಕ ಸಾಮರಸ್ಯದ ಬದುಕಿಗೆ ಪ್ರೀತಿಯ ಮಾತುಗಳಿಂದ ನೆಮ್ಮದಿ ಪಡೆಯಲು ಸಾಧ್ಯವಿದ್ದು ಕೌಟುಂಬಿಕ ಸದಸ್ಯರಲ್ಲಿ ಮುಕ್ತ ಸಂವಹನ ಅಗತ್ಯವಾಗಿದೆ ಎಂದು ಉಪನ್ಯಾಸಕ ಡಾ. ಚಂದ್ರಶೇಖರ ಕಾಳನ್ನವರ ಹೇಳಿದರು.


ನಗರದ ಬಾಗಲಕೋಟಿ ಜಮಖಾನ ಆವರಣದಲ್ಲಿ ನಡೆದ ಬಾಗಲಕೋಟೆ ಹಿರಿಯ ನಾಗರಿಕರ ಸೇವಾ ಸಂಘದ ಮಾಸಿಕ ಉಪನ್ಯಾಸ ಕಾರ್ಯಕ್ರಮದಲ್ಲಿ ಇಳೆ ಸಂಜೆಯಲಿ ಬದುಕಿನ ನೆಮ್ಮದಿಗಾಗಿ ಹಿರಿಯರಿಗೆ ಕುಟುಂಬ ಸದಸ್ಯರೊಂದಿಗೆ ಹೊಂದಾಣಿಕೆ ಅನಿವಾರ್ಯತೆ" ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಅವರು, ಇಂದು ಕುಟುಂಬದ ಸದಸ್ಯರು ತಮ್ಮ ಮನೆಯ ತಂದೆ–ತಾಯಿ ಮತ್ತು ಹಿರಿಯರನ್ನು ಪ್ರೀತಿಯಿಂದ ಪೋಷಿಸುವ ಪಾಲನೆ ಮಾಡುವ ಪರಂಪರೆ, ಸಂಪ್ರದಾಯ ನಮ್ಮ ಕನ್ನಡ ನೆಲದ ಗುಣಧರ್ಮವಾಗಿದೆ. ಇಂದಿನ ಕೌಟುಂಬಿಕ ಜಗತ್ತು ಮೊಬೈಲ್, ಟಿ.ವಿ, ಕಂಪ್ಯೂಟರ್ ಮಂತ್ರಗಳಲ್ಲಿ ತೊಡಗಿರುವದರಿಂದ ಮನೆಯ ಹಿರಿಯರಿಗೆ ಕುಟುಂಬದಲ್ಲಿ ನೆಮ್ಮದಿ ಸಾಮರಸ್ಯದ ಬದುಕು ಸಾಗಿಸಲು ಕಷ್ಟವಾಗುತ್ತಿದೆ ಎಂಬ ವಾತಾವರಣ ಸೃಷ್ಟಿಯಾಗುತ್ತಿದೆ ಎಂದರು.

ಕುಟುಂಬದ ಸಂಬಂಧಗಳು ವ್ಯಕ್ತಿಯ ಭಾವನಾತ್ಮಕ ಯೋಗಕ್ಷೇಮ, ಮಾನಸಿಕ ಆರೋಗ್ಯ ಮತ್ತು ಸಾಮಾಜಿಕ ಬೆಳವಣಿಗೆಗೆ ಬುನಾದಿಯಾಗಿದೆ. ಸಕಾರಾತ್ಮಕ ಸಂಬಂಧಗಳು ವ್ಯಕ್ತಿಗೆ ಸುರಕ್ಷತೆಯ ಭಾವನೆಯನ್ನು ನೀಡುತ್ತವೆ ಮತ್ತು ಒತ್ತಡವನ್ನು ನಿಭಾಯಿಸಲು ಸಹಾಯ ಮಾಡುತ್ತವೆ. ಕೌಟುಂಬಿಕ ಸದಸ್ಯರಲ್ಲಿ ಮುಕ್ತ ಸಂವಹನ ಅಗತ್ಯವಾಗಿದ್ದು ಪರಸ್ಪರ ಗೌರವದಿಂದ ಕೌಟುಂಬಿಕ ಬಾಂಧವ್ಯವನ್ನು ಗಟ್ಟಿಗೊಳಿಸಬೇಕಾದ ಅನಿವಾರ್ಯತೆ ಇದೆ, ಕುಟುಂಬವು ಸಮಾಜದ ಬಹು ಮುಖ್ಯ ಅಂಗವಾಗಿದೆ. ಬಹಳಷ್ಟು ಸಂದರ್ಭಗಳಲ್ಲಿ ಮಕ್ಕಳು ಜನರೊಂದಿಗೆ ಬೆರೆತು ಸಾಮಾಜಿಕವಾಗಿ ಸಮರ್ಥರಾಗಲು ಕುಟುಂಬ ಒಂದು ಅಗತ್ಯ ಸಂಸ್ಥೆಯಾಗಿ ನಿಲ್ಲುತ್ತದೆ ಎಂದು ಕಾಳನ್ನವರ ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಹಿರಿಯ ನಾಗರಿಕರ ಸೇವಾ ಸಂಘದ ಅಧ್ಯಕ್ಷ ಮುರಿಗೆಪ್ಪ ಹುಲಗಬಾಳ, ಸಾಮಾಜಿಕ ಮತ್ತು ಕೌಟುಂಬಿಕ ವ್ಯವಸ್ಥೆಯಲ್ಲಿ ಹಿರಿಯರಿಗೆ ಸೂಕ್ತವಾದ ಪ್ರೀತಿಯಿಂದ ಸ್ವಾಭಿಮಾನದ ಜೀವನ ನಡೆಸಲು ಕುಟುಂಬದ ಸದಸ್ಯರ ಹೊಂದಾಣಿಕೆ ಅಗತ್ಯವಾಗಿದೆ ಎಂದು ಹೇಳಿದರು.

## ಸ್ವಂತ ಹಣದಿಂದ ರಸ್ತೆ ದುರಸ್ತಿಗೊಳಿಸಿದ ಶಾಸಕ ತುನ್ನೂರಗೆ ರೈತರಿಂದ ಕೃತಜ್ಞತೆ ಸಲ್ಲಿಕೆ

• ಮಲ್ಲಮ್ಮ ನುಡಿ ವಾರ್ತೆ ವಡಗೇರಾ





ತಾಲೂಕಿನ ಊಳ್ಳೆ ಸೂಗೂರು ಗ್ರಾಮದಲ್ಲಿ ರೈತರ ಜಮೀನುಗಳಿಗೆ ತೆರಳುವ ರಸ್ತೆ ಸಂಪೂರ್ಣ ಹದಗೆಟ್ಟಿದ್ದು ಅದನ್ನು ದುರಸ್ತಿಗಳಿಸುವಂತೆ ರೈತರು ಶಾಸಕರಲ್ಲಿ ಮನವಿ ಮಾಡಿಕೊಂಡಿದ್ದ ಪರಿಣಾಮ ರೈತರ ಮನವಿಗೆ ಸ್ಪಂದಿಸಿ ಯಾದಗಿರಿ ಮತ ಕ್ಷೇತ್ರದ ಜನಪ್ರಿಯ ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರ ರವರು ಸ್ವಂತ ಹಣದಿಂದ ರೈತರು ಜಮೀನಿಗೆ ತೆರಳುವ ರಸ್ತೆಯನ್ನು ದುರಸ್ತಿ ಗೊಳಿಸಿದ್ದಾರೆ.ಎಂದು ಕಾಂಗ್ರೆಸ್ ಯುವ ಮುಖಂಡರಾದ ಜಲಾಲ ಸಾಬ್ ಮನಗಾರ ಊಳ್ಳೆಸೂಗುರು ತಿಳಿಸಿ ಮಾತನಾಡಿದರು.ನಮ್ಮ ಗ್ರಾಮದಲ್ಲಿ ರೈತರು ಜಮೀನುಗಳಿಗೆ ತೆರಳಲು ಸರಿಯಾದ ರಸ್ತೆ ಇಲ್ಲದ ಕಾರಣ ರೈತರಿಗೆ ತುಂಬಾ ತೊಂದರೆ ಆಗುತ್ತಿತ್ತು ಈ ಕುರಿತು ಶಾಸಕರ ಗಮನಕ್ಕೆ ತಂದಾಗ ಸ್ವಂತ ಕಾಳಜಿ ವಹಿಸಿ ಅವರೇ ಹಣವನ್ನು ನೀಡಿ ರಸ್ತೆಗೆ ಮರಮ ಹಾಕಿಸಿ ರಸ್ತೆ ದುರಸ್ತಿಗೊಳಿಸಿದ್ದು ಇದರಿಂದ ರೈತರಿಗೆ ತುಂಬಾ ಅನುಕೂಲವಾಗಿದೆ ಎಂದರು ಅವರ ಈ ರೈತ ಪರ ಕಾಳಜಿಗೆ ಊಳ್ಳೆ ಸೂಗುರು ಗ್ರಾಮದ ಸಾರ್ವಜನಿಕರು ರೈತರು ಶಾಸಕರಿಗೆ ಕೃತಜ್ಞತೆಯನ್ನು ಸಲ್ಲಿಸಿದ್ದಾರೆ.

## ಹಾವು ಕಡಿದು ರೈತ ಮಹಿಳೆ ಸಾವು

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲ್ಲೂಕಿನ ಡಾವರಗಾಂವ ಗ್ರಾಮದ ಮಹಿಳೆ ಕವಿತಾ ರವಿಕುಮಾರ ಕಾಂಬಳೆ ಹೊಲದಲ್ಲಿ ಕೆಲಸ ಮಾಡುತ್ತಿದ್ದಾಗ ಹಾವು ಕಡಿದು ಸಾವನ್ನಪ್ಪಿದ್ದಾಳೆ.

ಮೇ. 16ರಂದು ಬೇರೆಯವರ ಹೊಲದಲ್ಲಿ ಕಳೆ ತೆಗೆಯುವ ಕೂಲಿ ಕೆಲಸ ಮಾಡುತ್ತಿದ್ದಾಗ ಹಾವು ಎರಡು ಸಾರಿ ಕಡಿದಿದೆ. ಸರ್ಕಾರಿ ಆಸ್ಪತ್ರೆಯ ವೈದ್ಯರ ಸಲಹೆ ಮೇರೆಗೆ ಹೈದರಾಬಾದ್ ನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಆದರೆ ಚಿಕಿತ್ಸೆ ಫಲಕಾರಿಯಾಗದೆ ಜೂನ್ 2 ರಂದು ಮಹಿಳೆ ಕವಿತಾ ಮೃತಪಟ್ಟಿದ್ದಾಳೆ.

ಈ ಸಂಬಂಧ ಖಟಕ ಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published & Owned by Ramesh Reddy, Printed at Metro Politan Media Company Limited, Plot No.15&16, KIADB Rayapur Industrial
Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104.
Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +919449732000.
PRGI NO. 120927
(RNINO:KARKAN/2011/ 48371)